ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೪

**ಪಟ್ಟಿ – ೦೭**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೆಯ ಅಧಿವೇಶನ**
**(ಮುಂದುವರೆದ ಉಪವೇಶನ)**

**ಸೋಮವಾರ, ದಿನಾಂಕ: ೨೦ನೇ ಮಾರ್ಚ್, ೨೦೧೭**

---

## ಸಮೂಹ – I

೧. ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

೨. ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು.

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು.

೬. ವೈದ್ಯಕೀಯ ಶಿಕ್ಷಣ ಸಚಿವರು.

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.

---

## ಪಡಿತರ ಚೀಟಿಗಳ ಬಗ್ಗೆ

**ಶ್ರೀ ಕೆ.ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು):–**

೧೦೫೦ (೭೭೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಹೊಸ ಪಡಿತರ ಚೀಟಿಗಾಗಿ ಎಷ್ಟು ಕುಟುಂಬಗಳಿಂದ ಅರ್ಜಿಗಳನ್ನು ಸ್ವೀಕರಿಸಲಾಗಿದೆ; (ಎಪಿಎಲ್ ಹಾಗೂ ಬಿಪಿಎಲ್ ಕಾರ್ಡ್‌ಗಳನ್ನು ಪಡೆದವರ ಹೆಸರುಗಳನ್ನು ಜಿಲ್ಲಾವಾರು ವಿವರ ನೀಡುವುದು)

(ಆ) ಸ್ವೀಕರಿಸಿದ ಅರ್ಜಿಗಳಲ್ಲಿ ಎಷ್ಟು ಪಡಿತರ ಚೀಟಿಗಳನ್ನು ವಿತರಿಸಲಾಗಿದೆ; (ಜಿಲ್ಲಾವಾರು ಎಪಿಎಲ್ ಹಾಗೂ ಬಿಪಿಎಲ್ ಕಾರ್ಡ್‌ದಾರರ ವಿವರವನ್ನು ನೀಡುವುದು)

(ಇ) ಪಡಿತರ ಚೀಟಿ ವಿತರಣೆಯಲ್ಲಿ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮವೇನು ? (ವಿವರ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಪ್ರವೇಶಾಭಿವೃದ್ಧಿ ಮಂಡಳಿ ಆದೇಶ ೨೦೧೩ ರ ಅಡಿಯಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳ ಸ್ಥಾಪನೆ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೦೫೧ (೮೬೩) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಪ್ರವೇಶ ಅಭಿವೃದ್ಧಿ ಮಂಡಳಿ ಆದೇಶ ೨೦೧೩ ರ ಅಡಿಯಲ್ಲಿರುವ ೧೨ಇ ಹಾಗೂ ೫ (೧) (೩) (೪) ಹಾಗೂ ೨೨ (೨) (ಇ) (ಜಿ) ರ ಕಂಡಿಕೆಗಳ ಅಡಿಯಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪನೆ ಮಾಡಲು ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಮೂಲ ಸೌಕರ್ಯ ಹಾಗೂ ಶೈಕ್ಷಣಿಕ ಅಭಿವೃದ್ಧಿಗಾಗಿ ಅನುದಾನವನ್ನು ಒದಗಿಸುವ ಅವಕಾಶಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸದರಿ ಕಂಡಿಕೆಗಳ ಅಡಿಯಲ್ಲಿ ಸರ್ಕಾರಿ / ಮಂಡಳಿ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಮೇಲ್ಕಂಡ ಕಂಡಿಕೆಗಳಲ್ಲಿ ನೀಡಿದ ಅವಕಾಶದಂತೆ ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ಶಿಕ್ಷಣಕ್ಕೆ ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅನುದಾನ ನೀಡಲು ಸರ್ಕಾರ/ ಮಂಡಳಿ ಮುಂದಾಗುವುದೇ ; ಇದ್ದರೆ, ಸರ್ಕಾರದ ಮುಂದಿರುವ ಯೋಜನೆಗಳೇನು ? (ಮಾಹಿತಿ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಸದಸ್ಯರ ನೇಮಕಾತಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೦೫೨ (೮೬೬) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೩೭೧(ಜೆ) ಅಡಿಯಲ್ಲಿ ಹೈದ್ರಾಬಾದ್–ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಸ್ಥಾಪನೆಯಾಗಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸದರಿ ಮಂಡಳಿಗೆ ನೇಮಕವಾಗುವ

ಸದಸ್ಯರು ಯಾರು, ಕ್ಷೇತ್ರಗಳು ಯಾವುವು ; ಹಾಗೂ ಸದಸ್ಯರ ನೇಮಕಾತಿ ಮಾಡುವಲ್ಲಿ ಅನುಸರಿಸುವ ನಿಯಮಗಳೇನು ಹಾಗೂ ಅವಧಿ ಎಷ್ಟು ; (ಪ್ರತ್ಯೇಕ ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಮಂಡಳಿಯಲ್ಲಿ ಇಲ್ಲಿಯವರೆಗೆ ನೇಮಕಗೊಂಡ ಸದಸ್ಯರು ಯಾರು ; (ಅವಧಿವಾರು, ಕ್ಷೇತ್ರವಾರು ವಿವರ ನೀಡುವುದು)

(ಇ) ಸದರಿ ಮಂಡಳಿಗೆ ನೇಮಕವಾಗದೆ ಬಾಕಿ ಇರುವ ಕ್ಷೇತ್ರಗಳು ಹಾಗೂ ಸದಸ್ಯರ ಮಾಹಿತಿ ನೀಡುವುದು?

## ರಾಜ್ಯದ ಆರೋಗ್ಯ ಕೇಂದ್ರಗಳಲ್ಲಿ ಮಂಜೂರಾದ, ಕಾರ್ಯನಿರ್ವಹಿಸುತ್ತಿರುವ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೦೫೩ (ಲಿಖಿ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹಾಗೂ ಉಪಕೇಂದ್ರಗಳು ಎಷ್ಟು ; ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಹಾಗೂ ಉಪಕೇಂದ್ರಗಳ ವ್ಯಾಪ್ತಿಯಲ್ಲಿ ಬರುವ ಜನಸಂಖ್ಯೆ ಎಷ್ಟು ; (ಜಿಲ್ಲಾವಾರು, ಜನಸಂಖ್ಯೆವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಹಾಗೂ ಉಪ ಕೇಂದ್ರಗಳಲ್ಲಿ ಮಂಜೂರಾದ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಹುದ್ದೆವಾರು ಮಾಹಿತಿ ನೀಡುವುದು)

(ಇ) ಹೈದ್ರಾಬಾದ್ ಕರ್ನಾಟಕ ಪ್ರದೇಶದಲ್ಲಿ ಕಿರಿಯ.ಹಿರಿಯ ಆರೋಗ್ಯ ಸಹಾಯಕರ (ಮಹಿಳೆ ಮತ್ತು ಪುರುಷ) ಮತ್ತು ಹಿರಿಯ / ಕಿರಿಯ ಔಷಧ ತಜ್ಞರ ಹುದ್ದೆಗಳನ್ನು ಕಡಿತಗೊಳಿಸಿ ನರ್ಸ್ ಅಡಿಯಲ್ಲಿ ಬೇರೆ ಕಡೆ ವರ್ಗಾವಣೆ ಮಾಡುವುದರಿಂದ ಈ ಮೊದಲೇ ಆರೋಗ್ಯ ಸೇವೆಗಳಿಂದ ವಂಚಿತರಾಗಿರುವ ಈ ಪ್ರದೇಶದಲ್ಲಿ ಮತ್ತಷ್ಟು ಗಂಭೀರ ಪರಿಣಾಮ ಬೀರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ; (ಕಾರಣಗಳ ಸಹಿತ ವಿವರ ನೀಡುವುದು)

(ಈ) ಸದರಿ ಪ್ರದೇಶದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಿರಿಯ/ ಹಿರಿಯ ಆರೋಗ್ಯ ಸಹಾಯಕರ ಹಾಗೂ ಹಿರಿಯ/ಕಿರಿಯ ಔಷಧ ತಜ್ಞರನ್ನು ಯಥಾಸ್ಥಿತಿಯಲ್ಲಿ ಮುಂದುವರೆಸಿ ಈ ಭಾಗದ ಜನರಿಗೆ ಆರೋಗ್ಯ ಸೇವೆಯನ್ನು ನೀಡಲು ಸರ್ಕಾರ ಮುಂದಾಗುವುದೆ ; ಸರ್ಕಾರದ ಮುಂದಿರುವ ಯೋಜನೆಗಳೇನು? (ಮಾಹಿತಿ ನಿಡುವುದು)

## ಕಲಬುರಗಿ ಸರ್ಕಾರಿ ನರ್ಸಿಂಗ್ ಕಾಲೇಜಿನಲ್ಲಿ ಹುದ್ದೆಗಳು ಮಂಜೂರಾಗದೆ ನಿಯೋಜನೆ ಮೇರೆಗೆ ಸೇವೆಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೦೫೪ (೮೬೫) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿಯಲ್ಲಿ ಸರ್ಕಾರಿ ನರ್ಸಿಂಗ್ ಕಾಲೇಜು ಮಂಜೂರಾಗಿದ್ದು ಯಾವಾಗ ; ಸದರಿ ಕಾಲೇಜು ಸ್ವಂತ ಕಟ್ಟಡ ಹೊಂದಿದೆಯೇ ; ಇದ್ದರೆ, ಸದರಿ ಕಾಲೇಜು ನಿರ್ಮಾಣಕ್ಕಾಗಿ ಸರ್ಕಾರದಿಂದ ಆಗಿರುವ ವೆಚ್ಚ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಕಾಲೇಜಿನಲ್ಲಿ ಮಂಜೂರಾದ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವೃಂದವಾರು, ಹುದ್ದೆವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ನರ್ಸಿಂಗ್ ಕಾಲೇಜಿನಲ್ಲಿ ಹುದ್ದೆಗಳು ಮಂಜೂರಾಗದೆ ಜಿಲ್ಲಾ ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸುತ್ತಿರುವ ಸ್ನಾತಕೋತ್ತರ ಪದವಿ ಹೊಂದಿದವರನ್ನು ನಿಯೋಜನೆ ಮೇರೆಗೆ ಕಾರ್ಯನಿವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದ್ದರೆ, ಸದರಿ ನರ್ಸಿಂಗ್ ಕಾಲೇಜಿಗೆ ಹುದ್ದೆಗಳು ಮಂಜೂರಾತಿ ಮಾಡದೆ ಇರುವುದಕ್ಕೆ ಕಾರಣಗಳೇನು ? (ಮಾಹಿತಿ ನೀಡುವುದು)

## ಕಲಬುರಗಿಯಲ್ಲಿ ಸರ್ಕಾರಿ ನರ್ಸಿಂಗ್ ಶಾಲೆಯಲ್ಲಿ ಖಾಲಿ ಬೋಧಕ-ಬೋಧಕೇತರ ಹುದ್ದೆಗಳ ಬಗ್ಗೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):-**

೧೦೫೫ (೮೬೭) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿಯಲ್ಲಿ ಸರ್ಕಾರಿ ನರ್ಸಿಂಗ್ ಶಾಲೆ ಮಂಜೂರಾಗಿದ್ದು ಯಾವಾಗ; ಸದರಿ ಶಾಲೆಯು ಸ್ವಂತ ಕಟ್ಟಡ ಹೊಂದಿದೆಯೇ ; (ಮಾಹಿತಿ ನೀಡುವುದು)

(ಆ) ಸದರಿ ಸರ್ಕಾರಿ ನರ್ಸಿಂಗ್ ಶಾಲೆಯಲ್ಲಿ ಮಂಜೂರಾದ, ಕಾರ್ಯನಿರ್ವಹಸುತ್ತಿರುವ ಹಾಗೂ ಖಾಲಿ ಇರುವ ಬೋಧಕ/ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದವಾರು, ಹುದ್ದೆವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ನರ್ಸಿಂಗ್ ಶಾಲೆಯಲ್ಲಿ ವಿದ್ಯಾರ್ಥಿಗಳ ಅನುಪಾತಕ್ಕೆ ಅನುಗುಣವಾಗಿ ಬೋಧಕ ಸಿಬ್ಬಂದಿಗಳ ಕೊರತೆ ಇರುವ ವಿಷಯ

ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಾದರೆ ಯಾವ ಕಾಲಮಿತಿಯೊಳಗೆ ಕೊರತೆ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು? (ಮಾಹಿತಿ ನೀಡುವುದು)

## ಗುತ್ತಿಗೆ ಆಧಾರದ ಶುಶ್ರೂಕಿಯರ ಖಾಯಂಯಾತಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೫೬ (೮೮೯) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಕಳೆದ ಆರೇಳು ವರ್ಷಗಳಿಂದ ಎಷ್ಟು ಶುಶ್ರೂಕಿಯರು ಕಾರ್ಯನಿರ್ವಹಿಸುತ್ತಿದ್ದಾರೆ ; ಗುತ್ತಿಗೆ ಆಧಾರದ ಮೇಲೆ ಇವರುಗಳನ್ನು ನೇಮಕ ಮಾಡಿರುವ ಆದೇಶ ಪ್ರತಿ ನೀಡುವುದು;

(ಆ) ಇವರುಗಳಿಗೆ ಪ್ರತಿ ಮಾಹೆಯಾನ ಎಷ್ಟು ವೇತನ ನೀಡಲಾಗುತ್ತಿದೆ; (ವೇತನ ಪಡೆಯುತ್ತಿರುವ ಶುಶ್ರೂಕಿಯರು ಹೆಸರು, ವಿಳಾಸದೊಂದಿಗೆ ಪಟ್ಟಿ ನೀಡುವುದು)

(ಇ) ಸದರಿ ಶುಶ್ರೂಕಿಯರು ಕಳೆದ ಆರೇಳು ವರ್ಷಗಳಿಂದ ನಿರಂತರ ಸೇವೆ ಸಲ್ಲಿಸುತ್ತಿದ್ದು ವೈದ್ಯಕೀಯ ಸೇವೆಯಲ್ಲಿ ಉತ್ತಮ ಅನುಭವ ಹೊಂದಿರುವುದು ನಿಜವಲ್ಲವೇ ;

(ಈ) ಸದರಿ ಶುಶ್ರೂಕಿಯರುಗಳ ವಯೋಮಿತಿ ಮೀರುತ್ತಿರುವುದರಿಂದ ಹಾಗೂ ಆರೇಳು ವರ್ಷಗಳಿಗಿಂತ ಹೆಚ್ಚಿನ ಸೇವೆ ಸಲ್ಲಿಸುತ್ತಿರುವುದರಿಂದ ಮಾನವೀಯತೆ ಹಾಗೂ ಅನುಭವದ ಆಧಾರದ ಮೇಲೆ ಇವರುಗಳ ಕುಟುಂಬ ನಿರ್ವಹಣೆಗೆ ಅನುಕೂಲವಾಗುವಂತೆ ಈ ಮೊದಲು ಬಳ್ಳಾರಿ ವಿಜಯನಗರ

ವೈದ್ಯಕೀಯ ಶಿಕ್ಷಣ ಸಂಸ್ಥೆ ಮತ್ತು ಸಂಜಯ್‌ಗಾಂಧಿ ವೈದ್ಯಕೀಯ ಶಿಕ್ಷಣ ಸಂಸ್ಥೆಯಲ್ಲಿ ನೇಮಕಾತಿ ಮಾಡಿಕೊಂಡಂತೆ ಇವರುಗಳನ್ನು ಸೇವೆಯಲ್ಲಿ ಖಾಯಂ ಆಗಿ ಮುಂದುವರೆಸಲು ಸರ್ಕಾರ ಚಿಂತಿಸುವುದೇ ; ಹಾಗಿದ್ದಲ್ಲಿ, ವಿವರ ನೀಡುವುದು ?

## ಮೃತ ದೇಹಗಳ ಪೋಸ್ಟ್ ಮಾರ್ಟಮ್ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೫೭ (೮೮೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಆಸ್ಪತ್ರೆಗಳಲ್ಲಿ ಮೃತ ದೇಹಗಳನ್ನು ಕೂಡಲೇ ಪೋಸ್ಟ್ ಮಾರ್ಟಮ್ ಮಾಡದೆ ಶವಾಗಾರದಲ್ಲಿ ದಿನಗಟ್ಟಲೆ ಇಟ್ಟುಕೊಂಡು ಮೃತರ ಸಂಬಂಧಿಕರಿಗೆ ಸುಖಾಸುಮ್ಮನೆ ಪೀಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು ;

(ಆ) ಸರ್ಕಾರಿ ಆಸ್ಪತ್ರೆಗಳಿಗೆ ವಿವಿಧ ಆಸ್ಪತ್ರೆಗಳಿಂದ ಪೋಸ್ಟ್ ಮಾರ್ಟಮ್‌ಗಾಗಿ ಬರುವ ಮೃತ ದೇಹಗಳನ್ನು ಪೋಸ್ಟ್ ಮಾರ್ಟಮ್ ಮಾಡಲು ಮೃತ ಸಂಬಂಧಿಕರಿಂದ ಹಣ ಸುಲಿಗೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕೈಗೊಂಡ ಕ್ರಮಗಳೇನು ;

(ಇ) ಸರ್ಕಾರಿ ರಜಾ ದಿನಗಳಲ್ಲಿ ಪೋಸ್ಟ್ ಮಾರ್ಟಮ್ ಮಾಡದೆ ಮೂರು ನಾಲ್ಕು ದಿನಗಳವರೆಗೆ ಶವಾಗಾರದಲ್ಲಿ ಮೃತದೇಹವನ್ನು ಇಟ್ಟುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಮೃತದೇಹಗಳ ಪೋಸ್ಟ್ ಮಾರ್ಟಮ್ ಸಮಯವನ್ನು ದಿನದ ೨೪ ಗಂಟೆಗಳಲ್ಲೂ ನೆರವೇರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ, ವಿವರ ನೀಡುವುದು ?

## ಜೈವಿಕ ತಂತ್ರಜ್ಞಾನದ ಕಾರ್ಯಕ್ರಮದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೫೪ (೮೮೬) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಜೈವಿಕ ತಂತ್ರಜ್ಞಾನದಿಂದ ರೂಪಿಸಲಾಗಿರುವ ಕಾರ್ಯಕ್ರಮಗಳಾವುವು ; (ವಿವರ ನೀಡುವುದು)

(ಆ) ಈ ತಂತ್ರಜ್ಞಾನದಿಂದ ನೇರವಾಗಿ ರೈತರ ಬೆಳೆಗಳಿಗೆ ಅನುಕೂಲವಾಗಲು ಕೈಗೊಂಡಿರುವ ರೂಪುರೇಷೆಗಳೇನು ;

(ಇ) ಜೈವಿಕ ತಂತ್ರಜ್ಞಾನದಡಿಯಲ್ಲಿ ಯಾವ ಯಾವ ಬೆಳೆಗಳಿಗೆ ಅನುಕೂಲವಿದೆ ; ಈ ನಿಟ್ಟಿನಲ್ಲಿ ಇದುವರೆವಿಗೆ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಮಂಡ್ಯ ಜಿಲ್ಲೆಯಲ್ಲಿ ಈ ತಂತ್ರಜ್ಞಾನದಡಿಯಲ್ಲಿ ಮಂಜೂರಾಗಿರುವ ಅನುದಾನ ಮೊತ್ತವೆಷ್ಟು ; ಖರ್ಚಾಗಿರುವ ಮೊತ್ತವೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಬಿ.ಪಿ.ಎಲ್ ಕಾರ್ಡ್‌ಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೫೯ (೮೮೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಬಿಪಿಎಲ್ ಕಾರ್ಡುದಾರರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಡು ಬಡವರಿಗಿರುವ ಬಿಪಿಎಲ್ ಕಾರ್ಡ್‌ಗಳನ್ನು ವಾಮಮಾರ್ಗದಲ್ಲಿ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಈ) ಬಿಪಿಎಲ್ ಕಾರ್ಡ್‌ನಿಂದ ಕಡು ಬಡವರಿಗೆ ಸಿಗಬೇಕಾದ ಸವಲತ್ತುಗಳನ್ನು ತಲುಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; (ವಿವರ ನೀಡುವುದು)

(ಉ) ಈ ದಂಧೆಯಲ್ಲಿ ಶಾಮೀಲಾಗಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಮಂಡ್ಯ ಜಿಲ್ಲೆಯಲ್ಲಿ ಗಂಗಾ ಕಲ್ಯಾಣ ಯೋಜನೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೬೦ (೮೯೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ದೇವರಾಜ ಅರಸು ಅಭಿವೃದ್ಧಿ ನಿಗಮದಿಂದ ಗಂಗಾ ಕಲ್ಯಾಣ ಯೋಜನೆಯಡಿ ಇದುವರೆಗೆ ಮಂಜೂರಾದ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ;

(ಆ) ಮಂಜೂರಾದ ಕೊಳವೆ ಬಾವಿಗಳಲ್ಲಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ ; ಇವುಗಳಲ್ಲಿ ಎಷ್ಟು ಕಾರ್ಯನಿರ್ವಹಿಸುತ್ತಿವೆ;

(ಇ) ಈ ಯೋಜನೆಯಲ್ಲಿ ಕೊಳವೆಬಾವಿಗಳನ್ನು ಕೊರೆಯಲು ಟೆಂಡರ್ ಗಳನ್ನು ಯಾರಿಗೆ ವಹಿಸಲಾಗಿದೆ ; (ಟೆಂಡರ್‌ದಾರರುಗಳ ವಿಳಾಸದೊಂದಿಗೆ ವಿವರ ನೀಡುವುದು)

(ಈ) ಟೆಂಡರ್‌ದಾರರು ಕೊಳವೆಬಾವಿಗಳನ್ನು ಕೊರೆಯುವ ಕೆಲಸವನ್ನು ಸಮರ್ಪಕವಾಗಿ ನಿರ್ವಹಿಸುತ್ತಿದ್ದಾರೆಯೇ ; ಇಲ್ಲದಿದ್ದಲ್ಲಿ ವಿವರ ನೀಡುವುದು ;

(ಉ) ಕೊಳವೆಬಾವಿ ಕೊರೆದಿರುವ ಬಗ್ಗೆ ಪಾವತಿ ಮಾಡಿರುವ ಬಿಲ್ಲಿನ ಮೊತ್ತವೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಜಿಲ್ಲಾ ಅಂಗವಿಕಲರ ಪುನರ್ ವಸತಿ ಕೇಂದ್ರಗಳ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೬೧ (೭೭೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜಿಲ್ಲಾ ಅಂಗವಿಕಲರ ಪುನರ್ ವಸತಿ ಕೇಂದ್ರಗಳ ಸಬಲೀಕರಣ (ಡಿಡಿಆರ್‌ಸಿ) ರಾಜ್ಯದಲ್ಲಿ ಎಷ್ಟು ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದೆ; ಇನ್ನು ಎಷ್ಟು ಜಿಲ್ಲೆಗಳಲ್ಲಿ ಪ್ರಾರಂಭವಾಗಬೇಕಿದೆ ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನಿಡುವುದು)

(ಆ) ಹಾಲಿ ಕಾರ್ಯನಿರ್ವಹಿಸುತ್ತಿರುವ ಕೇಂದ್ರಗಳಿಗೆ ಸರ್ಕಾರದಿಂದ ಇದುವರೆವಿಗೂ ಬಿಡುಗಡೆಯಾದ ಮೊತ್ತ ; ಮತ್ತು ಬಳಕೆಯಾದ ಮೊತ್ತ ಎಷ್ಟು ; (ವಿವರ ನೀಡುವುದು)

(ಇ) ಹಾಲಿ ಇರುವ ಡಿಡಿಆರ್‌ಸಿಗಳಲ್ಲಿ ಸಿಬ್ಬಂದಿ ಕೊರತೆ ಇದ್ದು, ಇದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಹಿಂದುಳಿದ ವಸತಿ ಶಾಲೆಗಳ ಹಾಗೂ ಹಾಸ್ಟೆಲ್‌ಗಳ ನಿರ್ಮಾಣ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೬೨ (೭೭೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಹಿಂದುಳಿದ ವರ್ಗಗಳ ವಸತಿ ಶಾಲೆಗಳ ಹಾಗೂ ಹಾಸ್ಟೆಲ್‌ಗಳ ನಿರ್ಮಾಣಕ್ಕೆ ಒದಗಿಸಿದ ಅನುದಾನ ಎಷ್ಟು; ಖರ್ಚಾದ ಅನುದಾನ ಎಷ್ಟು ?(ವಿವರ ನೀಡುವುದು)

(ಆ) ರಾಜ್ಯದಲ್ಲಿ ಎಲ್ಲೆಲ್ಲಿ ಹೊಸದಾಗಿ ವಸತಿ ಶಾಲೆ ಹಾಗೂ ಹಾಸ್ಟೆಲ್‌ಗಳನ್ನು ನಿರ್ಮಾಣ ಮಾಡಲಾಗಿದೆ ; (ವಿವರ ನೀಡುವುದು)

(ಇ) ನಿರ್ಮಾಣ ಮಾಡಿರುವ ವಸತಿ ಶಾಲೆ ಹಾಗೂ ಹಾಸ್ಟೆಲ್‌ಗಳನ್ನು ಪ್ರಾರಂಭ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ವಸತಿ ಶಾಲೆ ಮತ್ತು ಹಾಸ್ಟೆಲ್‌ಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಪಡಿತರ ವಿತರಣೆ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೬೩ (೭೮೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಬಾಗಲಕೋಟೆ ಜಿಲ್ಲೆಗಳಲ್ಲಿ ಒಟ್ಟು ಪಡಿತರ ವಿತರಣೆ ಮಾಡುವವರ ಸಂಘ–ಸಂಸ್ಥೆ ಅಥವಾ ಖಾಸಗಿಯವರ ಸಂಖ್ಯೆ ಎಷ್ಟು ; (ಸಂಘ–ಸಂಸ್ಥೆಗಳ ಹೆಸರು ಸಮೇತ ಅವರ ಸಂಪೂರ್ಣ ವಿವರ ಸಲ್ಲಿಸುವುದು)

(ಆ) ಸದರಿ ಪಡಿತರ ವಿತರಣಾ ಸಂಸ್ಥೆಗೆ ಅನುಮತಿ ನೀಡಲು ಇರುವ ಮಾನದಂಡವೇನು ; ಅವುಗಳನ್ನು ಅನುಸರಿಸಲಾಗಿದೆಯೇ ;

(ಇ) ವಿಜಯಪುರ ನಗರ ಪ್ರದೇಶದಲ್ಲಿ ತಿಂಗಳಲ್ಲಿ ಯಾವ ಅವಧಿಯಲ್ಲಿ ಪಡಿತರ ವಿತರಣೆ ಮಾಡಲಾಗುತ್ತದೆ ;

(ಈ) ವಿತರಕರು ತಮಗೆ ಅವಕಾಶ ಸಿಕ್ಕಾಗ ಮಾತ್ರ ವಿತರಣೆ ಮಾಡುತ್ತಿರುವುದರಿಂದ, ಬಡವರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ನಿಗಧಿತ ದಿನಾಂಕದಲ್ಲಿ ವಿತರಣೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ವೈದ್ಯಕೀಯ ಮಹಾವಿದ್ಯಾಲಯ ಪ್ರಾರಂಭ ಮಾಡುವ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೬೪ (೭೮೩) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ವೈದ್ಯಕೀಯ ಮಹಾವಿದ್ಯಾಲಯಗಳು ಇರುತ್ತದೆ ; (ಸಂಪೂರ್ಣ ವಿವರ ನೀಡುವುದು)

(ಆ) ವಿಜಪುರದಲ್ಲಿ ವೈದ್ಯಕೀಯ ಮಹಾವಿದ್ಯಾಲಯ ಪ್ರಾರಂಭಿಸಲು ಜಿಲ್ಲಾ ಆಸ್ಪತ್ರೆಯ ಹೆಸರಿನಲ್ಲಿ ಹಲವು ಖಾಲಿ ನಿವೇಶನ ಇರುವುದು, ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ವೈದ್ಯಕೀಯ ಮಹಾವಿದ್ಯಾಲಯ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದರೆ, ಯಾವ ಕಾಲಮಿತಿಯಲ್ಲಿ ಪ್ರಾರಂಭಿಸಲಾಗುವುದು ? (ವಿವರ ನೀಡುವುದು)

## ಜಿಲ್ಲಾ ಆಸ್ಪತ್ರೆಗೆ ಜಾಗದ ಒತ್ತುವರಿ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೬೫ (೭೮೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ನಗರದ ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಜಾಗವು ಅತಿಕ್ರಮಣವಾಗಿರುವುದನ್ನು ಸರ್ಕಾರವು ಒಪ್ಪಿಕೊಂಡು ಅದನ್ನು ತೆರವುಗೊಳಿಸಲಾಗುವುದು ಎಂಬ ಭರವಸೆ ನೀಡಿ ಇದುವರೆಗೆ ತೆರವುಗೊಳಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಆ) ವಿಜಯಪುರ ನಗರದ ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಜಾಗದ ಅದ್ದುಬಸ್ತಿ ಸರಹದ್ದನ್ನು ಗುರುತಿಸಲು ವಿಳಂಬವಾಗಲು ಕಾರಣವೇನು; ಯಾವ ಕಾಲಮಿತಿಯೊಳಗೆ ಸರಹದ್ದನ್ನು ಗುರುತಿಸಲಾಗುವುದು? (ವಿವರವಾದ ಮಾಹಿತಿ ನೀಡುವುದು)

## ಆಹಾರ ನಿರೀಕ್ಷಕರ ಕಾರ್ಯ ಚಟುವಟಿಕೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೬೬ (೭೮೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಆಹಾರ ನಿರೀಕ್ಷಕರ ಹಾಗೂ ಅವರ ಮೇಲಾಧಿಕಾರಿಗಳ ದಿನನಿತ್ಯದ ಕಾರ್ಯಗಳೇನು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಹಾಲು, ಹಣ್ಣು, ತರಕಾರಿ, ಸಹಿ ಪದಾರ್ಥ ಹಾಗೂ ಹೋಟೆಲ್‌ಗಳಲ್ಲಿ ಆಹಾರ ಕಲಬೆರಕೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ಸರ್ಕಾರವು ತೆಗೆದುಕೊಂಡ ಕ್ರಮಗಳೇನು ; (ವಿವರವಾದ ಮಾಹಿತಿ ನೀಡುವುದು)

(ಈ) ಆಹಾರ ನಿರೀಕ್ಷಕರ ಕಾರ್ಯಚಟುವಟಿಕೆಗೆ ಸರ್ಕಾರ ಸೂಕ್ತ ನಿರ್ದೇಶನ ನೀಡಿ ದಿಟ್ಟ ಕ್ರಮಕ್ಕೆ ಮುಂದಾಗಿದೆಯೇ ? (ವಿವರ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಪ್ರದೇಶದ ಪ್ರವಾಸೋದ್ಯಮಗಳ ಅಭಿವೃದ್ಧಿ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೬೭ (೮೩೧) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ರಲ್ಲಿ ರಾಯಚೂರು ಜಿಲ್ಲೆಗೆ ಪ್ರವಾಸೋದ್ಯಮ ಇಲಾಖೆಯಿಂದ ನೀಡಿರುವ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹೈದ್ರಾಬಾದ್– ಕರ್ನಾಟಕ ಪ್ರದೇಶಗಳಲ್ಲಿ ಪ್ರವಾಸೋದ್ಯಮಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ೨೦೧೬–೧೭ ರಲ್ಲಿ ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ವಿವಿಧ ಜಿಲ್ಲೆಗಳಿಗೆ ನೀಡಿರುವ ಅನುದಾನದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೬೮ (೮೩೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ೨೦೧೬–೧೭ರಲ್ಲಿ ವಿವಿಧ ಜಿಲ್ಲೆಗಳಲ್ಲಿ ಕೈಗೊಳ್ಳಲಾಗಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ಹಾಗೂ ಅದರ ಅಂದಾಜು ಮೊತ್ತ ಎಷ್ಟು ?

(ಆ) ಗಡಿನಾಡು ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ರಾಯಚೂರು ಜಿಲ್ಲೆಗೆ ೨೦೧೬–೧೭ರಲ್ಲಿ ಒದಗಿಸಿರುವ ಅನುದಾನ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿರುವ ಬಿಪಿಎಲ್ ಮತ್ತು ಎಪಿಎಲ್ ಕಾರ್ಡುದಾರರ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೬೯(೮೩೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಕಾರ್ಡುಗಳನ್ನು ಹೊಂದಿರುವ ಕುಟುಂಬಗಳ ಸಂಖ್ಯೆ ಎಷ್ಟು;

(ಆ) ಪ್ರಸ್ತುತ ಇರುವ ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಕಾರ್ಡುದಾರರ ಕುಟುಂಬಗಳಿಗೆ ಪ್ರತಿ ತಿಂಗಳು ನೀಡುತ್ತಿರುವ ಪಡಿತರ ವೆಚ್ಚ ಎಷ್ಟು ? (ವಿವರ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿ ವಸತಿ ನಿಲಯಗಳ ಕೊರತೆ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೬೯(A)(೮೩೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿರುವ ವಸತಿ ನಿಲಯಗಳ ಕೊರತೆಯನ್ನು ನೀಗಿಸಲು ಸರಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ೨೦೧೬–೧೭ ರಲ್ಲಿ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳಿಂದ ವಿವಿಧ ಯೋಜನೆಗಳ ಮುಖಾಂತರ ರಾಯಚೂರು ಜಿಲ್ಲೆಗೆ ನೀಡಿರುವ ಅನುದಾನ ಎಷ್ಟು? (ಸಂಪೂರ್ಣ ವಿವರ ನೀಡುವುದು)

## ಧಾರವಾಡ ಕರ್ನಾಟಕ ವಿದ್ಯಾವರ್ಧಕ ಸಂಘದ ಸಿಬ್ಬಂದಿಯನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೦೭೦ (೯೦೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ ಕರ್ನಾಟಕ ವಿದ್ಯಾವರ್ಧಕ ಸಂಘಕ್ಕೆ ಅನುದಾನ ನೀಡುವ ಕುರಿತು ಸರ್ಕಾರ ಆದೇಶ ಹೊರಡಿಸಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಯಾವ ದಿನಾಂಕದಂದು ಈ ಆದೇಶ ಹೊರಡಿಸಲಾಗಿದೆ;

(ಇ) ಅನುದಾನ ಪಡೆಯುತ್ತಿರುವ ಈ ಸಂಸ್ಥೆಯ ಸಿಬ್ಬಂದಿಯನ್ನು ವೇತನಾನುದಾನಕ್ಕೆ ಒಳಪಡಿಸುವ ಬಗ್ಗೆ ನಿಯಮಗಳನ್ನು ರೂಪಿಸುವಂತೆ ಸರ್ಕಾರ ಯಾವಾಗ ಆದೇಶ ಹೊರಡಿಸಿದೆ ;

(ಈ) ಹಾಗಿದ್ದಲ್ಲಿ, ನಿವೃತ್ತಿ ಹೊಂದಿದ ಹಾಗೂ ನಿವೃತ್ತಿಯ ಅಂಚಿನಲ್ಲಿರುವ ಈ ಸಂಸ್ಥೆಯ ಸಿಬ್ಬಂದಿಯನ್ನು ವೇತನಾನುದಾನಕ್ಕೆ ಒಳಪಡಿಸಲು ವಿಳಂಬ ನೀತಿ ಅನುಸರಿಸಲು ಕಾರಣಗಳೇನು ;

(ಉ) ಕನ್ನಡ ಸಾಹಿತ್ಯ ಪರಿಷತ್ತಿನ ಸಿಬ್ಬಂದಿಗಳನ್ನು ವೇತನಾನುದಾನಕ್ಕೆ ಒಳಪಡಿಸಿ ಕರ್ನಾಟಕ ವಿದ್ಯಾವರ್ಧಕ ಸಂಘದ ಸಿಬ್ಬಂದಿಗಳ ಬಗ್ಗೆ ಸರ್ಕಾರ ಮಲತಾಯಿ ಧೋರಣೆ ಅನುಸರಿಸಲು ಕಾರಣಗಳೇನು ;

(ಊ) ಕರ್ನಾಟಕ ವಿದ್ಯಾವರ್ಧಕ ಸಿಬ್ಬಂದಿಯನ್ನು ವೇತನಾನುದಾನಕ್ಕೆ ಒಳಪಡಿಸಿ ಯಾವ ದಿನಾಂಕದಂದು ಆದೇಶ ಹೊರಡಿಸಲಾಗುವುದು?

## ರೈತರಿಗೆ ಪಡಿತರ ವಿತರಣೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–**

೧೦೭೧ (೯೮೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರವು ಗರಿಷ್ಠ ಮುಖ ಬೆಲೆಯ ನೋಟನ್ನು ಅಮಾನ್ಯ ಮಾಡಿದಾಗ ರೈತರಿಗೆ ೨ ತಿಂಗಳ ಪಡಿತರವನ್ನು ಸರ್ಕಾರವು ಉಚಿತವಾಗಿ ನೀಡಲಾಗುವುದೆಂದು ಪತ್ರಿಕಾ ಪ್ರಕಟಣೆಯಲ್ಲಿ ಸಚಿವರು ಹೇಳಿದ್ದಾರೆಯೇ ;

(ಆ) ಹಾಗಾದರೆ, ಸರ್ಕಾರವು ಯಾವ ಯಾವ ತಿಂಗಳಿನಲ್ಲಿ ಪೂರ್ಣ ಉಚಿತವಾಗಿ ಪಡಿತರವನ್ನು ರೈತರಿಗೆ ನೀಡಿರುತ್ತದೆ ;

(ಇ) ಇದರ ಸಂಬಂಧ ಸರ್ಕಾರವು ಬಿಡುಗಡೆ ಮಾಡಿದ ಹಣ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಈ) ಈ ಹಣವನ್ನು ಯಾವ ಮೂಲದಿಂದ ಭರಿಸಲಾಗಿದೆ ; ಮತ್ತು ಇದನ್ನು ಯಾವ ರೀತಿ ರೈತರಿಗೆ ತಲುಪಿಸಲಾಗಿದೆ ?

## ವಿಕಲಚೇತನ ಶಾಲೆಗಳ ಸಿಬ್ಬಂದಿಗೆ ೧೯೮೨ರ ಅಧಿನಿಯಮದಂತೆ ಅನುದಾನ ಒದಗಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–**

೧೦೭೨ (೪೯೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿಕಲಚೇತನ ಶಾಲೆಗಳ ಸಂಖ್ಯೆ ಎಷ್ಟು ; ಇಲ್ಲಿ ಕೆಲಸ ಮಾಡುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಆ) ರಾಜ್ಯದಲ್ಲಿ ಅನುದಾನ ಪಡೆಯುತ್ತಿರುವ ವಿಕಲಚೇತನ ಶಾಲೆಗಳಲ್ಲಿ ಎಷ್ಟು ವಿಧಗಳಿವೆ ; ಈ ಶಾಲೆಗಳಿಗೆ ಯಾವ ವಿಧಾನದಲ್ಲಿ ಅನುದಾನ ಒದಗಿಸಲಾಗುತ್ತಿದೆ ;

(ಇ) ೧೯೮೨ರ ಅಧಿನಿಯಮ ದಿನಾಂಕ: ೦೨-೦೨-೧೯೮೨ ಪಿ.ಹೆಚ್.ಪಿ/ಜಿ.ಐ.ಎ/೮೧-೮೨ ಪ್ರಕಾರ ಮೊದಲು ಪೂರ್ಣ ಪ್ರಮಾಣ ಅನುದಾನ ನೀಡಲಾಗುತ್ತಿತ್ತೆ ; (ಅನುದಾನ ವಿವರಗಳನ್ನು ನೀಡುವುದು)

(ಈ) ದಿನಾಂಕ: ೧೪-೦೨-೨೦೧೦ರಂದು ಹೊರಡಿಸಿದ ಆದೇಶದಿಂದ ಅನುದಾನವನ್ನು ಶಿಶುಕೇಂದ್ರಿತವಾಗಿ ಕೊಡುತ್ತಿರುವುದರಿಂದ ಇಲ್ಲಿನ ಸಿಬ್ಬಂದಿ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ದಿನಾಂಕ: ೦೨-೦೨-೧೯೮೨ರ ಆದೇಶದಂತೆ ಈ ಸಿಬ್ಬಂದಿಗೆ ಪೂರ್ಣ ಅನುದಾನ ನೀಡಲು ಸರ್ಕಾರ ಉದ್ದೇಶಿಸಿದೆಯೇ ;

(ಊ) ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಯಾವಾಗ ಆದೇಶ ಹೊರಡಿಸಿದೆ ?

## ಬಯಲು ಸೀಮೆ ಪ್ರದೇಶಾಭಿವೃದ್ಧಿ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):-**

೧೦೭೩ (೮೯೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ವ್ಯಾಪ್ತಿಯಲ್ಲಿ ಬರುವ ಮಾನ್ಯ ವಿಧಾನ ಸಭಾ ಸದಸ್ಯರ ಸಂಖ್ಯೆ ಹಾಗೂ ವಿಧಾನ ಪರಿಷತ್ತಿನ ಸದಸ್ಯರ ಸಂಖ್ಯೆ ಎಷ್ಟು; (ವಿವರವಾಗಿ ಹೆಸರು, ಕ್ಷೇತ್ರದೊಂದಿಗೆ ಮಾಹಿತಿ ನೀಡುವುದು)

(ಆ) ೨೦೧೬–೧೭ನೇ ಸಾಲಿನಲ್ಲಿ ಸದರಿ ಮಂಡಳಿಯ ಅನುದಾನದಲ್ಲಿ ಕಾಮಗಾರಿಗಾಗಿ ಮಾನ್ಯ ವಿಧಾನ ಸಭಾ ಸದಸ್ಯರು ಹಾಗೂ ವಿಧಾನ ಪರಿಷತ್ತಿನ ಸದಸ್ಯರಿಗೆ ಕೋಟಾದಡಿ ಮೀಸಲಿರಿಸಿದ ಹಣವೆಷ್ಟು ;

(ಇ) ಅನುದಾನ ಹಂಚಿಕೆಯಲ್ಲಿ ಮಾನ್ಯ ವಿಧಾನ ಸಭಾ ಸದಸ್ಯರಿಗೆ ಹಾಗೂ ವಿಧಾನ ಪರಿಷತ್ತು ಸದಸ್ಯರಿಗೂ ತಾರತಮ್ಯ ಮಾಡಿರುವುದು ನಿಜವೇ ;

(ಈ) ಈ ತಾರತಮ್ಯವನ್ನು ಸರ್ಕಾರವು ಈ ಸಾಲಿನಲ್ಲಾದರೂ ನಿವಾರಿಸುವುದೇ ?

## ನ್ಯಾಯಬೆಲೆ ಅಂಗಡಿಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೧೦೭೪ (೯೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ;

(ಆ) ಈ ನ್ಯಾಯಬೆಲೆ ಅಂಗಡಿಗಳಿಗೆ ಕೊಡುತ್ತಿರುವ ಕಮೀಷನ್ ಎಷ್ಟು ;

(ಇ) ಸರ್ಕಾರ ಈಗ ಹೊಸ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುತ್ತಿದೆಯೇ ;

(ಈ) ಮಾಡುತ್ತಿದ್ದಲ್ಲಿ, ಹೊಸ ನ್ಯಾಯಬೆಲೆ ಅಂಗಡಿಗಳ ಮಂಜೂರಾತಿಗಾಗಿ ಸರ್ಕಾರ ವಿಧಿಸಿರುವ ಮಾನದಂಡಗಳೇನು ?

## KSTDC ಯಲ್ಲಿ ಗುತ್ತಿಗೆ ನೌಕರರನ್ನು ನೇಮಕ ಮಾಡಿಕೊಳ್ಳುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ):–**

೧೦೭೫ (೯೦೦) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಪ್ರವಾಸೋದ್ಯಮ ನಿಗಮದಲ್ಲಿ (KSTDC) ಹಾಲಿ ಕಾರ್ಯನಿರ್ವಹಿಸುತ್ತಿರುವ ನೌಕರರು ಎಷ್ಟು ; (ವಿವರವಾಗಿ ನೌಕರರ ಹೆಸರು, ಹುದ್ದೆಯ ಪದನಾಮ, ವೇತನ ಶ್ರೇಣಿ, ಮತ್ತು ವಿದ್ಯಾರ್ಹತೆ ಒಳಗೊಂಡಂತೆ ಮಾಹಿತಿ ನೀಡುವುದು)

(ಆ) ಗುತ್ತಿಗೆ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು ಎಷ್ಟು ; (ವಿವರವಾಗಿ ನೌಕರರ ಹೆಸರು, ಹುದ್ದೆಯ ಪದನಾಮ, ವೇತನ ಶ್ರೇಣಿ ಒಳಗೊಂಡಂತೆ ಮಾಹಿತಿ ನೀಡುವುದು)

(ಇ) ಗುತ್ತಿಗೆ ನೌಕರರು ನಿಗಮದಲ್ಲಿ ನೇಮಕ ಮಾಡುವ ಸಂಬಂಧ ನಿಗಮದ ವೃಂದ ನೇಮಕಾತಿ ನಿಯಮಗಳಲ್ಲಿ ಪ್ರಾವಿಧಾನ ಇದೆಯೇ ;

(ಈ) ಪ್ರಾವಿಧಾನ ಇದ್ದರೆ, ನಿಗಮದ ವೃಂದ ಮತ್ತು ನೇಮಕಾತಿ ನಿಯಮಗಳ ಎಲ್ಲಾ ತಿದ್ದುಪಡಿಗಳನ್ನು ಒಳಗೊಂಡಂತೆ ಅವುಗಳ ಪ್ರತಿಗಳನ್ನು ನೀಡುವುದು ?

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯಕ್ರಮಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೭೬ (೮೫೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ವರ್ಷದಲ್ಲಿ ಎಷ್ಟು ಸಾಂಸ್ಕೃತಿಕ ಕಾರ್ಯ ಕ್ರಮಗಳನ್ನು ನಡೆಸಲಾಗುವುದು ; ಇದಕ್ಕೆ ನಿಗದಿಪಡಿಸಿರುವ ಅನುದಾನವೆಷ್ಟು ;

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ಯಾವ ಯಾವ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಎಲ್ಲೆಲ್ಲಿ ನಡೆಸಲಾಗಿದೆ ; (ವಿವರ ನೀಡುವುದು)

(ಇ) ಕಾರ್ಯಕ್ರಮಗಳನ್ನು ನಡೆಸಲು ಕಲಾವಿದರಿಗೆ ಯಾವ ರೀತಿ ಅವಕಾಶ ನೀಡಲಾಗುವುದು ; ಅದಕ್ಕಿರುವ ಮಾನದಂಡವೇನು ; ಕಳೆದ ೩ ವರ್ಷಗಳಲ್ಲಿ ಎಷ್ಟು ಹಣ ಖರ್ಚು ಮಾಡಲಾಗಿದೆ ? (ವಿವರ ನೀಡುವುದು)

## ಗಂಗಾ ಕಲ್ಯಾಣ ಯೋಜನೆಯಡಿ ಕೊರೆಸಿರುವ ಕೊಳವೆ ಬಾವಿಗಳ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೭೭ (೮೫೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕಳೆದ ೨ ವರ್ಷಗಳಲ್ಲಿ ಎಷ್ಟು ಕೊಳವೆಬಾವಿಗಳನ್ನು ಮಂಜೂರು ಮಾಡಲಾಗಿದೆ ; ಎಷ್ಟು ಕೊಳವೆಬಾವಿಗಳನ್ನು ಕೊರೆಸಲಾಗಿದೆ ; ಎಷ್ಟು ಫಲಾನುಭವಿಗಳಿಗೆ ಅನುಕೂಲವಾಗಿದೆ ;

(ಆ) ಇದಕ್ಕಾಗಿ ಎಷ್ಟು ಅನುದಾನ ನಿಗದಿಪಡಿಸಲಾಗಿತ್ತು ; ಮಂಜೂರಾದ ಮತ್ತು ಖರ್ಚಾದ ಹಣ ಎಷ್ಟು ;

(ಇ) ಉಳಿದಿರುವ ಫಲಾನುಭವಿಗಳಿಗೆ ಎಷ್ಟು ದಿನಗಳಲ್ಲಿ ಕೊಳವೆ ಬಾವಿಗಳನ್ನು ಕೊರೆಸಲಾಗುತ್ತದೆ ; ತ್ವರಿತಗತಿಯಲ್ಲಿ ಮಾಡಲು ಯಾವ ರೀತಿ ಕಾರ್ಯಕ್ರಮ ಹಾಕಿಕೊಳ್ಳಲಾಗಿದೆ ?

## ಮಹಿಳೆಯರ ಅಭಿವೃದ್ಧಿ ಕಾರ್ಯಕ್ರಮಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೭೮ (೮೫೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳೆಯರ ಅಭಿವೃದ್ಧಿ ಮತ್ತು ಕಲ್ಯಾಣಕ್ಕಾಗಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಹಾಕಿಕೊಂಡಿರುವ ಕಾರ್ಯಕ್ರಮಗಳು ಯಾವುವು ; ಇದಕ್ಕಾಗಿ ವಾರ್ಷಿಕ ಎಷ್ಟು ಹಣ ನಿಗಧಿಪಡಿಸಲಾಗಿದೆ ;

(ಆ) ಮಹಿಳಾ ಅಭಿವೃದ್ಧಿ ನಿಗಮದಿಂದ ಮಹಿಳೆಯರ ಸ್ವಯಂ ಉದ್ಯೋಗಕ್ಕಾಗಿ ಯಾವ ಯಾವ ಯೋಜನೆಗಳನ್ನು ಹಾಕಿಕೊಳ್ಳಲಾಗಿದೆ ; ಯಾವ ರೀತಿ ಸಾಲಗಳನ್ನು ನೀಡಲಾಗುತ್ತದೆ ; ಅದರ ರೂಪರೇಷೆಗಳೇನು ; (ವಿವರ ನೀಡುವುದು)

(ಇ) ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡಗಳ ಮಹಿಳೆಯರಿಗೆ ಪ್ರತ್ಯೇಕವಾದ ಯೋಜನೆಗಳನ್ನೇನಾದರೂ ರೂಪಿಸಲಾಗಿದೆಯೇ ; ರೂಪಿಸಿದ್ದರೆ, ಅದರ ವಿವರಗಳೇನು ?

## ಮರಾಠಾ ಸಮಾಜವನ್ನು 'III'B ಯಿಂದ 'II'A ಗೆ ಸೇರಿಸುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೭೯ (೭೯) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದ್ಯಂತ ಮರಾಠಾ ಸಮಾಜದ ಶೈಕ್ಷಣಿಕ ಮತ್ತು ಆರ್ಥಿಕ ಹಾಗೂ ರಾಜಕೀಯ ಸ್ಥಿತಿಗತಿಗಳ ಅಧ್ಯಯನವನ್ನು ದಿನಾಂಕ ೨೪ ಮತ್ತು ೨೫–೦೯–೨೦೧೨ ರಂದು ಮರಾಠಾ ಸಮಾಜದ ಸ್ಥಿತಿಗತಿಗಳನ್ನು ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರು ಖುದ್ದಾಗಿ ಪರಿಶೀಲಿಸಿ ದಿನಾಂಕ: ४೦–೧೨–೨೦೧೨ಕ್ಕೆ ರಾಜ್ಯ ಸರ್ಕಾರಕ್ಕೆ ವರದಿಯನ್ನು ನೀಡಿ ಪ್ರಸ್ತುತ 'III'B ಯಿಂದ 'II'A ಗೆ ಶಿಫಾರಸ್ಸನ್ನು ಮಾಡಿರುತ್ತಾರೆ; ಆದರೆ ರಾಜ್ಯ ಸರ್ಕಾರವು ಮರಾಠಾ ಸಮುದಾಯದವರನ್ನು 'II'A ಗೆ ಸೇರಿಸುವಲ್ಲಿ ವಿಳಂಬ ಮಾಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; (ವಿವರ ನೀಡುವುದು)

(ಆ) ಮರಾಠಾ ಸಮಾಜದವರು ಹಿಂದಿನಿಂದಲೂ ಅಲ್ಪ ಸಂಖ್ಯಾತರಾಗಿದ್ದು, ಮೀಸಲಾತಿ ದೊರೆಯದ ಕಾರಣ ಎಲ್ಲ ಕ್ಷೇತ್ರಗಳಲ್ಲಿ ಅವಕಾಶಗಳಿಂದ ವಂಚಿತರಾಗಿರುವುದರಿಂದ ಈ ಜನಾಂಗದವರನ್ನು ಆದಷ್ಟು ಹೆಚ್ಚಿನ ಪ್ರಾಶಸ್ತ್ಯ ಮೇರೆಗೆ 'III' B ಯಿಂದ 'II'A ಗೆ ಸೇರಿಸಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಕುಣಬಿ ಜನಾಂಗವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೮೦ (೮೦೦) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕನ್ನಡ ಜಿಲ್ಲೆಯ ದಟ್ಟ ಕಾಡುಗಳಲ್ಲಿ ವಾಸಿಸುವ ಕುಣಬಿ ಜನಾಂಗ ಸಾಮಾಜಿಕವಾಗಿ ಶೈಕ್ಷಣಿಕವಾಗಿ, ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಅತ್ಯಂತ ಹಿಂದುಳಿದವರಾಗಿದ್ದು, ಬುಡಕಟ್ಟು ಸಂಸ್ಕೃತಿಯ ಎಲ್ಲಾ ಗುಣಲಕ್ಷಣಗಳನ್ನು ಹೊಂದಿರುವುದರಿಂದ ಪರಿಶಿಷ್ಠ ಪಂಗಡಕ್ಕೆ ಸೇರಿಸಲು ಒತ್ತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈವರೆವಿಗೂ ಈ ನಿಟ್ಟಿನಲ್ಲಿ ಕ್ರಮ ಕೈಗೊಂಡಿಲ್ಲದಿರುವುದಕ್ಕೆ ಕಾರಣಗಳೇನು ;

(ಆ) ಸದರಿ ವಿಷಯದಲ್ಲಿ ಕುಲಪತಿಗಳಿಂದ ಅಧ್ಯಯನ ನಡೆಸಿ ವರದಿ ತರಿಸಿಕೊಂಡು ಕ್ರಮ ಕೈಗೊಳ್ಳಲಾಗುವುದೆಂದು ಸರ್ಕಾರ ಈ ಹಿಂದಿನಿಂದ ಭರವಸೆ ನೀಡಿದ್ದರೂ ಸಹ ಇಲ್ಲಿಯವರೆಗೆ ಯಾವುದೇ ರೀತಿಯಲ್ಲಿ ಕ್ರಮ ಕೈಗೊಂಡಿರುವುದಿಲ್ಲ ; ಆದುದರಿಂದ ಸದರಿ ವರದಿಯನ್ವಯ ಯಾವ ಕಾಲಮಿತಿಯೊಳಗೆ ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದು ?

## ಜಿಲ್ಲೆಯ ಮಹಿಳಾ ಸಾಂತ್ವನ ಕೇಂದ್ರಗಳಲ್ಲಿ ದಾಖಲಾದ ದೌರ್ಜನ್ಯ ಪ್ರಕರಣಗಳ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೮೧ (೭೯೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ಇರುವ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಮಹಿಳಾ ಸಾಂತ್ವನ ಕೇಂದ್ರಗಳಲ್ಲಿ ಜನವರಿ ೨೦೧೬ ರಿಂದ ಇಲ್ಲಿಯವರೆಗೆ ದೌರ್ಜನ್ಯ ತಡೆ ಕಾಯ್ದೆ ಅಡಿಯಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿದೆ ; ಎಷ್ಟು ಪ್ರಕರಣಗಳು ಇತ್ಯರ್ಥವಾಗಿದೆ ; ಬಾಕಿ ಇರುವ ಪ್ರಕರಣಗಳು ಎಷ್ಟು ; ಯಾವ ಕಾರಣಕ್ಕಾಗಿ ಬಾಕಿ ಇರುತ್ತದೆ ; (ಜಿಲ್ಲಾವಾರು / ತಾಲ್ಲೂಕುವಾರು ವಿವರ ನೀಡುವುದು)

(ಆ) ಈಗಾಗಲೇ ಜಿಲ್ಲೆಯಲ್ಲಿ ದೌರ್ಜನ್ಯ ತಡೆ ಕಾಯ್ದೆ ಅಡಿಯಲ್ಲಿ ದಾಖಲಾದ ಪ್ರಕರಣಗಳು ಸರಿಯಾದ ತನಿಖೆ ಮಾಡದೆ ನಿರ್ಲಕ್ಷ್ಯ ವಹಿಸುತ್ತಿರುವ ಈ ಸಾಂತ್ವನ ಕೇಂದ್ರಕ್ಕೆ ಸಂಬಂಧಿಸಿದಂತೆ, ಇರುವ ಅಧಿಕಾರಿ ಸಿಬ್ಬಂದಿಗಳು ಎಷ್ಟು ; ಇವರ ಕರ್ತವ್ಯ ನಿರ್ವಹಣೆ ವಿವರ ನೀಡುವುದು ; ಇಲ್ಲಿಯವರೆಗೆ ದಾಖಲಾಗಿರುವ ಪ್ರಕರಣಗಳನ್ನು ಇತ್ಯರ್ಥಪಡಿಸುವಲ್ಲಿ ಕೈಗೊಂಡ ಕ್ರಮವೇನು ? (ತಿಂಗಳವಾರು, ವರ್ಷವಾರು ಪ್ರಕರಣವಾರು ವಿವರ ನೀಡುವುದು)

## ಪಿ.ಯು.ಸಿ ಯಲ್ಲಿ ಕೊಂಕಣಿ ಸಿಲೆಬಸ್ ತಯಾರಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೦೮೨ (೮೮೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಿ.ಯು.ಸಿ. ಯಲ್ಲಿ ಕೊಂಕಣಿ ಸಿಲೆಬಸ್ ತಯಾರಿಸದೆ, ವಿದ್ಯಾರ್ಥಿಗಳಿಗೆ ನಿರಂತರ ಶಿಕ್ಷಣ ಪಡೆಯುವಲ್ಲಿ ತೊಂದರೆಯಾಗಿರುವುದು ನಿಜವೇ ; ಹಾಗಿದ್ದಲ್ಲಿ, ಯಾವಾಗ ಕೊಂಕಣಿ ಸಿಲೆಬಸ್ ತಯಾರಿಸಲಾಗುವುದು ;

(ಆ) ರಾಜ್ಯದಲ್ಲಿ ಒಟ್ಟು ಕೊಂಕಣಿ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಇ) ಕೊಂಕಣಿ ಭಾಷೆಯನ್ನು ಬೋಧಿಸಲು ಅಧ್ಯಾಪಕರನ್ನು ಇಲಾಖಾವತಿಯಿಂದ ನೇಮಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಯಾವಾಗ ನೇಮಿಸಲಾಗುವುದು ;

(ಈ) ಶಾಲೆಗಳಲ್ಲಿ ಕೊಂಕಣಿ ಬೋಧಿಸಲು ಪಠ್ಯಪುಸ್ತಕಗಳನ್ನು ಇಲಾಖೆಯಿಂದ ಪೂರೈಸಲಾಗುವುದೇ ? (ವಿವರ ನೀಡುವುದು)

## ಉಡುಪಿ ಜಿಲ್ಲಾ ಸರ್ಕಾರಿ ಆಸ್ಪತ್ರೆ / ಮಕ್ಕಳ ಆಸ್ಪತ್ರೆ ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೦೮೩ (೭೫೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲಾ ಸರ್ಕಾರಿ ಆಸ್ಪತ್ರೆ / ಮಕ್ಕಳ ಆಸ್ಪತ್ರೆ ಅಭಿವೃದ್ಧಿಗಾಗಿ ಅನಿವಾಸಿ ಭಾರತೀಯ ಉದ್ಯಮಿಯೊಂದಿಗೆ ಮಾಡಿಕೊಂಡ ಒಪ್ಪಂದ ಎಷ್ಟು ಸಮಯದಲ್ಲಿ ಪೂರ್ಣಗೊಳ್ಳುವುದು ; ಈ ಒಪ್ಪಂದದಿಂದ ಇಲಾಖೆಗೆ ಆಗಿರುವ ಪ್ರಯೋಜನವೇನು ; ಸಾರ್ವಜನಿಕರಿಗೆ ಸಿಗುವ ಸೌಲಭ್ಯಗಳಾವುವು ;

(ಆ) ಉಡುಪಿ ಜಿಲ್ಲಾ ಸರ್ಕಾರಿ ಆಸ್ಪತ್ರೆ ಅಭಿವೃದ್ಧಿಗೆ ಇಲಾಖೆ ಕೈಗೊಂಡಿರುವ ಕ್ರಮ ಏನು ; ಎಷ್ಟು ಹಣ ವಿನಿಯೋಗಿಸಲಾಗಿದೆ ; ಖಾಲಿ ಇರುವ ಹುದ್ದೆಗಳು ಎಷ್ಟು ; ಭರ್ತಿಯಾದ ಹುದ್ದೆಗಳು ಎಷ್ಟು ; ಹುದ್ದೆ ಭರ್ತಿಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಉಡುಪಿ ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ದಿನ ಒಂದಕ್ಕೆ ಎಷ್ಟು ಹೊರ ರೋಗಿಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ ; ಈ ಆಸ್ಪತ್ರೆಯಲ್ಲಿರುವ ಒಟ್ಟು ಹಾಸಿಗೆಗಳ ಸಂಖ್ಯೆ ಎಷ್ಟು ? (ವಿವರ ಒದಗಿಸುವುದು)

## ಕರಾವಳಿ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೦೮೪ (೭೫೪) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿ ಜಿಲ್ಲೆಯ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಇಲಾಖೆಯಿಂದ ೨೦೧೪ ರಿಂದ ೨೦೧೭ನೇ ಸಾಲಿನಲ್ಲಿ ಮಂಜೂರಾದ ಅನುದಾನ ಎಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಸಿ.ಆರ್.ಜೆಡ್ ನಿಯಮದಿಂದ ಕರಾವಳಿ ಭಾಗದ ಬೀಚ್‌ಗಳ ಅಭಿವೃದ್ಧಿಗೆ ಹಿನ್ನಡೆಯಾಗಿದ್ದು, ಈ ಬಗ್ಗೆ ಇಲಾಖೆ ಕೈಗೊಂಡಿರುವ ಕ್ರಮಗಳೇನು ;

(ಇ) ಕರಾವಳಿ ಪ್ರವಾಸೋದ್ಯಮ ಉತ್ತೇಜನಕ್ಕಾಗಿ ಕರಾವಳಿ ಜಿಲ್ಲೆಗಳಲ್ಲಿ ಯಾವ ಯಾವ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ಕ್ರಮ ಕೈಗೊಂಡಿದೆ ; (ವಿವರ ಒದಗಿಸುವುದು)

(ಈ) ಪ್ರವಾಸೋದ್ಯಮ ಇಲಾಖೆಯಿಂದ ಕೈಗೊಂಡಿರುವ ಯೋಜನೆಗಳೇನು ; ಅನುದಾನ ಬಿಡುಗಡೆಗೊಳ್ಳದೆ ನಿಗಧಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಪೂರ್ಣಗೊಳಿಸಲಾಗುವುದು ಯಾವಾಗ ?

## ಕೊಂಕಣಿ ಭವನ ಸ್ಥಾಪಿಸಲು ಕೊಂಕಣಿ ಸಾಹಿತ್ಯ ಅಕಾಡೆಮಿಯವರ ಪ್ರಸ್ತಾವನೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೦೮೫ (೭೫೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಂಕಣಿ ಭವನ ಸ್ಥಾಪಿಸಲು ಕೊಂಕಣಿ ಸಾಹಿತ್ಯ ಅಕಾಡೆಮಿಯವರ ಪ್ರಸ್ತಾವನೆ ಯಾವ ಹಂತದಲ್ಲಿದೆ ; ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ;

(ಆ) ಕೊಂಕಣಿ ಸಾಹಿತ್ಯ ಅಕಾಡೆಮಿ ೨೦೧೪ ರಿಂದ ೨೦೧೭ ರವರೆಗೆ ಕೈಗೊಂಡಿರುವ ಕಾರ್ಯಕ್ರಮಗಳಿಗೆ ತಗುಲಿದ ಖರ್ಚು ಎಷ್ಟು; (ವರ್ಷವಾರು ವಿವರ ನೀಡುವುದು)

(ಇ) ಅಕಾಡೆಮಿ ಸದಸ್ಯರುಗಳಿಗೆ ನೀಡಲಾಗುತ್ತಿರುವ ಗೌರವಧನ / ಭತ್ಯೆ ಎಷ್ಟು ; ಇದಕ್ಕೆ ಮಾನದಂಡವನ್ನು ಅನುಸರಿಸಲಾಗುತ್ತಿದೆ ; (ವಿವರ ನೀಡುವುದು)

(ಈ) ಅಕಾಡೆಮಿ ಅಧ್ಯಕ್ಷರುಗಳಿಗೆ ಕಛೇರಿ ಕೆಲಸಗಳಿಗೆ ವಾಹನ ನೀಡಬೇಕೆಂಬ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಯಾವಾಗಿನಿಂದ ಚಾಲ್ತಿಯಲ್ಲಿರುವುದು ? (ವಿವರ ಒದಗಿಸುವುದು)

## ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳ ವಸತಿಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು):–**

೧೦೮೬ (೭೫೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳಲ್ಲಿ ವಸತಿ ಪಡೆದಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಪ್ರತಿಯೊಬ್ಬ ವಿದ್ಯಾರ್ಥಿಯು ಹಾಸ್ಟೆಲ್‌ಗಳಲ್ಲಿ ಪ್ರವೇಶ ಪಡೆಯಲು ಇಲಾಖೆ ಖರ್ಚು ಮಾಡುವ ವೆಚ್ಚ ಎಷ್ಟು ;

(ಇ) ಹಾಸ್ಟೆಲ್‌ಗಳಲ್ಲಿ ವಾರ್ಡನ್‌ಗಳ ಕೊರತೆ ಇರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ; ಕೊರತೆ ನೀಗಿಸಲು ಇಲಾಖೆ ಕೈಗೊಂಡ ಕ್ರಮಗಳೇನು ;

(ಈ) ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳ ವಿದ್ಯಾರ್ಥಿಗಳಿಗೆ ಪೂರೈಕೆ ಮಾಡುವ ಸಾಮಾಗ್ರಿಗಳು ಕಳಪೆ ಮಟ್ಟದೆಂದು ದೂರುಗಳು ಇದ್ದು, ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಅಂಗನವಾಡಿ ಕಟ್ಟಡಗಳ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೧೦೮೭ (೭೬೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದ್ಯಂತ ಸ್ವಂತ ಕಟ್ಟಡವನ್ನು ಹೊಂದಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು ;

(ಆ) ೨೦೧೭–೧೮ನೇ ಸಾಲಿನಲ್ಲಿ ಎಷ್ಟು ಅಂಗನವಾಡಿಗಳಿಗೆ ಕಟ್ಟಡ ನಿರ್ಮಿಸಿ ಕೊಡಲಾಗುವುದು ;

(ಇ) ಸದರಿ ಕಟ್ಟಡ ನಿರ್ಮಾಣಕ್ಕೆ ಯಾವ ಅನುದಾನದಲ್ಲಿ ಹಣ ಬಿಡುಗಡೆ ಮಾಡಲಾಗುವುದು ?

# ರಾಜ್ಯದಲ್ಲಿರುವ BPL ಮತ್ತು APL ಕಾರ್ಡ್‌ಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೮೮ (೭೫೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಬಿ.ಪಿ.ಎಲ್. ಮತ್ತು ಎ.ಪಿ.ಎಲ್ ಕಾರ್ಡ್‌ಗಳನ್ನು ವಿತರಣೆ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ३ ವರ್ಷಗಳಲ್ಲಿ ಹಾಲಿ ನೀಡಿರುವ ಬಿ.ಪಿ.ಎಲ್. ಕಾರ್ಡಿನಲ್ಲಿ ಬೋಗಸ್ ಕಾರ್ಡುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಇ) ಈ ಬಿ.ಪಿ.ಎಲ್. ಬೋಗಸ್ ಕಾರ್ಡ್‌ಗಳನ್ನು ಯಾರು ಯಾರು ನೀಡಿರುತ್ತಾರೆ ಇಂತಹ ಅಧಿಕಾರಿ / ನೌಕರರ ಮೇಲೆ ಯಾವ ರೀತಿ ಕ್ರಮ ಜರುಗಿಸಲಾಗಿದೆ ; ಎಷ್ಟು ಜನಕ್ಕೆ ಶಿಕ್ಷೆ ನೀಡಲಾಗಿದೆ ; (ವಿವರ ನೀಡುವುದು)

(ಈ) ಹೊಸದಾಗಿ ಬಿ.ಪಿ.ಎಲ್. ಕಾರ್ಡ್‌ಗಾಗಿ ರಾಜ್ಯಾದ್ಯಂತ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಬಿ.ಪಿ.ಎಲ್ ಕಾರ್ಡ್ ನೀಡಿಕೆಯಲ್ಲಿ ಇತ್ತೀಚೆಗೆ ಹೆಚ್ಚಿನ ಗೊಂದಲ ಸೃಷ್ಟಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ ; ಬಂದಿದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಊ) ಹೊಸದಾಗಿ ಬಂದಿರುವ ಅರ್ಜಿಗಳಿಗೆ ಯಾವಾಗ ಬಿ.ಪಿ.ಎಲ್ ಕಾರ್ಡ್‌ಗಳನ್ನು ವಿತರಿಸಲಾಗುವುದು ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಅನುದಾನ ನೀಡಿರುವ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೦೮೯ (೭೫೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೨೦೧೭ನೇ ಸಾಲಿನ ಬಜೆಟ್‌ನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸರ್ಕಾರ ಒದಗಿಸಿರುವ ಅನುದಾನವೆಷ್ಟು;

(ಆ) ಒದಗಿಸಿರುವ ಅನುದಾನದಲ್ಲಿ ಇಲ್ಲಿಯತನಕ ಖರ್ಚು ಮಾಡಿರುವ ಹಣವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಒದಗಿಸಿರುವ ಅನುದಾನದಲ್ಲಿ ಜಿಲ್ಲಾವಾರು ಹಂಚಿಕೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಪ್ರತಿ ಜಿಲ್ಲೆಗೆ ನೀಡಿದ ಅನುದಾನವೆಷ್ಟು; (ವಿವರ ನೀಡುವುದು)

(ಈ) ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ವಿದ್ಯಾರ್ಥಿ ನಿಲಯಗಳಿಗೆ / ಸಮುದಾಯ ಭವನಗಳಿಗೆ ಇನ್ನಿತರೆ ಕಲ್ಯಾಣ ಕಾರ್ಯಕ್ರಮಗಳಿಗೆ ಹಂಚಿಕೆ ಮಾಡಿರುವ ಅನುದಾನ ಎಷ್ಟು; (ವಿವರವನ್ನು ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಯಾವ ಯಾವ ಕಾರ್ಯಕ್ರಮಗಳಿಗೆ ಅನುದಾನ ಒದಗಿಸಲಾಗುವುದು;

(ಊ) ಈ ಅನುದಾನವನ್ನು ಯಾವ ಮಾನದಂಡ ಅನುಸರಿಸಿ ನೀಡಲಾಗುವುದು? (ಆದೇಶ / ಸುತ್ತೋಲೆಯೊಂದಿಗೆ ವಿವರ ನೀಡುವುದು)

## ವೈದ್ಯಕೀಯ ಕಾಲೇಜು ತೆರೆಯುವ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯೯೦ (೭೫೮) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರವು ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಒಂದೊಂದು ಜಿಲ್ಲಾಸ್ಪತ್ರೆ ಮತ್ತು ವೈದ್ಯಕೀಯ ಕಾಲೇಜುಗಳನ್ನು ತೆರೆಯಲು ಗುರಿ ಹೊಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಆ) ವೈದ್ಯಕೀಯ ಕಾಲೇಜುಗಳಿಲ್ಲದ ಜಿಲ್ಲೆಗಳು ಯಾವುವು ; ಈ ಜಿಲ್ಲೆಗಳಲ್ಲಿ ಯಾವ ವರ್ಷದಿಂದ ವೈದ್ಯಕೀಯ ಕಾಲೇಜುನ್ನು ಸ್ಥಾಪನೆ ಮಾಡಲಾಗುವುದು ; (ವಿವರ ನೀಡುವುದು)

(ಇ) ತುಮಕೂರು ಜಿಲ್ಲೆಯಲ್ಲಿ ಯಾವ ಶೈಕ್ಷಣಿಕ ವರ್ಷದಿಂದ ವೈದ್ಯಕೀಯ ಕಾಲೇಜನ್ನು ಸ್ಥಾಪನೆ ಮಾಡಲಾಗುವುದು ; (ವಿವರ ನೀಡುವುದು)

(ಈ) ಹಾಗೆಯೇ ವೈದ್ಯಕೀಯ ಕಾಲೇಜು ಸ್ಥಾಪನೆಯಾದರೆ ಇದರ ಜೊತೆಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯು ನಿರ್ಮಾಣವಾಗಲಿದೆ ಎಂದು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಿನಾಂಕ: ೦೧–೦೭–೨೦೧೬ ರಂದು ಸಚಿವರಾದ ಮೊದಲನೇ ಬಾರಿಗೆ ತುಮಕೂರು ಜಿಲ್ಲೆ ಭೇಟಿ ನೀಡಿದ ಸಂದರ್ಭದಲ್ಲಿ ಹೇಳಿಕೆ ನೀಡಿದ್ದಂತೆ ; ತುಮಕೂರು ಜಿಲ್ಲೆಗೆ ವೈದ್ಯಕೀಯ ಕಾಲೇಜು ಮತ್ತು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಯಾವಾಗ ಸ್ಥಾಪನೆ ಮಾಡಲಾಗುವುದು ? (ಸ್ಪಷ್ಟ ಭರವಸೆ ನೀಡುವುದು)

## ಮೈಸೂರಿನ ಲಲಿತ ಮಹಲ್ ಅರಮನೆಯ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ):–**

೧೮೯೧ (೭೬೦) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ನಗರದಲ್ಲಿರುವ ಲಲಿತ ಮಹಲ್ ಅರಮನೆಯು ಪ್ರಸಕ್ತ ಯಾರ ಅಧೀನದಲ್ಲಿ ಇದೆ ; (ರಾಜ್ಯ ಸರ್ಕಾರದ್ದೇ ಅಥವಾ ಕೇಂದ್ರ ಸರ್ಕಾರದ್ದೇ)

(ಆ) ಇತ್ತೀಚೆಗೆ ಕೇಂದ್ರ ಸರ್ಕಾರ ಸದರಿ ಅರಮನೆಯನ್ನು ಖಾಸಗಿಯವರಿಗೆ ಮಾರಾಟ ಮಾಡಲು ಮುಂದಾಗಿದ್ದು, ರಾಜ್ಯ ಸರ್ಕಾರದ ಅಭಿಪ್ರಾಯವನ್ನು ಕೇಳಿರುವುದು ನಿಜವೇ ;

(ಇ) ಸದರಿ ಅರಮನೆಯನ್ನು ಖಾಸಗಿಯವರಿಗೆ ಮಾರಾಟ ಮಾಡುವ ಬಗ್ಗೆ ರಾಜ್ಯ ಸರ್ಕಾರದ ಸ್ಪಷ್ಟ ಅಭಿಪ್ರಾಯವೇನು ;

(ಈ) ಸದರಿ ಅರಮನೆಯನ್ನು ರಾಜ್ಯ ಸರ್ಕಾರವು ತನ್ನ ಅಧೀನದಲ್ಲಿ ಉಳಿಸಿಕೊಳ್ಳಲು ಮುಂದಾಗಿದೆಯೇ ?

## ಅಂಗನವಾಡಿ ಸಮಸ್ಯೆಗಳ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೮೯೨ (೭೬೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಅಂಗನವಾಡಿಗಳ ಸಂಖ್ಯೆ ಎಷ್ಟು ; ಅದರಲ್ಲಿ ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿಗಳ ಸಂಖ್ಯೆಯೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಅಂಗನವಾಡಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕಿಯರ / ಕಾರ್ಯಕರ್ತರ ಸಂಖ್ಯೆ ಎಷ್ಟು ; ಕೊರತೆ ಇರುವ ಶಿಕ್ಷಕಿಯರ / ಕಾರ್ಯಕರ್ತರ ಸಂಖ್ಯೆಯೆಷ್ಟು ;

(ಇ) ಅಂಗನವಾಡಿಯಲ್ಲಿರುವ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳುವುದಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪಡಿತರ ಚೀಟಿ, ಕೂಪನ್ ವಿತರಣೆಯಲ್ಲಿನ ಅವ್ಯವಹಾರ ಮತ್ತು ಗೊಂದಲ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೮೯೩ (೭೯೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಡಿತರ ಸಾಮಗ್ರಿ ವಿತರಣೆಗೆ ಜಾರಿಗೆ ತಂದಿರುವ ಕೂಪನ್ ವ್ಯವಸ್ಥೆಯಲ್ಲಿ ದೋಷವಿರುವುದು ನಿಜವೇ ;

(ಆ) ಸರ್ಕಾರ ಜಾರಿಗೆ ತಂದಿರುವ ಕೂಪನ್ ವ್ಯವಸ್ಥೆಯಲ್ಲಿ ನಕಲಿ ಕೂಪನ್‌ಗಳಿಂದ ಪಡಿತರ ಸಾಮಗ್ರಿ ಲೂಟಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಈ ಅವ್ಯವಹಾರದಲ್ಲಿ ಭಾಗಿಯಾದ ಅಧಿಕಾರಿ, ಫ್ರಾಂಚೈಸಿ ಮತ್ತು ಮಳಿಗೆ ಮಾಲೀಕರ ಮೇಲೆ ಕೈಗೊಂಡ ಕ್ರಮಗಳೇನು ;

(ಈ) ನಕಲಿ ಕೂಪನ್ ಹಾವಳಿ ತಡೆಯಲು ಸರ್ಕಾರ ಯಾವ ಯಾವ ಕ್ರಮ ಕೈಗೊಳ್ಳಲಿದೆ ? (ಸಂಪೂರ್ಣ ವಿವರ ನೀಡುವುದು)

## ಬೈಕ್ ಅಂಬ್ಯಲೈನ್ಸ್ ಸೇವೆ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೯೪ (೭೫೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬೈಕ್ ಅಂಬುಲೈನ್ಸ್ ಸೇವೆಯನ್ನು ಯಾವಾಗ ಪ್ರಾರಂಭಿಸಲಾಯಿತು; ಈ ಯೋಜನೆ ಯಶಸ್ವಿಯಾಗಿದೆಯೇ; ಯೋಜನೆಯ ಅನುಷ್ಠಾನಕ್ಕಾಗಿ ಇದುವರೆಗೂ ವೆಚ್ಚವಾದ ಅನುದಾನದ ಮೊತ್ತವೆಷ್ಟು;

(ಆ) ಪ್ರಸಕ್ತ ರಾಜ್ಯದ ಯಾವ ಯಾವ ಭಾಗಗಳಲ್ಲಿ ಬೈಕ್ ಅಂಬುಲೈನ್ಸ್ ಸೇವೆ ಲಭ್ಯವಿದೆ; ಒಟ್ಟು ಎಷ್ಟು ಬೈಕ್ ಅಂಬುಲೈನ್ಸ್ ಸೇವೆಯಲ್ಲಿದೆ;

(ಇ) ಬೈಕ್ ಅಂಬುಲೈನ್ಸ್‌ನಲ್ಲಿ ಲಭ್ಯವಿರುವ ಚಿಕಿತ್ಸಕರ ಅರ್ಹತೆಗಳೇನು; ಅವರು ಯಾವ ತುರ್ತು ಚಿಕಿತ್ಸೆಗಳನ್ನು ನೀಡಲು ಶಕ್ತರಿರುತ್ತಾರೆ;

(ಈ) ಬೈಕ್ ಅಂಬುಲೈನ್ಸ್‌ನಲ್ಲಿ ಲಭ್ಯವಿರುವ ಚಿಕಿತ್ಸೆಗಳೇನು; ಬೈಕ್ ಅಂಬುಲೈನ್ಸ್‌ನಲ್ಲಿರುವ ಅಗತ್ಯ ಔಷಧ ಉಪಕರಣಗಳಾವುವು;

(ಉ) ಬೈಕ್ ಅಂಬುಲೈನ್ಸ್ ಸೇವೆಯನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ವಸತಿ ನಿಲಯ/ವಸತಿ ಶಾಲೆಯಲ್ಲಿನ ಅವ್ಯವಸ್ಥೆ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೯೫ (೭೫೬) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿಂದುಳಿದ ವರ್ಗಗಳ ಇಲಾಖೆಯಡಿ ಬರುವ ಒಟ್ಟು ವಸತಿ ನಿಲಯಗಳು ಮತ್ತು ವಸತಿ ಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಅಗತ್ಯ ಮೂಲ ಸೌಲಭ್ಯಗಳ ಕೊರತೆಯಿಂದಾಗಿ, ವಸತಿ ನಿಲಯಗಳ ಸ್ಥಿತಿ ಶೋಚನೀಯವಾಗಿರುವುದು ಸರ್ಕಾರದ ಗಮನಕ್ಕಿದೆಯೇ;

(ಇ) ನಿಗದಿತ ಸಂಖ್ಯೆಗಿಂತ ಹೆಚ್ಚುವರಿ ದಾಖಲಾತಿ ಇರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು;

(ಈ) ಸ್ವಂತ ಕಟ್ಟಡದಲ್ಲಿ ಮತ್ತು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸತ್ತಿರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು; ಹಗಲು ಕಾವಲುಗಾರರು, ರಾತ್ರಿ ಕಾವಲುಗಾರರು, ಸಿಸಿ ಕ್ಯಾಮೆರಾ ಆವರಣ ಗೋಡೆ ಇರುವ ವಸತಿ ನಿಲಯಗಳು ಮತ್ತು ವಸತಿ ಅಗತ್ಯ ಪೀಠೋಪಕರಣಗಳು ಇರುವ ಶಾಲೆಗಳ ಸಂಖ್ಯೆ ಎಷ್ಟು; ಇಲ್ಲದಿರುವ ವಸತಿ ನಿಲಯಗಳು ಮತ್ತು ವಸತಿ ಶಾಲೆಗಳ ಸಂಖ್ಯೆ ಎಷ್ಟು;

(ಉ) ವಿದ್ಯಾರ್ಥಿ ವಿದ್ಯಾರ್ಥಿನಿಯರ ಸಂಖ್ಯೆಗೆ ಅನುಗುಣವಾಗಿ, ಅಗತ್ಯಕ್ಕೆ ತಕ್ಕಂತೆ ಶೌಚಾಲಯ, ಸ್ನಾನದ ಗೃಹ, ಓದುವ ಮೇಜು-ಖುರ್ಚಿ, ಮಲಗುವ ಮಂಚ ಹಾಸಿಗೆ ಇಲ್ಲದಿರುವುದು ಸರ್ಕಾರ ಗಮನಿಸಿದೆಯೇ;

(ಊ) ರಾಜ್ಯದ ಎಲ್ಲಾ ಹಿಂದುಳಿದ ವರ್ಗಗಳ ವಸತಿ ನಿಲಯಗಳಿಗೆ ಕಾಲಮಿತಿಯಲ್ಲಿ ಅಗತ್ಯ ಸೌಲಭ್ಯ, ಪರಿಕರ, ಸುರಕ್ಷತೆ, ಉತ್ತಮ ಗುಣಮಟ್ಟದ ಆಹಾರ, ಸಮವಸ್ತ್ರ ಒದಗಿಸುವ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ಪ್ರವಾಸೋದ್ಯಮ ಇಲಾಖೆಯ ಅನುದಾನದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೮೯೬ (೮೪೭) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳ ಪ್ರವಾಸೋದ್ಯಮಕ್ಕಾಗಿ ಕೇಂದ್ರ ರಾಜ್ಯ– ನಬಾರ್ಡ್ ಸೇರಿದಂತೆ ವಿವಿಧ ಮೂಲದಿಂದ ಬಿಡುಗಡೆಯಾದ ಅನುದಾನವೆಷ್ಟು; ಆ ಪೈಕಿ ಖರ್ಚಾದ ಅನುದಾನವೆಷ್ಟು; (ವರ್ಷಾವಾರು, ಜಿಲ್ಲಾವಾರು ಹಂಚಿಕೆಯ ವಿವರ ನೀಡುವುದು)

(ಆ) ಪ್ರವಾಸೋದ್ಯಮದ ಅಭಿವೃದ್ಧಿಗಾಗಿ ಕಳೆದ ೫ ವರ್ಷದಲ್ಲಿ ಉಡುಪಿ ಮತ್ತು ದಕ್ಷಿಣ ಜಿಲ್ಲೆಗಳಿಗೆ ಮಂಜೂರಾದ, ಬಿಡುಗಡೆಯಾದ, ಖರ್ಚಾದ ಅನುದಾನವೆಷ್ಟು; ಕೈಗೆತ್ತಿಕೊಂಡ ಕಾರ್ಯಕ್ರಮ ಮತ್ತು ಕಾಮಗಾರಿಗಳಾವುವು;

(ಇ) ಕರಾವಳಿ ಬೀಚ್‌ಗಳಲ್ಲಿ ಸಿ.ಆರ್.ಝಡ್ ಕಾಯಿದೆಯಿಂದ ಪ್ರವಾಸೋದ್ಯಮಕ್ಕೆ ತೊಂದರೆಯಾಗುತ್ತಿರುವ ಬಗ್ಗೆ, ಕೇರಳ ಮತ್ತು ಗೋವಾ ಮಾದರಿಯಲ್ಲಿ ಪ್ರವಾಸೊದ್ಯಮಕ್ಕೆ ಸಿ.ಆರ್.ಝಡ್ ನಿಂದ ವಿನಾಯಿತಿ ನೀಡುವ ಬಗ್ಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ; (ವಿವರ ನೀಡುವುದು)

(ಈ) ಕರಾವಳಿ ತೀರ ಪ್ರದೇಶವನ್ನು ಹೊಂದಿರುವ ಹಾಗೂ ದೇವಸ್ಥಾನಗಳ ನಾಡಾಗಿರುವ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಕರಾವಳಿ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಸರ್ಕಾರದ ಮುಂದಿರುವ ಯೋಜನೆಗಳೇನು?

## ರಾಜ್ಯದಲ್ಲಿ ಜನೌಷಧಾಲಾಯ ಕೇಂದ್ರಗಳನ್ನು ಸ್ಥಾಪಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೯೭೭ (೮೩೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಜನೌಷಧಾಲಯಗಳನ್ನು ಎಲ್ಲೆಲ್ಲಿ (Genric Drugs) ಸ್ಥಾಪಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಜನೌಷಧಾಲಯ ಕೇಂದ್ರಗಳನ್ನು ಸ್ಥಾಪಿಸಲು ಕೇಂದ್ರ ಸರ್ಕಾರ ನಿಗಧಿಪಡಿಸಿದ ಮಾನದಂಡಗಳೇನು;

(ಇ) ಸದರಿ ಕೇಂದ್ರದಲ್ಲಿ ಲಭ್ಯವಿರುವ ಔಷಧಿಗಳು ಹಾಗೂ ನಿಗಧಿಪಡಿಸಿದ ದರಗಳೆಷ್ಟು; (ವಿವರ ನೀಡುವುದು)

(ಈ) ಶ್ರೀಸಾಮಾನ್ಯರಿಗೆ ಔಷಧಿ ದೊರಕುವಂತಾಗಲು ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಜನೌಷಧಿ ಕೇಂದ್ರಗಳನ್ನು ಸ್ಥಾಪಿಸಲು ಕಾಲಮಿತಿಯಲ್ಲಿ ಕೈಗೊಂಡಿರುವ ಯೋಜನೆಗಳಾವುವು? (ವಿವರ ನೀಡುವುದು)

## ರಾಜ್ಯದಲ್ಲಿ ಶಾಲೆ ಮತ್ತು ಅಂಗನವಾಡಿಗಳಿಗೆ ತಲುಪಬೇಕಾದ ಹಾಲು ಮತ್ತು ಹಾಲಿನ ಪುಡಿ ಸರಬರಾಜಿನಲ್ಲಿ ಆಗುವ ಅಕ್ರಮದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೯೭೮ (೮೪೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಶಾಲೆ ಮತ್ತು ಅಂಗನವಾಡಿಗಳಿಗೆ ಪ್ರತಿ ತಿಂಗಳು ಹಾಲಿನ ಪುಡಿಯನ್ನು ಎಂದಿನಿಂದ ಸರಬರಾಜು ಮಾಡಲಾಗುತ್ತಿದೆ;

(ಆ) ರಾಯಚೂರು, ಕೊಪ್ಪಳ ಹಾಗೂ ಬಳ್ಳಾರಿ ಜಿಲ್ಲೆಗಳ ಶಾಲೆಗಳು ಹಾಗೂ ಅಂಗನವಾಡಿ ಕೇಂದ್ರಗಳಿಗೆ ಹಾಲಿನ ಪುಡಿಯ ಸರಬರಾಜು ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇತ್ತೀಚೆಗೆ ಬೆಳಗಾವಿಯಲ್ಲಿ ಹಾಲಿನ ಪುಡಿ ಮಾರಾಟ ದಂಧೆಯಲ್ಲಿ ತೊಡಗಿರುವವರ ವಿರುದ್ಧ ಬೆಳಗಾವಿಯ ಸಿಸಿಐಬಿ ಪೊಲೀಸರು ಪ್ರಕರಣಗಳನ್ನು ದಾಖಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಶಾಲಾ ಮಕ್ಕಳಿಗೆ ಮತ್ತು ಶಿಶುಗಳಿಗೆ ತಲುಪಬೇಕಾದ ಈ ಹಾಲು ಮತ್ತು ಹಾಲಿನ ಪುಡಿ ಸರಬರಾಜಿನಲ್ಲಿ ಆಗುತ್ತಿರುವ ಅಕ್ರಮವನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ಧಾರವಾಡದಲ್ಲಿ ರಾಷ್ಟ್ರ ಮಟ್ಟದ ಗ್ರಾಹಕರ ಸಂಶೋಧನೆ ಮತ್ತು ತರಬೇತಿ ಕೇಂದ್ರವನ್ನು ಸ್ಥಾಪಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೮೯ (೮೩೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಧಾರವಾಡದಲ್ಲಿ ರಾಷ್ಟ್ರಮಟ್ಟದ ಗ್ರಾಹಕರ ಸಂಶೋಧನೆ ಮತ್ತು ತರಬೇತಿ ಕೇಂದ್ರವನ್ನು ಸ್ಥಾಪಿಸುವ ಯೋಜನೆ ಯಾವ ಹಂತದಲ್ಲಿದೆ;

(ಆ) ಈ ಯೋಜನೆಗೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹಣವೆಷ್ಟು;

(ಇ) ನ್ಯಾಯ ಬೆಲೆ ಅಂಗಡಿಗಳ ಕಾರ್ಯನಿರ್ವಹಣೆ ಕುರಿತಂತೆ ಸಾಮಾಜಿಕ ಲೆಕ್ಕಪರಿಶೋಧನೆ (Social Audit) ಗಾಗಿ ನಿಯಮಗಳನ್ನು ರೂಪಿಸಲಾಗಿದೆಯೇ? (ವಿವರ ನೀಡುವುದು)

## ರಾಜ್ಯದಲ್ಲಿ ಹೊಸ ವೈದ್ಯಕೀಯ ಕಾಲೇಜುಗಳನ್ನು ಆರಂಭಿಸುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೧೦೦ (೮೪೦) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರಾವಾರ, ಚಾಮರಾಜನಗರ ಮತ್ತು ಕೊಡಗು ಜಿಲ್ಲೆಗಳಲ್ಲಿ ವೈದ್ಯಕೀಯ ಕಾಲೇಜುಗಳನ್ನು ಆರಂಭಿಸಲಾಗಿದೆಯೇ;

(ಆ) ಈ ಕಾಲೇಜುಗಳಿಗಾಗಿ ಹಂಚಿಕೆಯಾದ ಹಣಕಾಸಿನ ಮೊತ್ತವೆಷ್ಟು; (ವಿವರ ನೀಡುವುದು)

(ಇ) ೨೦೧೬–೧೭ನೇ ಸಾಲಿನಲ್ಲಿ ಈ ವೈದ್ಯಕೀಯ ಕಾಲೇಜುಗಳಿಗಾಗಿ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ; (ವಿವರ ನೀಡುವುದು)

(ಈ) ಈ ಕಾಲೇಜುಗಳನ್ನು ಸರ್ಕಾರಿ ಕಟ್ಟಡದಲ್ಲಿ ನಡೆಸಲಾಗುತ್ತದೆಯೇ; ಅಥವಾ ಖಾಸಗಿ ಕಟ್ಟಡಗಳಲ್ಲಿ ನಡೆಸಲಾಗುತ್ತಿದೆಯೇ; (ವಿವರ ನೀಡುವುದು)

(ಉ) ಈ ಕಾಲೇಜುಗಳಿಗೆ ಸ್ವಂತ ಕಟ್ಟಡಗಳನ್ನು ಯಾವಾಗ ನಿರ್ಮಿಸಲಾಗುವುದು?

# ಬೆಳಗಾವಿ ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳಿಲ್ಲದೇ ಇರುವುದು ಹಾಗೂ ಇರುವ ಕಟ್ಟಡಗಳು ಶಿಥಿಲವಾಗಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೦೧ (೮೮೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳಿಲ್ಲದೆ ಇರುವುದು ಹಾಗೂ ಇರುವ ಅಂಗನವಾಡಿ ಕೇಂದ್ರಗಳು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳನ್ನು ಒದಗಿಸಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು; ಜಿಲ್ಲೆಯಲ್ಲಿ ಒಟ್ಟು ಎಷ್ಟು ಅಂಗನವಾಡಿ ಕೇಂದ್ರಗಳಿವೆ; ಅವುಗಳಲ್ಲಿ ಎಷ್ಟು ಸ್ವಂತ ಕಟ್ಟಡ ಹೊಂದಿವೆ; ಎಷ್ಟು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ನಿರ್ವಹಣೆಯ ಕೊರತೆಯಿಂದ ಶಿಥಿಲಾವಸ್ಥೆಯಲ್ಲಿರುವ ಅಂಗನವಾಡಿ ಕೇಂದ್ರಗಳನ್ನು ಯಾವಾಗ ಪುನಶ್ಚೇತನಗೊಳಿಸಲಾಗುವುದು; ಅದಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ಅಂಗನವಾಡಿ ಕೇಂದ್ರಗಳ ನಿರ್ವಹಣೆಗೆ ಸರ್ಕಾರವು ಪ್ರತಿ ವರ್ಷ ಎಷ್ಟು ಅನುದಾನ ಮೀಸಲಿರಿಸಿದೆ; ವರ್ಷಕ್ಕೆ ಎಷ್ಟು ಬಾಡಿಗೆ ನೀಡುತ್ತಿದೆ; ಬೆಳಗಾವಿ ಜಿಲ್ಲೆಯ ಬಾಡಿಗೆ ಕಟ್ಟಡಗಳ ವಿವರ ಹಾಗೂ ಅವುಗಳಿಗೆ ನಿಗದಿಪಡಿಸಿರುವ ಬಾಡಿಗೆಯೆಷ್ಟು? (ವಿವರ ನೀಡುವುದು)

# ಬೆಳಗಾವಿ ವೈದ್ಯಕೀಯ ಕಾಲೇಜಿನ (ಬಿಮ್ಸ್) ವಿದ್ಯಾರ್ಥಿಗಳು ಹಾಸ್ಟೆಲ್ ಸಮಸ್ಯೆಯಿಂದ ಹೈರಾಣಾಗುತ್ತಿರುವ ವಿಚಾರ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೦೨ (೮೮೩) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ವೈದ್ಯಕೀಯ ಕಾಲೇಜಿನಲ್ಲಿ (ಬಿಮ್ಸ್) ವಿವಿಧ ಕೋರ್ಸ್‌ಗಳಿಗೆ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳು ಕಾಲೇಜಿನ ಹಾಸ್ಟೆಲ್ ಸಮಸ್ಯೆಯಿಂದಾಗಿ ಹೈರಾಣಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ವಿವಿಧ ಕೋರ್ಸ್‌ಗಳ ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ಇರುವ ಬಿಮ್ಸ್‌ಗೆ ಹೊಸ ಹಾಸ್ಟೆಲ್ ನಿರ್ಮಿಸಲು ೨೦೧೦ರಲ್ಲಿ, ಪ್ರಸ್ತಾವ ಸಿದ್ದವಾಗಿದ್ದರೂ, ಕಟ್ಟಡ ಕಾಮಗಾರಿಯ ವಿಳಂಬಕ್ಕೆ ಕಾರಣಗಳೇನು; ಯಾವ ಕಾಲಮಿತಿಯೊಳಗೆ ಹಾಸ್ಟೆಲ್ ಕಾಮಗಾರಿ ಪೂರ್ಣಗೊಂಡು ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ ದೊರೆಯಲಿದೆ;

(ಇ) ಸದರಿ ಹಾಸ್ಟೆಲ್ ನಿರ್ಮಿಸುವವರೆಗೆ ಹಾಲಿ ಇರುವ ವಿದ್ಯಾರ್ಥಿಗಳಿಗೆ ಏನು ಪರ್ಯಾಯ ವ್ಯವಸ್ಥೆ ಮಾಡಲಿದೆ; ಆರ್ಥಿಕವಾಗಿ ಹಿಂದುಳಿದ ಈ ಬಡ ವಿದ್ಯಾರ್ಥಿಗಳ ಸಂಕಷ್ಟಕ್ಕೆ ಸರ್ಕಾರ ಹೇಗೆ ಸ್ಪಂದಿಸಲಿದೆ; (ವಿವರ ನೀಡುವುದು)

(ಈ) ಸದರಿ ಹಾಸ್ಟೆಲ್ ನಿರ್ಮಿಸಲು ಮಂಜೂರಾದ ಅನುದಾನವೆಷ್ಟು; ಬಿಡುಗಡೆಯಾದ ಅನುದಾನವೆಷ್ಟು; ಬಾಕಿ ಇರುವ ಅನುದಾನವೆಷ್ಟು; ಸದರಿ ಕಾಮಗಾರಿ ಶೀಘ್ರವಾಗಿ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು)

## ಬೆಳಗಾವಿ ಜಿಲ್ಲೆ ನಂದೇಶ್ವರ ಗ್ರಾಮದ ಉಪ ಆರೋಗ್ಯ ಕೇಂದ್ರವನ್ನು ಮುಚ್ಚಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೦೩ (೮೮೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ೫೦೦೦ಕ್ಕೂ ಅಧಿಕ ಜನಸಂಖ್ಯೆ ಹೊಂದಿರುವ ನಂದೇಶ್ವರ ಗ್ರಾಮದ ಆರೋಗ್ಯ ಉಪಕೇಂದ್ರಕ್ಕೆ ಏಳು ವರ್ಷದಿಂದ ಬೀಗ ಹಾಕಿರುವುದರಿಂದ ಜನರು ಆರೋಗ್ಯ ಸೇವೆಯಿಲ್ಲದೆ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಸುಸಜ್ಜಿತ ಕಟ್ಟಡವಿದ್ದರೂ ಏಳು ವರ್ಷದಿಂದ ಆರೋಗ್ಯ ಕೇಂದ್ರಕ್ಕೆ ಬೀಗ ಹಾಕಲು ಕಾರಣಗಳೇನು; ಸದರಿ ಆರೋಗ್ಯ ಕೇಂದ್ರ ಹಂದಿಗೂಡಾಗುವ ಮುನ್ನ ಇಲ್ಲಿ ಆರೋಗ್ಯ ಸೇವೆ ಆರಂಭಿಸುವ ಚಿಂತನೆ ಸರ್ಕಾರಕ್ಕಿದೆಯೇ;

(ಇ) ಸದರಿ ಗ್ರಾಮದ ವೃದ್ಧರು, ಅಂಗವಿಕಲರು, ಮಕ್ಕಳು ಮತ್ತು ಸ್ತ್ರೀಯರು ದೂರದ ಊರುಗಳಿಗೆ ಆರೋಗ್ಯ ಸೇವೆ ಅರಸಿ ಹೊಗಲಾರದೆ ತೊಂದರೆ ಅನುಭವಿಸುತ್ತಿರುವವರಿಗೆ ಆರೋಗ್ಯ ಸೇವೆ ಒದಗಿಸಲು ಸರ್ಕಾರ ಏನು ಕ್ರಮಗಳನ್ನು ಕೈಗೊಳ್ಳಲಿದೆ? (ವಿವರ ನೀಡುವುದು)

# ಬಡವರಿಗೆ ನಿಗಧಿತ ಸಮಯಕ್ಕೆ ಪಡಿತರ ವಿತರಣೆ ಆಗದಿರುವ ಕುರಿತು

**ಶ್ರೀ ಕವಟಗಿಮಠ  ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೦೪ (೮೮೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಡಿತರ ವಿತರಿಸಲು ಸರ್ಕಾರವು ದಿನಕ್ಕೊಂದು ಕಾನೂನು ತರುತ್ತಿದ್ದು, ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಹಂಚಿಕೆ ಮಾಡಲು ಆಧಾರ್‌ಲಿಂಕ್ ಕಡ್ಡಾಯ ಮಾಡಿರುವುದು ಮತ್ತು ಕೂಪನ್‌ಗಳ ವಿತರಣೆಯಲ್ಲಿ ಎಡವಟ್ಟುಗಳಾಗಿ ಬಡವರು ಪಡಿತರ ವಿತರಣೆಯಿಲ್ಲದೆ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಬಡವರಿಗೆ ನಿಗಧಿತ ಸಮಯದಲ್ಲಿ ಪಡಿತರ ವಿತರಣೆ ಮಾಡುವುದಕ್ಕೆ ಸರ್ಕಾರ ಏನು ಕ್ರಮ ಕೈಗೊಂಡಿದೆ; ಆಧಾರ್‌ಲಿಂಕ್ ಮಾಡಲು ವಿಳಂಬವಾಗಿರುವ ಸಾರ್ವಜನಿಕರಿಗೆ ಪಡಿತರ ವಿತರಿಸಲು ಯಾವ ಪರ್ಯಾಯ ಕ್ರಮ ಅನುಸರಿಸುತ್ತಿದೆ;

(ಇ) ಈಗಾಗಲೇ ರಾಜ್ಯದಲ್ಲಿ ಎಷ್ಟು ಪ್ರಮಾಣದಲ್ಲಿ ಆಧಾರ್‌ಲಿಂಕ್ ಮಾಡಲಾಗಿದೆ; ಇನ್ನೂ ಎಷ್ಟು ಪ್ರಮಾಣದ ಆಧಾರ್‌ಲಿಂಕ್ ಮಾಡಬೇಕಾಗಿದೆ;

(ಈ) ಬಯೋಮೆಟ್ರಿಕ್ ಆನ್ ಲೈನ್ ಉಚಿತ ಕೂಪನ್ ನೀಡುವ ಸೆಂಟರ್‌ಗಳು ಹಗಲು ದರೋಡೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ರೊಚ್ಚಿಗೆದ್ದ ಜನ ರಸ್ತೆಗಿಳಿದು ಹೋರಾಟ

ನಡೆಸುವುದನ್ನು ತಡೆಯಲು ಆನ್ ಲೈನ್ ಸೆಂಟರ್‌ಗಳ ಮೇಲೆ ಏನು ಕ್ರಮ ಕೈಗೊಳ್ಳುವಿರಿ; ಜನರಿಗೆ ಇದರಿಂದಾಗುವ ಕಿರಿಕಿರಿ ತೊಂದರೆಗಳನ್ನು ತಪ್ಪಿಸಲು ಸರ್ಕಾರವು ಕೈಗೊಳ್ಳಲಿರುವ ಕ್ರಮಗಳೇನು?

## ಬಿ.ಪಿ.ಎಲ್ ಕಾರ್ಡ್‌ಗಳನ್ನು ಒದಗಿಸುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು)**
**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೧೧೫ (೮೭೧+೮೬೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೊಸದಾಗಿ ಬಿ.ಪಿ.ಎಲ್. ಕಾರ್ಡ್‌ಗಳನ್ನು ಒದಗಿಸುವ ಸಲುವಾಗಿ ಅರ್ಜಿಗಳನ್ನು ಸ್ವೀಕರಿಸುವುದನ್ನು ಸ್ಥಗಿತಗೊಳಿಸಲಾಗಿರುವ ಸಂಗತಿ ನಿಜವೇ; ಕಾರಣವೇನು;

(ಆ) ಹಾಗಿದ್ದಲ್ಲಿ, ಎಂದಿನಿಂದ ಪುನಃ ಪ್ರಾರಂಭಿಸಲಾಗುವುದು;

(ಇ) ತುಮಕೂರು ಜಿಲ್ಲೆಯಲ್ಲಿ ಬಿ.ಪಿ.ಎಲ್. ಕಾರ್ಡ್‌ಗಳನ್ನು ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಅದರಲ್ಲಿ ಎಷ್ಟು ಜನರಿಗೆ ಬಿ.ಪಿ.ಎಲ್. ಕಾರ್ಡ್ ನೀಡಲಾಗಿದೆ; ತಿರಸ್ಕೃತಗೊಂಡಿರುವ ಅರ್ಜಿಗಳೆಷ್ಟು; ಕಾರಣವೇನು; ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿ ಎಷ್ಟು ಜನರಿಗೆ ಬಿ.ಪಿ.ಎಲ್. ಕಾರ್ಡ್ ನೀಡಲಾಗಿದೆ; ತಿರಸ್ಕೃತಗೊಂಡಿರುವ ಅರ್ಜಿಗಳೆಷ್ಟು; ಕಾರಣವೇನು; ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ವಿಧಾನ ಪರಿಷತ್ತಿನ ಸದಸ್ಯರಿಗೆ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೧೦೬ (೮೭೨) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ನೇ ಸಾಲಿನಲ್ಲಿ ವಿಧಾನ ಪರಿಷತ್ ಸದಸ್ಯರಿಗೆ ಕರ್ನಾಟಕ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿಯಲ್ಲಿ ಬಿಡುಗಡೆಯಾಗಬೇಕಾಗಿದ್ದ ಅನುದಾನವೆಷ್ಟು; (ಸದಸ್ಯರವಾರು ಮಾಹಿತಿ ನೀಡುವುದು)

(ಆ) ಆಡಳಿತಾತ್ಮಕ ಅನುಮೋದನೆ ನೀಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಇ) ತುಮಕೂರು ಜಿಲ್ಲೆಯ ಎಲ್ಲಾ ಕ್ಷೇತ್ರಗಳಿಗೆ ೨೦೧೪–೧೫ರಲ್ಲಿ ಹಣ ಬಿಡುಗಡೆ ಮಾಡದಿರಲು ಕಾರಣವೇನು; ಯಾವಾಗ ಬಿಡುಗಡೆ ಮಾಡಲಾಗುವುದು?

## ಡಯಾಲಿಸಿಸ್ ಯಂತ್ರಗಳ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೧೦೭ (೮೭೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಯಂತ್ರಗಳನ್ನು ಖರೀದಿಸಿ ಬಳಕೆ ಮಾಡದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಯಾವುವು;

(ಆ) ಇಂತಹ ಎಷ್ಟು ಡಯಾಲಿಸಿಸ್ ಯಂತ್ರಗಳು ಹದಗೆಟ್ಟಿರುತ್ತವೆ;

(ಇ) ಇದಕ್ಕೆ ಕಾರಣಗಳೇನು ಕೂಡಲೆ ದುರಸ್ಥಿಗೊಳಿಸಿ ಬಳಕೆಗೆ ಅನುಕೂಲ ಮಾಡಿಕೊಡಲಾಗುವುದೇ?

## ಬಯಲು ಸೀಮೆ ಅಭಿವೃದ್ಧಿ ಪ್ರಾಧಿಕಾರ ಯೋಜನೆಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೧೦೮ (೮೭೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಬಯಲು ಸೀಮೆ ಅಭಿವೃದ್ಧಿ ಪ್ರಾಧಿಕಾರ ಒದಗಿಸಿದ ಹಣ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಯಾವ ಯಾವ ಕಾರ್ಯಕ್ಕೆ ಎಷ್ಟೆಷ್ಟು ಹಣ ಹಂಚಿಕೆ ಮಾಡಲಾಗಿದೆ;

(ಇ) ಯಾವ್ಯಾವ ಶಾಸಕರು, ವಿಧಾನ ಪರಿಷತ್ ಸದಸ್ಯರುಗಳನ್ನು ಈ ಸಭೆಗೆ ಅಹ್ವಾನ ಮಾಡಲಾಗುತ್ತದೆ;

(ಈ) ಅನುದಾನ ನೀಡುವಾಗ ಅನುಸರಿಸಲಾಗುತ್ತಿರುವ ಮಾನದಂಡವೇನು?

## ಗಂಗಾ ಕಲ್ಯಾಣ ಯೋಜನೆಯಡಿ ಕೊರೆದ ಬೋರ್‌ವೆಲ್‌ಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೧೧೯ (೮೭೦) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ತುಮಕೂರು ಜಿಲ್ಲೆಯಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಮಂಜೂರಾಗಿ ಕೋರೆಯಿಸಿರುವ ಬೋರ್‌ವೆಲ್‌ಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿಳಾಸ ಸಮೇತ ವಿವರ ನೀಡುವುದು)

(ಆ) ಅವುಗಳಲ್ಲಿ ಎಷ್ಟು ಬೋರ್‌ವೆಲ್‌ಗಳಿಗೆ ವಿದ್ಯುತ್ ಸಂಪರ್ಕ ಒದಗಿಸಲಾಗಿದೆ? (ತಾಲ್ಲೂಕುವಾರು ವಿವರ ಒದಗಿಸುವುದು)

## ರಾಜ್ಯದ ಅಂಗನವಾಡಿ ಕೇಂದ್ರಗಳ ಬಗ್ಗೆ

ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –

೧೧೧೦ (೭೬೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸ್ತುತ ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳೆಷ್ಟು; ಸ್ವಂತ ಕಟ್ಟಡ ಹೊಂದಿರುವ ಅಂಗನವಾಡಿ ಕೇಂದ್ರಗಳೆಷ್ಟು; ಬಾಡಿಗೆ ಕಟ್ಟಡದಲ್ಲಿರುವ ಅಂಗನವಾಡಿ ಕೇಂದ್ರಗಳೆಷ್ಟು;

(ಆ) ಬಾಡಿಗೆ ಕಟ್ಟಡ ಹೊಂದಿದ್ದರೆ, ಸ್ವಂತ ಕಟ್ಟಡ ಹೊಂದಲು ಸರ್ಕಾರದಿಂದ ಅನುದಾನ ಬಿಡುಗಡೆಗೊಳಿಸಲಾಗುವುದೆ;

(ಇ) ರಾಜ್ಯದಲ್ಲಿರುವ ಬಾಡಿಗೆ ಕಟ್ಟಡದ ಅಂಗನವಾಡಿ ಕೇಂದ್ರಗಳ ಬಾಬ್ತು ಸರ್ಕಾರದಿಂದ ಪಾವತಿಸಲಾಗುತ್ತಿರುವ ಒಟ್ಟು ಬಾಡಿಗೆ ಹಣ ಎಷ್ಟು;

(ಈ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಒಟ್ಟು ಎಷ್ಟು ಅಂಗನವಾಡಿ ಕೇಂದ್ರಗಳು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಮೂಡಿಗೆರೆ ತಾಲ್ಲೂಕಿನಲ್ಲಿ ಕಳೆದ ೪ ತಿಂಗಳಿಂದ ಅಂಗನವಾಡಿ ಕಾರ್ಯಕರ್ತೆಯರಿಗೆ ಮತ್ತು ಸಹಾಯಕಿಯರಿಗೆ ವೇತನ ಪಾವತಿಯಾಗದಿರಲು ಕಾರಣವೇನು?

## ಬೆಂಗಳೂರು ಜಿಲ್ಲೆಯ ಪುರುಷ ಮತ್ತು ಮಹಿಳಾ ವಸತಿ ನಿಲಯಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧೧ (೯೧) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿನ ಮಹಿಳಾ ಮತ್ತು ಪುರುಷರ ವಸತಿ ನಿಲಯಗಳ ಸಂಖ್ಯೆ ಎಷ್ಟು;

(ಆ) ವಸತಿ ನಿಲಯಗಳಲ್ಲಿ ಸಾಮಾನ್ಯ ಮೂಲಭೂತ ಸೌಲಭ್ಯಗಳು ಸಹ ಸಿಗದ ರೀತಿಯಲ್ಲಿ ವ್ಯವಸ್ಥೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ?

## ಕಲಾ ತಂಡಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧೨ (೮೯೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಾದ್ಯಂತ ಕಲಾ ತಂಡಗಳನ್ನು ಆಯ್ಕೆ ಮಾಡುವಾಗ ಅನುಸರಿಸುವ ಮಾನದಂಡಗಳೇನು;

(ಆ) ಈಗಾಗಲೇ ನೋಂದಾಯಿತ ಕಲಾ ತಂಡಗಳಿಗೆ ಪ್ರೋತ್ಸಾಹಧನ ನೀಡಲಾಗುತ್ತಿದೆಯೇ;

(ಇ) ನೀಡಿದ್ದಲ್ಲಿ, ಎಷ್ಟು ಮೊತ್ತದ ಸಹಾಯಧನವನ್ನು ನೀಡಲಾಗುತ್ತಿದೆ?

## ಮಹಿಳಾ ಸ್ವ ಸಹಾಯ  ಸಂಘಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧೩ (೮೯೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ನಡೆಯುತ್ತಿರುವ ಮಹಿಳಾ ಸ್ವ ಸಹಾಯ ಸಂಘಗಳೆಷ್ಟು;

(ಆ) ಸದರಿ ಸ್ವ ಸಹಾಯ ಸಂಘಗಳಿಗೆ ಸರ್ಕಾರದಿಂದ ನೀಡಲಾಗುತ್ತಿರುವ ಸಹಾಯಧನ ಎಷ್ಟು;

(ಇ) ನೀಡಿದ್ದಲ್ಲಿ, ಯಾವ ಮಾನದಂಡವನ್ನು ಅನುಸರಿಸಲಾಗುತ್ತದೆ?

## ಅಂಗನವಾಡಿ ಕೇಂದ್ರಗಳಿಗೆ ಪೂರೈಸುವ ಆಹಾರ ಸರಬರಾಜು ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧೪ (೯೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಾದ್ಯಂತ ಅಂಗನವಾಡಿ ಕೇಂದ್ರಗಳಿಗೆ ಆಹಾರ ಸರಬರಾಜು ಮಾಡಲು ಯಾವ ಮಾನದಂಡವನ್ನು ಅನುಸರಿಸಲಾಗುತ್ತಿದೆ;

(ಆ) ಜಿಲ್ಲಾವಾರು ಟೆಂಡರ್ ಪ್ರಕ್ರಿಯೆಯನ್ನು ಕೈಗೊಳ್ಳಲಾಗುತ್ತಿದೆಯೇ;

(ಇ) ಅಂಗನವಾಡಿ ಕೇಂದ್ರಗಳಿಗೆ ಸರಬರಾಜು ಮಾಡುವ ಆಹಾರದ ಸುರಕ್ಷತೆಯ ಬಗ್ಗೆ ಸರ್ಕಾರ ಗಮನ ಹರಿಸಿದೆಯೇ;

(ಈ) ಹಾಗಿದ್ದಲ್ಲಿ, ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ?

## ಪ್ರಾಥಮಿಕ ಆರೋಗ್ಯ ಮತ್ತು ರಕ್ತ ನಿಧಿ ಘಟಕಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧೫ (೯೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಾದ್ಯಂತ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು;

(ಆ) ತಾಲ್ಲೂಕು ಮಟ್ಟದಲ್ಲಿ ರಕ್ತ ನಿಧಿ ಘಟಕಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

(ಇ) ೨೦೧೭-೧೮ನೇ ಸಾಲಿನಲ್ಲಿ ಹೊಸದಾಗಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವ ಉದ್ದೇಶವನ್ನು ಸರ್ಕಾರ ಹೊಂದಿದೆ?

## ವೈದ್ಯಾಧಿಕಾರಿಗಳ ಕುರಿತು

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೧೧೧೬ (೮೬೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು; ಆ ಪೈಕಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; ಸದರಿ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ಸರ್ಕಾರದ ವಿವಿಧ ಯೋಜನೆಯಲ್ಲಿ ಉಚಿತ ರೋಗಿಗಳಿಗೆ ವೈದ್ಯಕೀಯ ಚಿಕಿತ್ಸೆ ನೀಡುವ ಯೋಜನೆಗಳಿಗೆ ಸರ್ಕಾರದಿಂದ ಹಣ ನೀಡಿಲ್ಲವೆಂಬ ಕೂಗು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರದ ಕ್ರಮವೇನು;

(ಇ) ವಿವಿಧ ಯೋಜನೆಯಡಿಯಲ್ಲಿ ಚಿಕಿತ್ಸೆ ನೀಡಿರುವ ಖಾಸಗಿ ಆಸ್ಪತ್ರೆಗಳಿಗೆ ಸರ್ಕಾರ ನೀಡಬೇಕಾದ ಬಾಕಿ ಹಣವೆಷ್ಟು; ಈ ಹಣ ಸಂದಾಯ ಮಾಡಲು ಸರ್ಕಾರ ಕ್ರಮಗೊಂಡ ಕ್ರಮವೇನು?

## ಗಂಗಾ ಕಲ್ಯಾಣ ಯೋಜನೆ ಕುರಿತು

**ಶ್ರೀ ನಿರಾಣಿ ಹನಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೧೧೧೭ (೮೬೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರದ ಗಂಗಾ ಕಲ್ಯಾಣ ಯೋಜನೆಯಡಿ ೨೦೧೫-೨೦೧೬ ಹಾಗೂ ೨೦೧೬-೧೭ನೇ ಸಾಲಿಗೆ ಮಂಜೂರಾದ ಕೊಳವೆ ಬಾವಿಗಳ ಸಂಖ್ಯೆಯೆಷ್ಟು ; ಅದರಲ್ಲಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಸಲಾಗಿದೆ ; ಎಷ್ಟು ಕೊಳವೆಬಾವಿಗಳಿಗೆ ಸಲಕರಣೆಗಳನ್ನು ಹಾಗೂ ವಿದ್ಯುತ್ ಸಂಪರ್ಕ ಒದಗಿಸಲಾಗಿದೆ ; (ಮಾಹಿತಿಯನ್ನು ಒದಗಿಸುವುದು)

(ಆ) ಕಾಲಮಿತಿಯಲ್ಲಿ ಕೊಳವೆಬಾವಿ ಕೊರೆಯದೆ ಇಲಾಖೆಯವರು ಕಾಲಹರಣ ಮಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಇದಕ್ಕೆ ಸರ್ಕಾರ ಕೈಗೊಂಡ ಕ್ರಮವೇನು ?

## ಕರ್ನಾಟಕ ವಸ್ತು ಪ್ರದರ್ಶನ ಮತ್ತು ಇದರ ವ್ಯಾಪ್ತಿ ಕಾರ್ಯನಿರ್ವಹಣೆಯ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೧೮ (೭೭೩) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ ಮೈಸೂರು ಇದರ ವ್ಯಾಪ್ತಿ ಹಾಗೂ ಕಾರ್ಯನಿರ್ವಹಣೆ ಏನು ; (ವಿವರ ನೀಡುವುದು)

(ಆ) ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರವು ನಾಡಹಬ್ಬ ನಡೆಯುವ ಸಮಯದಲ್ಲಿ ಮಾತ್ರ ವಸ್ತು ಪ್ರದರ್ಶನವು ನಡೆಸಲು ಸರ್ಕಾರ ಆದೇಶ ನೀಡಿರುತ್ತದೆಯೇ ; (ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ಎಲ್ಲಾ ಜಿಲ್ಲೆಗಳ ಪ್ರಗತಿಯನ್ನು ಬಿಂಬಿಸಿ ಪ್ರೋತ್ಸಾಹಿಸಲು ರಾಜ್ಯದ ಇತರೆ ಜಿಲ್ಲೆಗಳಲ್ಲಿ ವಸ್ತು ಪ್ರದರ್ಶನ ನಡೆಸಲು ಏಕೆ ಕ್ರಮ ಕೈಗೊಳ್ಳಲಿಲ್ಲ ಎಂಬ ಬಗ್ಗೆ ವಿವರ ನೀಡುವುದು ;

(ಈ) ನಾಡಹಬ್ಬ ದಸರಾ ಅವಧಿಯಲ್ಲಿ ಮೈಸೂರಿನಲ್ಲಿ ವಸ್ತು ಪ್ರದರ್ಶನ ನಡೆಸಿ ಬೇರೆ ವೇಳೆಯಲ್ಲಿ ಕಾಲಹರಣ ಮಾಡುತ್ತಿರುವ ಅಧಿಕಾರಿಗಳ ವಿರುದ್ಧ ಏಕೆ ಕ್ರಮ ಕೈಗೊಳ್ಳುತ್ತಿಲ್ಲ ?

## ವಾಲ್ಮೀಕಿ ಅಭಿವೃದ್ಧಿ ನಿಗಮದ ಸೌಲಭ್ಯಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧೯ (೭೭೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡದ ವರ್ಗದವರಿಗೆ ನೀಡಲಾಗುತ್ತಿರುವ ವೈಯಕ್ತಿಕ ಹಾಗೂ ಸಾಮೂಹಿಕ ಸೌಲಭ್ಯಗಳು ಯಾವುವು ; (ಯೋಜನೆವಾರು ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಪರಿಶಿಷ್ಠ ಜಾತಿ/ಪರಿಶಿಷ್ಠ ವರ್ಗದವರಿಗೆ ಯಾವ ಯೋಜನೆಗಳಡಿಯಲ್ಲಿ ಎಷ್ಟು ಸೌಲಭ್ಯಗಳನ್ನು ವಿತರಿಸಲಾಗಿದೆ ; ವಿವಿಧ ಯೋಜನೆಗಳಡಿಯಲ್ಲಿ ಬಾಕಿ ಉಳಿದಿರುವ ಅರ್ಜಿಗಳೆಷ್ಟು ; ಅವುಗಳು ಯಾವುವು ? (ಜಿಲ್ಲಾವಾರು, ಯೋಜನೆವಾರು ಸಂಪೂರ್ಣ ವಿವರ ನೀಡುವುದು)

## ಪ್ರವಾಸಿ ತಾಣಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೨೦ (೭೭೭) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಸರ್ಕಾರವು ಗುರುತಿಸಿರುವ ಪ್ರವಾಸಿ ತಾಣಗಳು ಯಾವುವು ;

(ಆ) ಈ ಪ್ರವಾಸಿ ತಾಣಗಳ ಪ್ರಚಾರ ಹಾಗೂ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈ ಪ್ರವಾಸಿ ತಾಣಗಳಲ್ಲಿ ಮೂಲಸೌಲಭ್ಯ ಸೌಕರ್ಯಗಳನ್ನು ಸಾರ್ವಜನಿಕರಿಗೆ ಸಮರ್ಪಕವಾಗಿ ನೀಡಲಾಗುತ್ತಿದೆಯೇ ; ಇಲ್ಲವಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಕರ್ನಾಟಕ ಮಹಿಳಾ ಅಭಿವೃದ್ಧಿ ನಿಗಮದ ಸೌಲಭ್ಯಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೨೧ (೭೭೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಮಹಿಳಾ ಅಭಿವೃದ್ಧಿ ನಿಗಮದಿಂದ ವಿವಿಧ ವರ್ಗದವರಿಗೆ ನೀಡಲಾಗುತ್ತಿರುವ ವೈಯಕ್ತಿಕ ಹಾಗೂ ಸಾಮೂಹಿಕ ಸೌಲಭ್ಯಗಳು ಯಾವುವು ; (ಯೋಜನೆವಾರು ಸಂಪೂರ್ಣ ವಿವರ ನೀಡುವುದು)

(ಆ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ವಿವಿಧ ವರ್ಗದವರಿಗೆ ಯಾವ ಯೋಜನೆಗಳಡಿಯಲ್ಲಿ ಎಷ್ಟು ಸೌಲಭ್ಯಗಳನ್ನು ಕಳೆದ ಮೂರು ವರ್ಷಗಳಿಂದ ವಿತರಿಸಲಾಗಿದೆ ; ವಿವಿಧ ಯೋಜನೆಗಳಡಿಯಲ್ಲಿ ಬಾಕಿ ಉಳಿದಿರುವ ಅರ್ಜಿಗಳೆಷ್ಟು ; ಅವುಗಳು ಯಾವುವು ? (ಜಿಲ್ಲಾವಾರು, ಯೋಜನೆವಾರು ಸಂಪೂರ್ಣ ವಿವರ ನೀಡುವುದು)

## ಪ್ರಾಥಮಿಕ ಆರೋಗ್ಯ ಕೇಂದ್ರ/ಸಮುದಾಯ ಆರೋಗ್ಯ ಕೇಂದ್ರಗಳ ಸೌಲಭ್ಯಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೨೨ (೮೫೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು/ಸಮುದಾಯ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಕೇಂದ್ರಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಮಂಜೂರಾದ ಹುದ್ದೆಗಳಲ್ಲಿ ಕೆಲಸ ಮಾಡುತ್ತಿರುವವರ ಸಂಖ್ಯೆ ಎಷ್ಟು ; ಹಾಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು, ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಇ) ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳಲಿದೆ ;

(ಈ) ಗ್ರಾಮಾಂತರ ಆಸ್ಪತ್ರೆಗಳಲ್ಲಿ ತತ್‌ಕ್ಷಣಕ್ಕೆ ಬೇಕಾಗಿರುವ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ವಿಶೇಷ ಆದ್ಯತೆ ಮೇರೆಗೆ ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಈ ಜಿಲ್ಲೆಗಳ ವ್ಯಾಪ್ತಿಯ ಹಳ್ಳಿಗಳ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸಣ್ಣ ವೈದ್ಯಕೀಯ ಪರೀಕ್ಷೆ ಮಾಡುವ ಯಾವುದೇ ಸಲಕರಣೆ/ ಲ್ಯಾಬ್ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದಲ್ಲಿ, ಈ ಜಿಲ್ಲೆಗಳ ವ್ಯಾಪ್ತಿಯ ಯಾವ ಕೇಂದ್ರಗಳಲ್ಲಿ ಈ ಸೌಲಭ್ಯವಿರುವುದಿಲ್ಲ ; (ವಿವರ ನೀಡುವುದು)

(ಋ) ರಕ್ತ/ಸಕ್ಕರೆ ಕಾಯಿಲೆ/ಇಸಿಜಿ ಪರೀಕ್ಷೆ ಇವುಗಳನ್ನು ಪರೀಕ್ಷೆ ಮಾಡಲು ಹೋಬಳಿ ಮಟ್ಟದಲ್ಲಿ ಕೇಂದ್ರಗಳನ್ನು ತೆರೆಯಲಾಗುವುದೇ ? (ಪೂರ್ಣ ವಿವರ ನೀಡುವುದು)

## ನ್ಯಾಯಬೆಲೆ ಅಂಗಡಿಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೨೩ (೮೫೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಇರುವ ಒಟ್ಟು ನ್ಯಾಯಬೆಲೆ ಅಂಗಡಿಗಳು ಎಷ್ಟು ; ಅವುಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಜಿಲ್ಲೆಗಳ ಪಡಿತರ ಪ್ರದೇಶದಲ್ಲಿ ಪ್ರತಿ ನ್ಯಾಯಬೆಲೆ ಅಂಗಡಿಯಿಂದ ಎಷ್ಟು ಬೋಗಸ್ ಕಾರ್ಡ್‌ಗಳನ್ನು ಗುರುತಿಸಲಾಗಿದೆ; (ಅಂಗಡಿವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ಪಡಿತರ ಚೀಟಿ ಬಯಸಿ ಎಷ್ಟು ಕುಟುಂಬಗಳು ಅರ್ಜಿ ಸಲ್ಲಿಸಿದ್ದಾರೆ, ಅವುಗಳ ಬಗ್ಗೆ ಈವರೆಗೆ ಕೈಗೊಂಡ ಕ್ರಮಗಳೇನು ? (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

# ಹೊರಗುತ್ತಿಗೆ ಆಧಾರದಲ್ಲಿ ಉಡುಪಿ ಜಿಲ್ಲೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಾರ್ಯನಿರ್ವಹಿಸುತ್ತಿರುವ ನೌಕರರುಗಳಿಗೆ EPF ಮತ್ತು ESI ಯನ್ನು ನೀಡದೆ ಇರುತ್ತಿರುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೨೪ (೮೮೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ಕಳೆದ ೫ ವರ್ಷಗಳಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಹೊರಗುತ್ತಿಗೆಯಾಧಾರದ ಮೇಲೆ ನೇಮಕಗೊಂಡು ಕಾರ್ಯನಿರ್ವಹಿಸುತ್ತಿರುವ ಗ್ರೂಪ್ 'ಡಿ' ಮತ್ತು ವಾಹನ ಚಾಲಕರುಗಳ EPF, ESI ಗಳನ್ನು ಸಂಬಂಧಿಸಿದವರ ಖಾತೆಗಳಿಗೆ ಜಮಾ ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಬಾಕಿ ಇರಿಸಿಕೊಂಡಿರುವ ಮೊತ್ತವೆಷ್ಟು ; ಇವುಗಳನ್ನು ನಿರ್ವಹಿಸುತ್ತಿರುವ ಹೊರಗುತ್ತಿಗೆ ಸಂಸ್ಥೆಯ ಹೆಸರು ಮತ್ತು ವಿಳಾಸವೇನು ; (ವರ್ಷವಾರು ನೌಕರರ ಹೆಸರು, ವಿಳಾಸ ಅವರಿಗೆ ಪಾವತಿಸಲು ಬಾಕಿ ಇರುವ ಮೊತ್ತದೊಂದಿಗೆ ವಿವರ ನೀಡುವುದು)

(ಇ) ಹೊರಗುತ್ತಿಗೆಯನ್ನು ಪಡೆದಿರುವ ಸಂಸ್ಥೆಗಳು ನೌಕರರ ಖಾತೆಗಳಿಗೆ ಎಪಿಎಫ್ ಮತ್ತು ಇಎಸ್‌ಪಿ ಮೊತ್ತಗಳನ್ನು ಸಮರ್ಪಕವಾಗಿ ಜಮಾ ಮಾಡದೆ ಇರುವುದರಿಂದ ನೌಕರರಿಗೆ ಆಗುತ್ತಿರುವ ತೊಂದರೆಗಳ ಪರಿಹಾರಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಹೊರಗುತ್ತಿಗೆಯಾಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರುಗಳಿಗೆ ಇಪಿಎಫ್ ಮತ್ತು ಇಎಸ್ಐ ನೀಡಲು ಬಾಕಿ ಇರಿಸಿಕೊಂಡಿರುವ ಹೊರಗುತ್ತಿಗೆ ಸಂಸ್ಥೆಗಳ ಮೇಲೆ ಶಾಸನ ಬದ್ಧವಾಗಿ ಕ್ರಿಮಿನಲ್ ಮೊಕದ್ದಮೆ ದಾಖಲಿಸದೆ ಇರಲು ಕಾರಣವೇನು ; ಜಿಲ್ಲೆಯ ಆರೋಗ್ಯ ಇಲಾಖಾಧಿಕಾರಿಗಳು ಹೊರಗುತ್ತಿಗೆ ಸಂಸ್ಥೆಯವರೊಂದಿಗೆ ಶಾಮೀಲಾಗಿರುವ ಸಾಧ್ಯತೆ ಇದೆಯೇ ; ಇಲ್ಲವಾದಲ್ಲಿ, ಕ್ರಿಮಿನಲ್ ಮೊಕದ್ದಮೆ ದಾಖಲಿಸದೆ ಇರತಕ್ಕಂತಹ ಅಧಿಕಾರಿಗಳ ಮೇಲೆ ಕ್ರಮ ತೆಗೆದುಕೊಳ್ಳಲಾಗುವುದೇ?

## ಬುದ್ಧಿಮಾಂದ್ಯ ವಿಕಲಚೇತನರಿಗೆ ವರಮಾನ ಮಿತಿಯಿಂದ ವಿನಾಯಿತಿಯ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೨೫ (೮೦೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದಿಂದ ಬುದ್ಧಿಮಾಂದ್ಯ ವಿಕಲಚೇತನ ವ್ಯಕ್ತಿಗಳಿಗೆ ನೀಡಲಾಗುತ್ತಿರುವ ಸವಲತ್ತುಗಳು ಯಾವುವು ; ಈ ಸವಲತ್ತುಗಳಿಗೆ ನಿಗಧಿಪಡಿಸಲಾದ ಅರ್ಹತೆಗಳು ಯಾವುವು ; (ಯೋಜನಾವಾರು ವಿವರ ಒದಗಿಸುವುದು)

(ಆ) ಬುದ್ಧಿಮಾಂದ್ಯ ವಿಕಲಚೇತನ ವ್ಯಕ್ತಿಗಳಿಗೆ ಸರ್ಕಾರದ ಸವಲತ್ತು ಪಡೆಯಲು ಆರ್ಥಿಕ ವರಮಾನವನ್ನು ಮಾನ ದಂಡವಾಗಿರಿಸಿರುವುದು ನಿಜವೇ ; ಪರರ ಮೇಲೆ ಅವಲಂಬಿತರಾಗಿರುವ ಮತ್ತು ಸಂಪೂರ್ಣ ಅಸಹಾಯಕರಾಗಿರುವ

ಈ ವ್ಯಕ್ತಿಗಳಿಗೆ ಆದಾಯ ಪ್ರಮಾಣ ಪತ್ರ ಪಡೆಯಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಮಾನವೀಯತೆಯ ದೃಷ್ಟಿಯಿಂದ ರಿಯಾಯಿತಿಯನ್ನು ನೀಡುವ ಬಗ್ಗೆ ಸರ್ಕಾರದ ಕ್ರಮವೇನು ?

## ಸರ್ಕಾರದ ಉಜ್ವಲ ಯೋಜನೆಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೨೬ (೮೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ 'ಉಜ್ವಲ' ಇಂಧನ ಯೋಜನೆಯಡಿ ಬಿ.ಪಿ.ಎಲ್ ಕುಟುಂಬಗಳಿಗೆ ಅಡುಗೆ ಅನಿಲ ನೀಡುವ ಬಗ್ಗೆ ಈವರೆಗೆ ಬೇಡಿಕೆ ಕೋರಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; ಮಂಜೂರಾತಿಯಾದ ಅರ್ಜಿಗಳ ಸಂಖ್ಯೆ ಎಷ್ಟು ; ಮಂಜೂರಾತಿಗೆ ಬಾಕಿಯಿದ್ದಲ್ಲಿ, ಕಾರಣವೇನು ; (ತಾಲ್ಲೂಕುವಾರು, ಗ್ರಾಮವಾರು ವಿವರ ನೀಡುವುದು)

(ಆ) ಉಜ್ವಲ ಯೋಜನೆಯ ಫಲಾನುಭವಿ ಆಯ್ಕೆಯ ಮಾನ ದಂಡವೇನು? (ಮಾರ್ಗಸೂಚಿ ಪ್ರತಿ ಒದಗಿಸುವುದು)

## ಸರ್ಕಾರದ ಯೋಜನೆಗಳಲ್ಲಿ ಆ್ಯಪ್ (app) ಬಳಕೆಯ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೨೭ (೮೦೮) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದ ಕಾರ್ಯಕ್ರಮಗಳಲ್ಲಿ ತಂತ್ರಜ್ಞಾನ ಅಳವಡಿಕೆಯ ನಿಟ್ಟಿನಲ್ಲಿ ಯೋಜನೆಗಳ ಮೇಲ್ವಿಚಾರಣೆಗೆ ಆ್ಯಪ್ (app) ಗಳನ್ನು ಬಳಸುತ್ತಿರುವುದು ನಿಜವೇ ; (ಕಳೆದ ೩ ವರ್ಷಗಳಲ್ಲಿ ಬಳಕೆಯಾದ ಆ್ಯಪ್‌ಗಳ (app) ಇಲಾಖಾವಾರು, ಯೋಜನಾವಾರು, ವರ್ಷಾವಾರು ವಿವರಣೆ ನೀಡುವುದು)

(ಆ) ಈ ಆ್ಯಪ್ (app) ಗಳಲ್ಲಿ NIC ಯಿಂದ ಅಭಿವೃದ್ಧಿಪಡಿಸಿದ ಹಾಗೂ ಹೊರ ಏಜೆನ್ಸಿಯಿಂದ ಅಭಿವೃದ್ಧಿಪಡಿಸಿದವುಗಳು ಯಾವುವು ; ಇದಕ್ಕೆ ತಗುಲಿದ ವೆಚ್ಚವೆಷ್ಟು ; (ಇಲಾಖಾವಾರು, ಏಜೆನ್ಸಿವಾರು, ವರ್ಷಾವಾರು ವಿವರ ನೀಡುವುದು)

(ಇ) ಒಂದು ಯೋಜನೆಯ ಒಂದೇ ಉದ್ದೇಶಕ್ಕೆ ಬೇರೆ ಬೇರೆ ಆ್ಯಪ್‌ಗಳನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಆ್ಯಪ್‌ಗಳಿಂದ ಪಡೆದ ಮಾಹಿತಿಯ ಗೌಪ್ಯತೆ ಮತ್ತು ಸಂರಕ್ಷಣೆಗೆ ಸರ್ಕಾರವು ಕೈಗೊಂಡ ಕ್ರಮವೇನು ?

## ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಿದ್ಯಾರ್ಥಿ ನಿಲಯಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೨೮ (೮೧೬) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩ರಿಂದ ೨೦೧೭ರವರೆಗೆ ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ/ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ಯೋಜನೆ ರೂಪಿಸಿರುವುದು ನಿಜವೇ ;

(ಆ) ಕಳೆದ ನಾಲ್ಕು ವರ್ಷದಲ್ಲಿ ಮೇಲಿನ ಬಾಬ್ತು ಒಟ್ಟು ಎಷ್ಟು ಹಣ ಬಿಡುಗಡೆ ಮಾಡಿದೆ ; ಎಷ್ಟು ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ/ವಿದ್ಯಾರ್ಥಿ ನಿಲಯಗಳ ಕಟ್ಟಡಗಳು ಪೂರ್ಣಗೊಂಡಿದೆ ? (ವರ್ಷಾವಾರು ವಿವರ ನೀಡುವುದು)

## ದೇವರಾಜ ಅರಸು ನಿಗಮದ ಯೋಜನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೨೯ (೮೧೭) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದೇವರಾಜ ಅರಸು ಅಭಿವೃದ್ಧಿ ನಿಗಮದಿಂದ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಸರ್ಕಾರ ನಿಯೋಜಿಸಿರುವ ಯೋಜನೆಗಳು ಯಾವುವು; (ಪೂರ್ಣ ವಿವರ ನೀಡುವುದು)

(ಆ) ಆ ಯೋಜನೆಗಳಿಗೆ ಕಳೆದ ೪ ವರ್ಷ ಅಂದರೆ ೨೦೧೩ ರಿಂದ ೨೦೧೭ರವರೆವಿಗೂ ಪ್ರತಿ ಯೋಜನೆಗಳಿಗೆ ಆಯವ್ಯಯದಲ್ಲಿ ಮೀಸಲಿಟ್ಟ ಹಣ ಎಷ್ಟು ; ಬಿಡುಗಡೆ ಮಾಡಿದ ಹಣ ಎಷ್ಟು ; ಭೌತಿಕವಾಗಿ ಖರ್ಚು ಮಾಡಿದ ಹಣ ಎಷ್ಟು ; ಫಲಾನುಭವಿಗಳ ಸಂಖ್ಯೆ ಎಷ್ಟು ? (ವರ್ಷಾವಾರು ಅಂಕಿ ಅಂಶ ನೀಡುವುದು)

## ಹಿಂದುಳಿದ ವರ್ಗಗಳ ಕಲ್ಯಾಣ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೩೦ (೮೧೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ಸಮುದಾಯ ಭವನ, ವಿದ್ಯಾರ್ಥಿನಿಲಯ ಹಾಗೂ ಗುರುಪೀಠ ಇವುಗಳಿಗೆ ಸರ್ಕಾರ ಅನುದಾನ ನೀಡುತ್ತಿರುವುದು ನಿಜವೇ ;

(ಆ) ಹಾಗಿದ್ದರೆ, ಕಳೆದ ೪ ವರ್ಷಗಳಲ್ಲಿ ಅಂದರೆ ೨೦೧೩ ರಿಂದ ೨೦೧೭ರವರೆಗೆ ಯಾವ ಯಾವ ಸಂಘ ಸಂಸ್ಥೆಗಳಿಗೆ ಎಷ್ಟೆಷ್ಟು ಹಣ ಬಿಡುಗಡೆ ಮಾಡಲಾಗಿದೆ ; ರಾಜ್ಯ ಮತ್ತು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ವಿಲೇವಾರಿಗೆ ಬಂದಿರುವ ಮನವಿಗಳ ಸಂಖ್ಯೆ ಎಷ್ಟು ; ವಿಲೇ ಮಾಡಿರುವ ಸಂಖ್ಯೆ ಎಷ್ಟು; ಬಾಕಿ ಇರುವ ಮನವಿಗಳ ಸಂಖ್ಯೆ ಎಷ್ಟು ; (ಮೇಲಿನ ವಿಷಯಗಳ ಬಗ್ಗೆ ಮನವಿ ಬಂದ ಸಮುದಾಯಗಳ ಮತ್ತು ಅನುದಾನ ಮಂಜೂರು ಹಾಗೂ ಅನುದಾನ ಬಿಡುಗಡೆ ಮಾಡಿರುವ ದಿನಾಂಕ ಮತ್ತು ವಿಲೇವಾರಿಗೆ ಬಾಕಿ ಇರುವ ಪೂರ್ಣ ವಿವರಗಳನ್ನು ಸಂಘ, ಸಂಸ್ಥೆವಾರು ಒದಗಿಸುವುದು) ಬಾಕಿ ಇಡಲು ಕಾರಣಗಳೇನು ;

(ಇ) ಅಖಿಲ ಕರ್ನಾಟಕ ಗಾಣಿಗರ ಸಂಘದಿಂದ 'ಸಮುದಾಯ ಭವನ' ನಿರ್ಮಾಣಕ್ಕೆ ಅನುದಾನ ಅಪೇಕ್ಷಿಸಿ ಮನವಿ ಮಾಡಿರುವುದು ನಿಜವೇ ; ಹಾಗಿದ್ದರೆ, ಇದುವರೆವಿಗೆ ಅನುದಾನ ಬಿಡುಗಡೆ ಮಾಡದಿರಲು ಕಾರಣವೇನು ?

## ಭಾಗ್ಯಲಕ್ಷ್ಮಿ ಯೋಜನೆಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೩೧ (೮೧೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರ ಭಾಗ್ಯಲಕ್ಷ್ಮಿ ಯೋಜನೆಯನ್ನು ಜಾರಿ ಮಾಡಿರುವುದು ನಿಜವೇ ; ಫಲಾನುಭವಿಗಳಿಗೆ ವಿಧಿಸಿರುವ ನಿಯಮಗಳೇನು ;

(ಆ) ೪ ವರ್ಷಗಳು ಅಂದರೆ ೨೦೧೩ ರಿಂದ ೨೦೧೭ರವರೆಗೆ ಸರ್ಕಾರ ಖರ್ಚು ಮಾಡಿರುವ ಒಟ್ಟು ಹಣ ಎಷ್ಟು ; ಫಲಾನುಭವಿಗಳ ಒಟ್ಟು ಸಂಖ್ಯೆ ಎಷ್ಟು ? (ವರ್ಷಾವಾರು ವಿವರ ಒದಗಿಸುವುದು)

## ಹಿಂದುಳಿದ ವರ್ಗಗಳಿಗೆ ಸರ್ಕಾರ ಜಾರಿ ಮಾಡಿರುವ ಯೋಜನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೩೨ (೮೧೯)) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೪ ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯಲ್ಲಿ ಹಿಂದುಳಿದ ವರ್ಗಗಳಿಗೆ ಸರ್ಕಾರ ಜಾರಿ ಮಾಡಿರುವ ಯೋಜನೆಗಳು ಯಾವುವು;

(ಆ) ಆ ಯೋಜನೆಗಳಿಗೆ ಆಯವ್ಯಯದಲ್ಲಿ ಮೀಸಲಿಟ್ಟ ಹಣ ಎಷ್ಟು; ಭೌತಿಕವಾಗಿ ಖರ್ಚು ಮಾಡಿರುವ ಹಣ ಎಷ್ಟು ; ಫಲಾನುಭವಿಗಳ ಸಂಖ್ಯೆ ಎಷ್ಟು ? (೨೦೧೪ ರಿಂದ ೨೦೧೭ ರವರೆಗೆ ವರ್ಷಾವಾರು, ಯೋಜನಾವಾರು ಮಾಹಿತಿ ನೀಡುವುದು)

## ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆ ಬಾವಿ ಕೊರೆಯಿಸುವ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೩೩ (೮೨೩) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಅಂಬೇಡ್ಕರ್ ಅಭಿವೃದ್ಧಿ ನಿಗಮ ಹಾಗೂ ವಾಲ್ಮೀಕಿ ಅಭಿವೃದ್ಧಿ ನಿಗಮಗಳಿಂದ ಎಷ್ಟು ಫಲಾನುಭವಿಗಳಿಗೆ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆಬಾವಿ ಕೊರೆಯಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಅವುಗಳಲ್ಲಿ ಸಫಲವಾಗಿರುವ ಹಾಗೂ ವಿಫಲವಾಗಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ಸಫಲವಾಗಿರುವ ಕೊಳವೆಬಾವಿಗಳಿಗೆ ವಿದ್ಯುತ್ ಸಂಪರ್ಕ ನೀಡಿರುವ ಕೊಳವೆಬಾವಿಗಳ ಸಂಖ್ಯೆ ಎಷ್ಟು; ವಿದ್ಯುತ್ ಸಂಪರ್ಕ ನೀಡದೆ ಇರುವ ಕೊಳವೆಬಾವಿಗಳ ಸಂಖ್ಯೆ ಎಷ್ಟು ; ಇದುವರೆಗೂ ವಿದ್ಯುತ್ ಸಂಪರ್ಕ ನೀಡದೆ ಇರಲು ಕಾರಣಗಳೇನು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಯೋಜನೆಯಡಿ ಇತರೆ ಜಾತಿಯವರಿಗೆ ಮತ್ತು ಹಿಂದುಳಿದ ವರ್ಗಗಳ ಜಾತಿಗಳ ಫಲಾನುಭವಿಗಳಿಗೆ ಕೊಳವೆ ಬಾವಿಗಳನ್ನು ಕೊರೆಯಿಸಿಕೊಳ್ಳುವ ಅವಕಾಶವಿದೆಯೇ ? (ಈ ಯೋಜನೆಯಡಿ ಯಾವ ಯಾವ ವರ್ಗದವರಿಗೆ ಅವಕಾಶವಿದೆ ಮಾಹಿತಿ ನೀಡುವುದು)

## ಧನಹಕ್ಕಿ ಆಹಾರದ ಅನುದಾನದ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೩೪ (೮೨೨) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲ್ಲೂಕಿನ ಧನಹಕ್ಕಿ ಆಹಾರದ ಗಿರಿಜನರ ಹಾಡಿಯಲ್ಲಿನ ಪರಿಶಿಷ್ಟ ಪಂಗಡದವರ

ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನ ಎಷ್ಟು ; ಯಾವ ಯಾವ ವರ್ಷ, ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ವರ್ಷಾವಾರು ವಿವರ ನೀಡುವುದು)

(ಆ) ಈ ಅನುದಾನವನ್ನು ಮೂಡಿಗೆರೆ ತಾಲ್ಲೂಕಿನ ಪರಿಶಿಷ್ಟ ಪಂಗಡದವರ ಅಭಿವೃದ್ಧಿಗೆ ಯಾವ ಯಾವ ಕಾಮಗಾರಿಗಳಿಗೆ ಹಂಚಿಕೆ ಮಾಡಲಾಗಿದೆ ; (ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ಅನುದಾನ ಹಂಚಿಕೆ ಮಾಡುವ ಸಂದರ್ಭದಲ್ಲಿ ಸರ್ಕಾರಿ ಆದೇಶವನ್ನು ಪಾಲನೆ ಮಾಡಲಾಗಿದೆಯೇ ; (ವಿವರ ನೀಡುವುದು)

(ಈ) ಹಂಚಿಕೆಯಾದ ಅನುದಾನಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆಯೇ ; ಹಾಗಿದ್ದರೆ, ಯಾವ ಆಧಾರದ ಮೇಲೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ; (ವಿವರ ನೀಡುವುದು)

(ಉ) ಈ ಅನುದಾನವನ್ನು ಹಂಚಿಕೆ ಮಾಡುವ ಸಂದರ್ಭದಲ್ಲಿ ಜನಪ್ರತಿನಿಧಿಗಳ ಸಭೆ ನಡೆಸಿ ಅವರ ಗಮನಕ್ಕೆ ತರಲಾಗಿದೆಯೇ?

## ಗಿರಿಜನರಿಗೆ ವಿತರಿಸುವ ಪೌಷ್ಠಿಕಾಂಶ ಆಹಾರದ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೩೫ (೮೨೧) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗಿರಿಜನರಿಗೆ ಪೌಷ್ಠಿಕಾಂಶ ಆಹಾರವನ್ನು ಯಾವ ವರ್ಷದಿಂದ ನೀಡಲಾಗುತ್ತಿದೆ ; ಇದರ ಮುಖ್ಯ ಉದ್ದೇಶವೇನು; (ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಪರಿಶಿಷ್ಟ ಪಂಗಡಗಳ ಕುಟುಂಬಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಪರಿಶಿಷ್ಠ ಪಂಗಡಗಳ ಕುಟುಂಬಗಳಿಗೆ ಯಾವ ಯಾವ ಪೌಷ್ಠಿಕಾಂಶ ಆಹಾರ ನೀಡಲಾಗುತ್ತಿದೆ ; ಒಂದು ಕುಟುಂಬಕ್ಕೆ ಎಷ್ಟು ಆಹಾರ ನೀಡಲಾಗುತ್ತಿದೆ ; (ವಿವರ ನೀಡುವುದು)

(ಈ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಆಹಾರವನ್ನು ಹೇಗೆ ಸಾಗಣೆ ಮಾಡಲಾಗುತ್ತಿದೆ, ಯಾವ ಇಲಾಖಾ ವತಿಯಿಂದ ವಿತರಣೆ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಉ) ಈ ಯೋಜನೆಯಡಿ ಚಿಕ್ಕಮಗಳೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಎಷ್ಟು ಕುಟುಂಬಗಳು ಒಳಪಡುತ್ತವೆ ; ಅವರುಗಳಿಗೆ ಎಷ್ಟು ಆಹಾರ ವಿತರಣೆ ಮಾಡಲಾಗುತ್ತಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ವಿದ್ಯಾರ್ಥಿಗಳ ವೇತನ ಬಾಕಿಯಿರುವ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೩೬ (೮೨೪) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖಾ ವತಿಯಿಂದ ವಿದ್ಯಾರ್ಥಿಗಳಿಗೆ ನೀಡುವ ವಿದ್ಯಾರ್ಥಿ ವೇತನ ಬಾಕಿ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಎಷ್ಟು ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನ ಬಾಕಿ ಇದೆ ; (ಜಿಲ್ಲಾವಾರು/ತಾಲ್ಲೂಕುವಾರು ವಿವರ ನೀಡುವುದು)

(ಇ) ಯಾವ ಯಾವ ಸಾಲಿನಿಂದ ವಿದ್ಯಾರ್ಥಿ ವೇತನ ಬಾಕಿ ಇದೆ ; ಬಾಕಿ ಇರಲು ಕಾರಣವೇನು ;

(ಈ) ಬಾಕಿ ಇರುವ ವಿದ್ಯಾರ್ಥಿ ವೇತನವನ್ನು ಬಿಡುಗಡೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ಬಯಲು ಸೀಮೆ ಅಭಿವೃದ್ಧಿ ಮಂಡಳಿಯ ಕಾರ್ಯ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೧೧೩೭ (೭೭೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯ ಬಯಲು ಸೀಮೆಯ ಅಭಿವೃದ್ಧಿ ಮಂಡಳಿಯ ವ್ಯಾಪ್ತಿಯಲ್ಲಿ ಬರುವ ತಾಲ್ಲೂಕುಗಳ ಸಂಖ್ಯೆ ಎಷ್ಟು ; ರಾಜ್ಯ ಸರ್ಕಾರವು ತೀವ್ರ ಬರಗಾಲದ ಹಿನ್ನೆಲೆಯಲ್ಲಿ ಬಯಲು ಸೀಮೆಯ ಅಭಿವೃದ್ಧಿ ಮಂಡಳಿಗೆ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ವಿಶೇಷ ಅನುದಾನ ಬಿಡುಗಡೆ ಮಾಡಿರುತ್ತದೆಯೇ ;

(ಆ) ಬಯಲು ಸೀಮೆಯ ಅಭಿವೃದ್ಧಿ ಮಂಡಳಿಯ ಒಂದು ವರ್ಷದ ಆಡಳಿತಾತ್ಮಕ ಎಷ್ಟು ಇದನ್ನು ಹೊರತುಪಡಿಸಿ ಅಭಿವೃದ್ಧಿಯ ಕಾಮಗಾರಿಗಳಿಗೆ ಬಿಡುಗಡೆ ಮಾಡಿರುವ ಹಣ ಎಷ್ಟು ;

(ಇ) ೨೦೧೬–೧೭ನೇ ಸಾಲಿನಲ್ಲಿ ಬಯಲು ಸೀಮೆಯ ಅಭಿವೃದ್ಧಿ ಮಂಡಳಿಯ ಎಷ್ಟು ಸಭೆಗಳು ನಡೆದಿರುತ್ತದೆ ; ಮಂಡಳಿಯ ಯೋಜನೆಗಳನ್ನು ಜಾರಿಗೊಳಿಸಲು ೨೦೧೬–೧೭ನೇ ಸಾಲಿನಲ್ಲಿ ವಿನಿಯೋಗಿಸಲಾಗಿರುವ ಹಣ ಎಷ್ಟು ; ೨೦೧೭–೧೮ನೇ ಸಾಲಿಗೆ ಎಷ್ಟು ಮೊತ್ತದ ಯೋಜನೆಗಳನ್ನು ತಯಾರಿಸಲಾಗಿದೆ ;

(ಈ) ಬಯಲು ಸೀಮೆಯ ಅಭಿವೃದ್ಧಿ ಮಂಡಳಿಯ ಲೆಕ್ಕ ಪತ್ರಗಳನ್ನು ಎಲ್ಲಿಯವರೆಗೆ ತಪಾಸಣೆಗೆ ಒಳಪಡಿಸಲಾಗಿದೆ ; ತಪಾಸಣೆಗೆ ಒಳಗಾಗಿದ್ದಲ್ಲಿ, ವರದಿಯಲ್ಲಿ ಯಾವುದಾದರೂ ಗುರುತರವಾದ ಲೋಪಗಳನ್ನು ಗುರುತಿಸಲಾಗಿದೆಯೇ ?

## ರಾಜ್ಯದ ಪ್ರಮುಖ ಆಸ್ಪತ್ರೆಗಳು, ಜಿಲ್ಲಾ ಆಸ್ಪತ್ರೆಗಳು ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ನಗದು ರಹಿತ ಪಾವತಿಯ ವ್ಯವಸ್ಥೆ ಕಲ್ಪಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೧೩೮ (೭೮೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರವು ನಗದು ರಹಿತ ಪಾವತಿಗೆ ಉತ್ತೇಜನ ನೀಡಿರುವ ಹಿನ್ನೆಲೆಯಲ್ಲಿ ರಾಜ್ಯದ ಪ್ರಮುಖ ಆಸ್ಪತ್ರೆಗಳು, ಜಿಲ್ಲಾಸ್ಪತ್ರೆ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ಸಾರ್ವಜನಿಕರಿಂದ ನಗದು ರಹಿತ ಚಿಕಿತ್ಸಾ ಶುಲ್ಕ ಪಾವತಿಗೆ ಯಾವ ರೀತಿಯ ಸೌಲಭ್ಯ ಕಲ್ಪಿಸಲಾಗಿದೆ ;

(ಆ) ಕೇಂದ್ರ ಸರ್ಕಾರದ ಶಿಫಾರಸ್ಸಿನಂತೆ, Online Banking, Unstructured Supplementary Service Data (USSD), Aadhar Enabled Payment System (AEPS) ಅಲ್ಲದೆ Net and transfer money via National Electronic Funds Transfer (NEFT), Real-Time Gross Settlement (RTGS) or Immediate Payment Service (IMPS) ಮೊದಲಾದ ರೀತಿ ಪಾವತಿಸಲು ಅವಕಾಶ ಕಲ್ಪಿಸಲಾಗಿದ್ದಲ್ಲಿ, ವಿವರ ನೀಡುವುದು ;

(ಇ) ಪ್ರಸ್ತುತ ಯಾವ ಆಸ್ಪತ್ರೆಗಳಲ್ಲಿ ಈ ಸೌಲಭ್ಯವಿರುತ್ತದೆ ; ಈ ರೀತಿ ನಗದು ರಹಿತ ಶುಲ್ಕ ಪಾವತಿಸುವ ಸೌಲಭ್ಯಗಳನ್ನು ಆಸ್ಪತ್ರೆಗಳಲ್ಲಿ ಜಾರಿ ತರಲು ಸರ್ಕಾರ ಮುಂದಾಗುವುದೇ ; ಇಲ್ಲವಾದಲ್ಲಿ, ಕಾರಣವೇನು ?

## ಬಿ.ಪಿ.ಎಲ್. ಕಾರ್ಡುದಾರರಿಗೆ ಪಡಿತರ ಬದಲು ನಗದು ಕೂಪನ್‌ಗಳನ್ನು ನೀಡಲು ಸರ್ಕಾರ ಮುಂದಾಗಿರುವ ಕುರಿತು.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೧೩೯ (೭೮೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿ.ಪಿ.ಎಲ್. ರೇಷನ್ ಕಾರ್ಡುದಾರರಿಗೆ ಪಡಿತರವರನ್ನು ಕಡಿಮೆ ವೆಚ್ಚದಲ್ಲಿ ನೀಡುವ ಬದಲು ನಗದು ಕೂಪನ್ ನೀಡಲು ಸರ್ಕಾರ ಮುಂದಾಗಿರುವುದು ನಿಜವೇ ; ಪ್ರತಿ ಫಲಾನುಭವಿಗಳಿಗೆ ಎಷ್ಟು ಹಣವನ್ನು ನೀಡಲು ಮುಂದಾಗಿದೆ ; ಇದನ್ನು ಹೇಗೆ ಪಾವತಿಸಲಾಗುವುದು ;

(ಆ) ಅಕ್ಕಿ ಮತ್ತು ಇತರೆ ಪಡಿತರಗಳನ್ನು ಸರ್ಕಾರದಿಂದ ಕೊಂಡು ಕೊಳ್ಳಲಾಗುತ್ತಿರುವ ಬೆಲೆ ಎಷ್ಟು ; ಬಿ.ಪಿ.ಎಲ್ ಕಾರ್ಡುದಾರರಿಗೆ ನೀಡಲಾಗುತ್ತಿರುವ ಬೆಲೆ ಎಷ್ಟು ; ಪ್ರತಿ ತಿಂಗಳು ಯಾವ ಯಾವ ಪಡಿತರವನ್ನು ಎಷ್ಟೆಷ್ಟು ಕಿಲೋಗ್ರಾಂ ನೀಡಲಾಗುತ್ತಿದೆ ;

(ಇ) ಒಟ್ಟಾರೆಯಾಗಿ ಒಬ್ಬ ಬಿ.ಪಿ.ಎಲ್ ಕಾರ್ಡುದಾರರಿಗೆ ತಿಂಗಳಿಗೆ ಸರ್ಕಾರವು ಈ ಹಿಂದೆ ವ್ಯಯಿಸುತ್ತಿದ್ದ ಹಣವೆಷ್ಟು ?

# ತುರ್ತು ಆರೋಗ್ಯ ಸೇವೆ ಒದಗಿಸುವ 108 ಆಂಬ್ಯುಲೆನ್ಸ್ ಸಿಬ್ಬಂದಿಗಳಿಗೆ ಭವಿಷ್ಯನಿಧಿ ಹಾಗೂ ಹೆಚ್ಚುವರಿ ಕೆಲಸದ ಭತ್ಯೆ ನೀಡುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೧೪೦ (೭೮೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ತುರ್ತು ಆರೋಗ್ಯ ಸೇವೆ ಒದಗಿಸುವ ೧೦೮ ಆಂಬ್ಯುಲೆನ್ಸ್ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ; ಅವರುಗಳಿಗೆ ನಿಗಧಿಪಡಿಸಲಾಗಿರುವ ಕೆಲಸದ ಅವಧಿ ಹಾಗೂ ನಿಯಮಗಳೇನು; (ವಿವರ ತಿಳಿಸುವುದು)

(ಆ) ಅವರುಗಳಿಗೆ ಸೂಚಿಸಲಾಗಿರುವ ಕೆಲಸ ಹಾಗೂ ಸಮಯಕ್ಕಿಂತ ಹೆಚ್ಚುವರಿಯಾಗಿ ಕೆಲಸ ಮಾಡುವ ಸಂದರ್ಭಗಳು ಇರುತ್ತವೆಯೇ; (ವಿವರ ನೀಡುವುದು)

(ಇ) ತುರ್ತು ಆರೋಗ್ಯ ಸೇವೆ ಒದಗಿಸುವ ೧೦೮ ಆಂಬ್ಯುಲೆನ್ಸ್ ಸಿಬ್ಬಂದಿಗೆ ನೀಡಲಾಗುತ್ತಿರುವ ಮಾಸಿಕ ವೇತನ ಹಾಗೂ ಇತರೆ ಅನುಕೂಲಗಳೇನು; (ವಿವರ ನೀಡುವುದು)

(ಈ) ಇವರುಗಳಿಗೆ ಭವಿಷ್ಯ ನಿಧಿ (P.F.) ಹಾಗೂ ಹೆಚ್ಚುವರಿ ಕೆಲಸದ ಭತ್ಯೆ (O.T) ನೀಡಲಾಗುತ್ತಿದೆಯೇ; ಇಲ್ಲವಾದಲ್ಲಿ, ಕಾರಣವೇನು;

(ಉ) ಸದರಿ ಸೇವೆಯ ಗುತ್ತಿಗೆದಾರರು ಕಂಪನಿಗೆ ಪಾವತಿಸುತ್ತಿರುವ ಸೇವಾ ಶುಲ್ಕ ಎಷ್ಟು; (ವಿವರ ತಿಳಿಸುವುದು) ಕಳೆದ ಮೂರು ವರ್ಷಗಳಲ್ಲಿ ವರ್ಷಕ್ಕೆ ಎಷ್ಟು ಹಣವನ್ನು ಪಾವತಿಸಲಾಗಿದೆ; ಎಷ್ಟು ಜನ ಇದರ ಪ್ರಯೋಜನ ಪಡೆದಿರುತ್ತಾರೆ? (ಸಂಕ್ಷಿಪ್ತ ವಿವರ ನೀಡುವುದು)

# ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯ ಆವರಣದಲ್ಲಿನ ನರ್ಸಿಂಗ್ ಕಾಲೇಜನ್ನು ಕೆಡುವುತ್ತಿರುವುದರಿಂದ, ವಿದ್ಯಾರ್ಥಿಗಳಿಗೆ ಪರ್ಯಾಯ ವ್ಯವಸ್ಥೆ ಮಾಡುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೧೪೧ (೭೮೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯ ಆವರಣದಲ್ಲಿರುವ ನರ್ಸಿಂಗ್ ಕಾಲೇಜಿನಲ್ಲಿ ಎಷ್ಟು ವಿದ್ಯಾರ್ಥಿ–ವಿದ್ಯಾರ್ಥಿನಿಯರು ವ್ಯಾಸಂಗ ಮಾಡುತ್ತಿದ್ದಾರೆ;

(ಆ) ಸದರಿ ಆಸ್ಪತ್ರೆಯ ಆವರಣದಲ್ಲಿ ನರ್ಸಿಂಗ್ ಕಾಲೇಜಿನ ಯಾವ ಯಾವ ವಿಭಾಗಗಳು ಹಾಗೂ ಅನುಕೂಲತೆಗಳನ್ನು ಒದಗಿಸುವ ಕಟ್ಟಡಗಳಿವೆ;

(ಇ) ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯು ವೈದ್ಯಕೀಯ ಕಾಲೇಜಾಗಿ ಮೇಲ್ದರ್ಜೆಗೇರುತ್ತಿರುವ ಕಾರಣದಿಂದಾಗಿ ಅಲ್ಲಿರುವ ನರ್ಸಿಂಗ್ ಕಾಲೇಜು ಕಟ್ಟಡಗಳನ್ನು ಕೆಡುವುತ್ತಿರುವುದು ನಿಜವೇ;

(ಈ) ನಿಜವಾಗಿದ್ದಲ್ಲಿ, ನರ್ಸಿಂಗ್ ಕಾಲೇಜಿನಲ್ಲಿ ತರಬೇತಿ ಹಾಗೂ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಯಾವ ರೀತಿಯ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ;

(ಉ) ನರ್ಸಿಂಗ್ ಕಾಲೇಜಿಗೆ ಪರ್ಯಾಯ ವ್ಯವಸ್ಥೆಮಾಡುವವರೆಗೆ ಕಟ್ಟಡ ಕೆಡುವ ಕಾರ್ಯವನ್ನು ಮುಂದೂಡಲು ಸಾಧ್ಯವಿಲ್ಲವೇ; ಇಲ್ಲವಾದಲ್ಲಿ, ಕಾರಣವೇನು?

## ಚಿತ್ರದುರ್ಗ ಜಿಲ್ಲೆಯ ಅಂಗನವಾಡಿಗಳ ಕುರಿತು

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೪೨ (೭೯೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಜಿಲ್ಲೆಯಲ್ಲಿ ಇರುವ ಅಂಗನವಾಡಿಗಳ ಸಂಖ್ಯೆ ಎಷ್ಟು; (ಮಾಹಿತಿ ಒದಗಿಸುವುದು)

(ಆ) ಇದರಲ್ಲಿ ಸ್ವಂತ ಕಟ್ಟಡ ಇರುವ ಅಂಗನವಾಡಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸ್ವಂತ ಕಟ್ಟಡ ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು? (ಮಾಹಿತಿ ಒದಗಿಸುವುದು)

## ದಾವಣಗೆರೆ ಜಿಲ್ಲಾ ಆಯುಷ್ ಇಂಟಿಗ್ರೇಟೆಡ್ ಆಸ್ಪತ್ರೆ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೪೩ (೭೯೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನ ಬಜೆಟ್‌ನಲ್ಲಿ ಘೋಷಿಸಿದ ಉದ್ದೇಶಿತ ದಾವಣಗೆರೆ ಜಿಲ್ಲಾ ಆಯುಷ್ ಇಂಟಿಗ್ರೇಟೆಡ್ ಆಸ್ಪತ್ರೆ ಕಾರ್ಯಾರಂಭವಾಗಿದೆಯೇ; (ಮಾಹಿತಿ ಒದಗಿಸುವುದು)

(ಆ) ಇಲ್ಲವಾದಲ್ಲಿ, ಯಾವ ಹಂತದಲ್ಲಿದೆ; ಕಾರ್ಯಾರಂಭ ಗೊಳ್ಳಲಿರುವುದು ಯಾವಾಗ? (ಮಾಹಿತಿ ಒದಗಿಸುವುದು)

## ಸ್ವಾಯತ್ತ ಸಂಸ್ಥೆಗಳಡಿ ಬರುವ ಶುಶ್ರೂಷಕರ ವರ್ಗಾವಣೆ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೪೪ (೭೯೪) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ವೈದ್ಯಕೀಯ ಕಾಲೇಜುಗಳು ಹಾಗೂ ವೈದ್ಯಕೀಯ ಇಲಾಖೆಯಡಿ ಬರುವ ಸ್ವಾಯತ್ತ ಸಂಸ್ಥೆಗಳಲ್ಲಿ ಶೂಶ್ರೂಷಕರಾಗಿ ಕಾರ್ಯನಿರ್ವಹಿಸುತ್ತಿರುವವರಿಗೆ ರಾಜ್ಯದ ಬೇರೆ ಬೇರೆ ಜಿಲ್ಲೆಗಳಲ್ಲಿರುವ ಸ್ವಾಯತ್ತ ಸಂಸ್ಥೆಗಳು ಹಾಗೂ ವೈದ್ಯಕೀಯ ಕಾಲೇಜುಗಳಿಗೆ ವರ್ಗಾವಣೆ ಮಾಡಲಾಗುತ್ತಿದೆಯೇ; (ಮಾಹಿತಿ ಒದಗಿಸುವುದು)

(ಆ) ಹಾಗಿದ್ದಲ್ಲಿ, ಅವರಿಗೆ ವರ್ಗಾವಣೆ ಮಾಡಲು ಸರ್ಕಾರ ರೂಪಿಸಿರುವ ಮಾರ್ಗಸೂಚಿಯೇನು? (ಮಾರ್ಗಸೂಚಿ ಪ್ರತಿಯನ್ನು ಒದಗಿಸುವುದು)

## ಜಿಲ್ಲಾ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಕಿರುಕುಳದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೪೫ (೮೧೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲಾ ಸರ್ಕಾರಿ ಆಸ್ಪತ್ರೆ ರೋಗಿಗಳಿಗೆ ಸರಿಯಾದ ಸೌಲಭ್ಯಗಳು ಇಲ್ಲದಿರುವುದು ಹಾಗೂ ರೋಗಿಗಳಿಗೆ ಸರಿಯಾದ ಚಿಕಿತ್ಸೆ ನೀಡದೇ ಆಸ್ಪತ್ರೆಯ ಸಿಬ್ಬಂದಿಗಳು ಕಿರುಕುಳ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಬೀದರ್ ಜಿಲ್ಲಾ ಸರ್ಕಾರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಸರಿಯಾದ ಸೌಲಭ್ಯಗಳನ್ನು ಒದಗಿಸಲು ಕೈಗೊಂಡಿರುವ ಕ್ರಮಗಳೇನು;

(ಇ) ಈ ಆಸ್ಪತ್ರೆಯಲ್ಲಿ ರೋಗಿಗಳಿಗೆ ಸಿಬ್ಬಂದಿಗಳು ಕಿರುಕುಳ ನೀಡಿರುವ ಎಷ್ಟು ಪ್ರಕರಣಗಳಿವೆ; ಈವರೆಗೆ ಇವರುಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರ ನೀಡುವುದು)

(ಈ) ಇದನ್ನು ತಡೆಗಟ್ಟಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

## ಅಂಗನವಾಡಿ ಕೇಂದ್ರಗಳಿಗೆ ಬಿಡುಗಡೆ ಮಾಡಿದ ಅನುದಾನ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೪೬ (೮೧೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪ್ರತಿ ಅಂಗನವಾಡಿ ಕೇಂದ್ರಗಳಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಪ್ರತಿ ಅಂಗನವಾಡಿ ಕೇಂದ್ರದ ನಿರ್ವಹಣೆಗಾಗಿ ತಿಂಗಳಿಗೆ ನೀಡಲಾಗುತ್ತಿರುವ ಅನುದಾನದ ಮೊತ್ತವೆಷ್ಟು; (ಕೇಂದ್ರವಾರು ಅಂಗನವಾಡಿಗಳ ವಿವರ ನೀಡುವುದು)

(ಇ) ಕಳೆದ ಎರಡು ವರ್ಷದಲ್ಲಿ ಬಿಡುಗಡೆ ಮಾಡಲಾಗುವ ಅನುದಾನದಲ್ಲಿ ಖರ್ಚು ಮಾಡಲಾದ ಮೊತ್ತವೆಷ್ಟು; (ಅಂಗನವಾಡಿ ಕೇಂದ್ರಗಳವಾರು ಸಂಪೂರ್ಣ ವಿವರ ನೀಡುವುದು)

(ಈ) ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ಆರೋಗ್ಯ ತಪಾಸಣೆಗಾಗಿ ವೈದ್ಯರನ್ನು ನೇಮಿಸಲಾಗಿದೆಯೇ;

(ಉ) ಹಾಗಿದ್ದಲ್ಲಿ, ಈ ವೈದ್ಯರುಗಳು ತಿಂಗಳಲ್ಲಿ ಎಷ್ಟು ಬಾರಿ ಅಂಗನವಾಡಿ ಕೇಂದ್ರಕ್ಕೆ ತಪಾಸಣೆಗಾಗಿ ಭೇಟಿ ನೀಡಿರುತ್ತಾರೆ; ಇವರನ್ನು ನೇಮಿಸುವ ಜವಾಬ್ದಾರಿಯನ್ನು ಹೊಂದಿರುವ ಅಧಿಕಾರಿ ಯಾರು? (ವಿವರ ನೀಡುವುದು)

## ಪ್ರವಾಸೋದ್ಯಮ ಇಲಾಖೆಗೆ ಬಿಡುಗಡೆಯಾದ ಹಣ ಮತ್ತು ವೆಚ್ಚದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೪೭ (೮೧೪) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪ ರಿಂದ ೨೦೧೭ನೇ ಸಾಲಿನವರೆಗಿನ ಆಯವ್ಯಯಗಳಲ್ಲಿ ಪ್ರವಾಸೋದ್ಯಮ ಇಲಾಖೆಗೆ ನಿಗಧಿಗೊಳಿಸಿದ್ದ, ಬಿಡುಗಡೆಯಾದ ಮತ್ತು ಬಳಕೆ ಮಾಡಲಾದ ಹಣವೆಷ್ಟು; (ವರ್ಷಾವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಯಾವ ಯಾವ ಬಾಬ್ತುಗಳಿಗೆ ಎಷ್ಟೆಷ್ಟು ಹಣವನ್ನು ವೆಚ್ಚ ಮಾಡಲಾಗಿದೆ;

(ಇ) ಯಾವ ಯಾವ ಪ್ರವಾಸೋದ್ಯಮ ಕೇಂದ್ರಗಳಿಗೆ ಈ ಅನುದಾನ ಬಳಸಲಾಗಿದೆ? (ಜಿಲ್ಲಾವಾರು ತಾಲ್ಲೂಕುವಾರು ವಿವರ ನೀಡುವುದು)

## ಮಹಿಳಾ ನಿಗಮದಿಂದ ನೀಡುತ್ತಿರುವ ಸೌಲಭ್ಯಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೪೮ (೮೧೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಮಹಿಳಾ ಅಭಿವೃದ್ಧಿ ನಿಗಮದಿಂದ ವಿವಿಧ ವರ್ಗದವರಿಗೆ ನೀಡಲಾಗುತ್ತಿರುವ ವೈಯಕ್ತಿಕ ಹಾಗೂ ಸಾಮೂಹಿಕ ಸೌಲಭ್ಯಗಳು ಯಾವುವು; (ಯೋಜನೆವಾರು ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಹೈದ್ರಾಬಾದ್–ಕರ್ನಾಟಕ ವ್ಯಾಪ್ತಿಯ ಜಿಲ್ಲೆಗಳಲ್ಲಿ ವಿವಿಧ ವರ್ಗದವರಿಗೆ ವಿವಿಧ ಯೋಜನೆಗಳಡಿಯಲ್ಲಿ ಎಷ್ಟು ಸೌಲಭ್ಯಗಳನ್ನು ವಿತರಿಸಲಾಗಿದೆ; ವಿವಿಧ ಯೋಜನೆಗಳಡಿಯಲ್ಲಿ ಬಾಕಿ ಉಳಿದಿರುವ ಅರ್ಜಿಗಳೆಷ್ಟು; ಅವುಗಳು ಯಾವುವು? (ಜಿಲ್ಲಾವಾರು, ಯೋಜನೆವಾರು ಸಂಪೂರ್ಣ ವಿವರ ನೀಡುವುದು)

## ಬೋಧಕ ಸಿಬ್ಬಂದಿ ವರ್ಗದವರ ಪದೋನ್ನತಿಯ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೪೯ (೮೧೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಯುಷ್ ಇಲಾಖೆಯ ಬೋಧಕ ಸಿಬ್ಬಂದಿ ವರ್ಗದವರ ಪದೋನ್ನತಿಯಲ್ಲಿ (ಸಹಾಯಕ ಪ್ರಾಧ್ಯಾಪಕರ ಹುದ್ದೆಯಿಂದ ಸಹ ಪ್ರಾಧ್ಯಾಪಕರ ಹುದ್ದೆಗೆ) ಹೈದ್ರಾಬಾದ್–ಕರ್ನಾಟಕ ೩೭೧(ಜೆ) ಅನ್ವಯ ರೋಸ್ಟರ್ ಪದ್ಧತಿಯನ್ನು ಅಳವಡಿಸಲಾಗಿದೆಯೇ;

(ಆ) ರೋಸ್ಟರ್ ಪಟ್ಟಿ ಮಾಡುವಾಗ ಸ್ಥಳೀಯ ವೃಂದ ಮತ್ತು ರಾಜ್ಯ ವೃಂದಗಳಿಗೆ ಪ್ರತ್ಯೇಕವಾಗಿ ಬಿಂದು ಆಧಾರಿತ ಪಟ್ಟಿ ಮಾಡಲಾಗಿದೆಯೇ;

(ಇ) ಮಾಡಿದ್ದಲ್ಲಿ, ಬೋಧಕ ವೃಂದದ ಕೆಳ ವೃಂದದಿಂದ ನಂತರ ವೃಂದದವರೆಗೆ ಅಳವಡಿಸಲಾಗಿದೆಯೇ? (ರೋಸ್ಟರ್ ಪಟ್ಟಿಯ ನಕಲು ಪಟ್ಟಿಯೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಆಯುರ್ವೇದ ಆಸ್ಪತ್ರೆಗಳಿಗೆ ಉತ್ತೇಜನ ನೀಡುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೫೦ (೭೬೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಆಯುಷ್ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಅಲ್ಲಿನ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಹಾಗೂ ಕೊಡುಗು ಜಿಲ್ಲೆಯಲ್ಲಿನ ತಾಲ್ಲೂಕುವಾರು ಆಸ್ಪತ್ರೆಗಳ ಹೆಸರುಗಳೊಂದಿಗೆ ವಿವರವಾದ ಮಾಹಿತಿ ನೀಡುವುದು)

(ಆ) ಕಳೆದ ನಾಲ್ಕು ವರ್ಷಗಳಲ್ಲಿ ಆಯುಷ್ ಇಲಾಖೆಗೆ ನೀಡಲಾದ ಅನುದಾನವೆಷ್ಟು; ಇದರಲ್ಲಿ ಔಷಧಿಗಾಗಿ ಖರ್ಚು ಮಾಡಲಾದ ಅನುದಾನ, ಔಷಧಿಯನ್ನು ಸರಬರಾಜು ಮಾಡಿದ ಕಂಪನಿಗಳು ಯಾವುವು; (ಕೊಡಗು ಜಿಲ್ಲೆಯಲ್ಲಿನ ಮಾಹಿತಿಯನ್ನು ಪ್ರತ್ಯೇಕ ನೀಡುವುದು)

(ಇ) ಇಲಾಖೆಯು ಪಾರಂಪರಿಕ ಔಷಧಿ ಸಸ್ಯಗಳನ್ನು ಬೆಳೆಸಲು ಯೋಜನೆಗಳನ್ನು ಹಮ್ಮಿಕೊಂಡಿದೆಯೇ? (ವಿವರ ನೀಡುವುದು)

## ಸಾಮಾನ್ಯ ವರ್ಗದ ಜನರಿಗೆ ಎಲ್.ಪಿ.ಜಿ. ಸಂಪರ್ಕ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೫೧ (೭೬೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಶ್ಚಿಮ ಘಟ್ಟದ ಸೂಕ್ಷ್ಮ ಅರಣ್ಯ ಪ್ರದೇಶಗಳು, ವನ್ಯಜೀವಿ ಅಭಯಾರಣ್ಯಗಳ ಸೂಕ್ಷ್ಮ ಪ್ರದೇಶಗಳಾದ ಚಾಮರಾಜನಗರ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ವಾಸಿಸುತ್ತಿರುವ ಸಾಮಾನ್ಯ ವರ್ಗದ ಎಷ್ಟು ಕುಟುಂಬಗಳಿಗೆ ಎಲ್.ಪಿ.ಜಿ. ಸಂಪರ್ಕ ಒದಗಿಸಲಾಗಿದೆ; ಇದಕ್ಕಾಗಿ ಎಷ್ಟು ಹಣವನ್ನು ಒದಗಿಸಲಾಗಿದೆ; (೨೦೧೬–೧೭ನೇ ಸಾಲಿನ ಆಯವ್ಯಯದಂತೆ ಮಾಹಿತಿ ನೀಡುವುದು)

(ಆ) ಈ ಎರಡು ಜಿಲ್ಲೆಗಳಲ್ಲಿ ಅವಶ್ಯವಿರುವ ಎಷ್ಟು ಕುಟುಂಬಗಳಿಗೆ ಎಲ್.ಪಿ.ಜಿ. ಸಂಪರ್ಕ ಒದಗಿಸುವ ಗುರಿಯನ್ನು ಹೊಂದಲಾಗಿದೆ; ಸದ್ಯ ಎಷ್ಟು ಸಂಪರ್ಕಗಳನ್ನು ಕಲ್ಪಿಸಿಕೊಡಲಾಗಿದೆ?

## ಸಮಾಜ ಕಲ್ಯಾಣ ಇಲಾಖೆಯಿಂದ ಜಾರಿ ಮಾಡಿದ ಯೋಜನೆಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೫೨ (೮೭೮) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಹಿಂದುಳಿದ ವರ್ಗಗಳಿಗೆ ಸರ್ಕಾರ ಮಾಡಿರುವ ಯೋಜನೆಗಳು ಯಾವುವು;

ಆ ಯೋಜನೆಗಳಿಗೆ ಆಯವ್ಯಯದಲ್ಲಿ ಮೀಸಲಿಟ್ಟ ಹಣವೆಷ್ಟು; ಭೌತಿಕ ಖರ್ಚು ಮಾಡಿರುವ ಹಣ ಎಷ್ಟು; (೩ ವರ್ಷಗಳ ವರ್ಷವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಫಲಾನುಭವಿಗಳ ಸಂಖ್ಯೆ ಎಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಇ) ಹಾವೇರಿ ಜಿಲ್ಲೆಗೆ ಮೀಸಲಿಟ್ಟ ಹಣವೆಷ್ಟು; ಭೌತಿಕ ಖರ್ಚು ಮಾಡಿರುವ ಹಣವೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ರಾಜ್ಯದಲ್ಲಿ ಸ್ವಾಸ್ಥ್ಯ ಭೀಮಾ ಯೋಜನೆಯ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೫೩ (೮೮೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಸ್ವಾಸ್ಥ್ಯ ಭೀಮಾ ಯೋಜನೆಯಡಿಯಲ್ಲಿ ರಾಜ್ಯದಲ್ಲಿ ಇದುವರೆಗೆ ಎಷ್ಟು ಫಲಾನುಭವಿಗಳಿಗೆ ನೋಂದಣಿ ಮಾಡಿಸಿ ಸ್ಮಾರ್ಟ್ ಕಾರ್ಡ್ ವಿತರಿಸಲಾಗಿದೆ; (ಹಾವೇರಿ ಜಿಲ್ಲೆಯ ತಾಲ್ಲೂಕುವಾರು ಮಾಹಿತಿಯನ್ನು ಒದಗಿಸುವುದು)

(ಆ) ಈ ಯೋಜನೆಯಲ್ಲಿ ಫಲಾನುಭವಿಗಳಿಗೆ ಸಿಗುವ ಸೌಲಭ್ಯಗಳೇನು;

(ಇ) ಈ ಯೋಜನೆಯ ಸೌಲಭ್ಯಗಳನ್ನು ಒದಗಿಸಲು ನೋಂದಾಯಿಸಲಾಗಿರುವ ಆಸ್ಪತ್ರೆಗಳು ಯಾವುವು ಹಾಗೂ ಯಾವ ಯಾವ ಆಸ್ಪತ್ರೆಗಳಲ್ಲಿ ಎಷ್ಟು ಫಲಾನುಭವಿಗಳಿಗೆ ಚಿಕಿತ್ಸೆ ಒದಗಿಸಲಾಗಿದೆ; (ಹಾವೇರಿ ಜಿಲ್ಲೆಯ ತಾಲೂಕುವಾರು ಮಾಹಿತಿ ಒದಗಿಸುವುದು)

(ಈ) ಈ ಯೋಜನೆಯಲ್ಲಿ ನೋಂದಾಯಿಸಲಾಗಿರುವ ಆಸ್ಪತ್ರೆಗಳಲ್ಲಿ ಫಲಾನುಭವಿಗಳಿಗೆ ಚಿಕಿತ್ಸೆ ನೀಡಲು ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಇಂತಹ ಆಸ್ಪತ್ರೆಗಳ ಮೇಲೆ ಸರ್ಕಾರ ಏನು ಕ್ರಮ ಕೈಗೊಂಡಿದೆ? (ವಿವರ ಒದಗಿಸುವುದು)

## ೨೦೧೩ರಿಂದ ಹಾವೇರಿ ಜಿಲ್ಲೆಯಲ್ಲಿ ಭಾಗ್ಯಲಕ್ಷ್ಮೀ ಯೋಜನೆ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೫೪ (೮೪೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩ ರಿಂದ ಹಾವೇರಿ ಜಿಲ್ಲೆಯಲ್ಲಿ ಭಾಗ್ಯಲಕ್ಷ್ಮೀ ಯೋಜನೆಯಡಿಯಲ್ಲಿ ಆಯ್ಕೆಯಾದ ಅರ್ಹ ಫಲಾನುಭವಿಗಳಿಗೆ ಭಾಗ್ಯಲಕ್ಷ್ಮೀ ಬಾಂಡ್ ದೊರೆಯದೆ ಫಲಾನುಭವಿಗಳು ತೊಂದರೆಗೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ೨೦೧೩ ರಿಂದ ಹಾವೇರಿ ಜಿಲ್ಲೆಯಲ್ಲಿ ಭಾಗ್ಯಲಕ್ಷ್ಮೀ ಯೋಜನೆಯಡಿಯಲ್ಲಿ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ; (ತಾಲ್ಲೂಕುವಾರು ಫಲಾನುಭವಿಗಳ ಹೆಸರು, ವಿಳಾಸ, ಸಹಿತ ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಇ) ಆಯ್ಕೆಯಾದ ಫಲಾನುಭವಿಗಳ ಪೈಕಿ ಎಷ್ಟು ಜನರಿಗೆ ಬಾಂಡ್ ನೀಡಲಾಗಿದೆ; ಇನ್ನು ಎಷ್ಟು ಜನರಿಗೆ ಬಾಂಡ್ ನೀಡುವುದು ಬಾಕಿ ಉಳಿದಿದೆ; ವಿಳಂಬಕ್ಕೆ ಕಾರಣವೇನು; ಈ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ತಾಲ್ಲೂಕುವಾರು ಸಂಪೂರ್ಣ ಮಾಹಿತಿಯನ್ನು ನೀಡುವುದು)

# ಮಲೆನಾಡು ಪ್ರದೇಶಾಭಿವೃದ್ಧಿ ಮತ್ತು ಬಯಲು ಪ್ರದೇಶಾಭಿವೃದ್ಧಿ ಅನುದಾನದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೫೫ (೮೪೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಮತ್ತು ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿಗಳ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳು ಯಾವುವು; ಈ ಜಿಲ್ಲೆಗಳಿಂದ ಆಯ್ಕೆಯಾದ ವಿಧಾನ ಪರಿಷತ್ ಸದಸ್ಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿಗೆ ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಮತ್ತು ಬಯಲು ಸೀಮೆ ಪ್ರದೇಶಾಭಿವೃದ್ಧಿ ಮಂಡಳಿಗಳಿಗೆ ಮಂಜೂರಾದ ಅನುದಾನ ಎಷ್ಟು; ಆ ಪೈಕಿ ಬಿಡುಗಡೆಯಾಗಿರುವ ಅನುದಾನ ಎಷ್ಟು; ಸದರಿ ಅನುದಾನದಲ್ಲಿ ವಿಧಾನ ಪರಿಷತ್ ಸದಸ್ಯರಿಗೆ ಹಂಚಿಕೆಯಾದ ಅನುದಾನ ಎಷ್ಟು (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಮಂಡಳಿಯ ವ್ಯಾಪ್ತಿಯಲ್ಲಿ ಬರುವ ವಿಧಾನ ಪರಿಷತ್ ಸದಸ್ಯರುಗಳು ತಮ್ಮ ಕ್ಷೇತ್ರದ ಅಭಿವೃದ್ಧಿ, ಅನುದಾನ ದೊರಕದೆ ವಂಚಿತರಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಅನುದಾನ ನೀಡದೇ ಇರಲು ಕಾರಣವೇನು. ಈ ತಾರತಮ್ಯವನ್ನು ನಿವಾರಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರವಾದ ಮಾಹಿತಿ ನೀಡುವುದು)

# ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದ ಎನ್.ಹೆಚ್.ಎಂ. ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಆಯುಷ್ ವೈದ್ಯರುಗಳ ಕುರಿತು

**ಶ್ರೀ ಎಸ್. ವ್ಹಿ ಸಂಕನೂರ (ಪದವೀಧರರ ಕ್ಷೇತ್ರ):–**

೧೧೫೬ (೮೫೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಆಯುಷ್ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು; (ಜಿಲ್ಲೆ, ತಾಲ್ಲೂಕು ಮತ್ತು ಇತರೆಡೆಯಲ್ಲಿರುವ ಆಸ್ಪತ್ರೆಗಳ ವಿವರ ನೀಡುವುದು)

(ಆ) ರಾಜ್ಯದಲ್ಲಿ ಆಯುಷ್ ಇಲಾಖೆ ಆಸ್ಪತ್ರೆಗಳಲ್ಲಿ ಎಷ್ಟು ವಯದ್ಯರುಗಳು ಕಾರ್ಯನಿರ್ವಹಿಸುತ್ತಿದ್ದಾರೆ; (ಜಿಲ್ಲಾವಾರು ತಾಲ್ಲೂಕುವಾರು ಪಟ್ಟಿ ನೀಡುವುದು)

(ಇ) ಆಯುರ್ವೇದಿಕ್ ಆಸ್ಪತ್ರೆಗಳನ್ನು ಹೊರತುಪಡಿಸಿ ಜಿಲ್ಲಾಸ್ಪತ್ರೆ, ತಾಲ್ಲೂಕು ಆಸ್ಪತ್ರೆ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಎಷ್ಟು ಜನ ಆಯುಷ್ ವೈದ್ಯರು ಕಾರ್ಯನಿರ್ವಹಿಸುತ್ತಿದ್ದಾರೆ; (ಜಿಲ್ಲೆ ಹಾಗೂ ತಾಲ್ಲೂಕುವಾರು ಪಟ್ಟಿ ನೀಡುವುದು)

(ಈ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಆಯುಷ್ ವೈದ್ಯರಲ್ಲಿ ರಾಜ್ಯ ಸರ್ಕಾರದ ಅನುದಾನದಲ್ಲಿ ನೇಮಕವಾದ ವೈದ್ಯರುಗಳ ಸಂಖ್ಯೆ ಎಷ್ಟು; ಈ ವೈದ್ಯರುಗಳಲ್ಲಿ ಆಯುರ್ವೇದ, ಯುನಾನಿ, ಹೋಮಿಯೋಪತಿ, ಯೋಗ ನ್ಯಾಚುರೋಪತಿ ಹಾಗೂ ಸಿದ್ದ ಪದವಿ ಹೊಂದಿದ ವೈದ್ಯರುಗಳೆಷ್ಟು; (ಪ್ರತ್ಯೇಕ ಪಟ್ಟಿ ನೀಡುವುದು)

(ಉ) ಅದರಂತೆ ಕೇಂದ್ರದ ಎನ್.ಹೆಚ್.ಎಂ. ಯೋಜನೆಯಡಿ ಎಷ್ಟು ಆಯುಷ್ ವೈದ್ಯರುಗಳನ್ನು ನೇಮಕ ಮಾಡಿಕೊಳ್ಳಲಾಗಿದೆ? (ಜಿಲ್ಲಾವಾರು ಪಟ್ಟಿ ನೀಡುವುದು)

## ಸರ್ಕಾರಿ ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಸಂಗೀತ ಶಿಕ್ಷಕರ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೫೭ (೮೭೬) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸರ್ಕಾರಿ ವಸತಿ ಶಿಕ್ಷಣ ಸಂಸ್ಥೆಗಳಿವೆ; ಅವು ಯಾವುವು; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಶಾಲೆಗಳಿಗೆ ಎಷ್ಟು ಸಂಗೀತ ಶಿಕ್ಷಕರನ್ನು ನೇಮಕ ಮಾಡಲಾಗಿದೆ; ಉಳಿದ ಶಾಲೆಗಳಿಗೆ ಯಾವ ಕಾಲಮಿತಿಯಲ್ಲಿ ಸಂಗೀತ ಶಿಕ್ಷಕರನ್ನು ನೇಮಕ ಮಾಡಲಾಗುವುದು; (ಜಿಲ್ಲಾವಾರು ವಿವರ ನೀಡುವುದು)

(ಇ) ನಾಲ್ಕು ವರ್ಷ ಕಳೆದರೂ ಬೋಧನೆಗೆ ಅಗತ್ಯವಾಗಿರುವ ಸಂಗೀತ ಪರಿಕರಗಳನ್ನು ವಿತರಣೆ ಮಾಡದಿರಲು ಕಾರಣವೇನು;

(ಈ) ವಸತಿ ಶಾಲೆಗಳಲಿ ಸಂಗೀತ ವಿದ್ಯಾರ್ಥಿಗಳಿಗೆ ಪರಿಕರವೇ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ವೈದ್ಯರ ಮೇಲೆ ಹಲ್ಲೆ ವಿಚಾರ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೫೮ (೮೭೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ವೈದ್ಯೋಪಚಾರ ಸಿಬ್ಬಂದಿ ಮೇಲೆ ಹಲ್ಲೆ, ಹಿಂಸಾಚಾರ, ಸಂಸ್ಥೆಯ ಮೇಲೆ ಮಾನಹಾನಿ ಮಾಡುವುದನ್ನು ನಿಷೇಧಿಸಿರುವ ಅಧಿನಿಯಮ ಜಾರಿಗೆ ಬಂದಿದ್ದರೂ, ಫಲಿತಾಂಶ ಶೂನ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಳೆದ ೩ ವರ್ಷದಲ್ಲಿ ಎಷ್ಟು ವೈದ್ಯರ ಮೇಲೆ ಹಲ್ಲೆ, ಪ್ರಕರಣಗಳು ದಾಖಲಾಗಿವೆ; (ಜಿಲ್ಲಾವಾರು ವಿವರ ನೀಡುವುದು)

(ಇ) ವೈದ್ಯರು ನಿರ್ಲಕ್ಷ್ಯ ತೋರಿದರೆ, ರೋಗಿಗಳು ಎಲ್ಲಿ ದೂರು ಸಲ್ಲಿಸಿ ಪರಿಹಾರ ಪಡೆಯಬಹುದು;

(ಈ) ವೈದ್ಯರ ಮೇಲಿನ ಹಲ್ಲೆ ತಡೆಯಲು ಸರ್ಕಾರ ತೆಗೆದುಕೊಮಡ ಕಠಿಣ ಕ್ರಮಗಳೇನು?

## ಕರ್ನಾಟಕ ವೈದ್ಯಕೀಯ ಮಂಡಳಿ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೫೫ (೮೭೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ವೈದ್ಯಕೀಯ ಮಂಡಳಿ (ಕೆಎಂಸಿ)ಯಲ್ಲಿ ನೋಂದಣಿ ಮಾಡಿಸಲು ಇರುವ ಮಾನದಂಡವೇನು;

(ಆ) ರಾಜ್ಯದಲ್ಲಿ ಒಟ್ಟು ಎಷ್ಟು ವೈದ್ಯರಿದ್ದಾರೆ; ಅವರು ಎಲ್ಲೆಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ;

(ಇ) ಇಲ್ಲಿಯವರೆಗೆ ಕೆಎಂಸಿಯಲ್ಲಿ ನೋಂದಣಿಯಾಗದೆ ಇರುವ ವೈದ್ಯರ ಸಂಖ್ಯೆ ಎಷ್ಟು; ನೋಂದಣಿಯಾಗದೆ ಇರುವ ವೈದ್ಯರ ವಿರುದ್ಧ ತೆಗೆದುಕೊಂಡ ಕ್ರಮಗಳೇನು;

(ಈ) ಪ್ರತಿ ವರ್ಷ ರಾಜ್ಯದಲ್ಲಿ ಪದವಿ ಪಡೆದು ಹೊರ ಬರುತ್ತಿರುವ ವೈದ್ಯರ ಸಂಖ್ಯೆ ಎಷ್ಟು; ಪ್ರತಿ ವಯದ್ಯರು ಕೆಎಂಸಿಯಲ್ಲಿ ನೋಂದಣಿ ಮಾಡುತ್ತಿದ್ದಾರೆಯೇ;

(ಉ) ಕೆಎಂಸಿ ಯಲ್ಲಿ ವೈದ್ಯರ ನೋಂದಣಿಗೆ ವಿಧಿಸಿರುವ ಶುಲ್ಕವೆಷ್ಟು;

(ಊ) ಕೆಎಂಸಿ ಯಲ್ಲಿ ಹಳೆಯ ಪದ್ಧತಿಯಿಂದ ಹೊರಬಂದು ಕಿಯೋನಿಕ್ಸ್‌ನಿಂದ ನೋಂದಣಿ ಮಾಡಲು ಸರ್ಕಾರ ಯೋಚಿಸಿದೆಯೇ; ಅದರ ರೂಪುರೇಷಗಳೇನು? (ವಿವರ ನೀಡುವುದು)

## ರಾಜ್ಯದ ಪ್ರತಿ ಜಿಲ್ಲೆಯಲ್ಲೂ ವೈದ್ಯಕೀಯ ಕಾಲೇಜು ಸ್ಥಾಪಿಸುವ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೧೬೦ (೮೦೧) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪ್ರತಿ ಜಿಲ್ಲೆಯಲ್ಲೂ ವೈದ್ಯಕೀಯ ಕಾಲೇಜನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕಿದೆಯೇ;

(ಆ) ಹಾಲಿ ಯಾವ್ಯಾವ ಜಿಲ್ಲೆಗಳಲ್ಲಿ ಎಷ್ಟೆಷ್ಟು ವೈದ್ಯಕೀಯ ಕಾಲೇಜುಗಳಿವೆ;

(ಇ) ಇವುಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೇ ಕಾರ್ಯ ನಿರ್ವಹಿಸದಿರುವ ಕಾಲೇಜುಗಳೆಷ್ಟು;

(ಈ) ಕಳೆದ ಸಾಲಿನ ಬಜೆಟ್‌ನಲ್ಲಿ ಪ್ರಕಟಿಸಿದ ಆರು ವೈದ್ಯ ಕಾಳೇಜುಗಳು ಇನ್ನೂ ಆರಂಭಗೊಳ್ಳದಿರಲು ಕಾರಣಗಳೇನು;

(ಉ) ಅವುಗಳ ಆರಂಭಗೊಳ್ಳಲು ಇರುವ ತೊಂದರೆಗಳನ್ನು ಸರ್ಕಾರವು ನಿವಾರಿಸುವ ದಿಸೆಯಲ್ಲಿ ಅಗತ್ಯ ಕ್ರಮಗಳನ್ನು ಕಯಗೊಳ್ಳಲಿದೆಯೇ;

(ಊ) ಈ ವರ್ಷದಲ್ಲಿ ಯಾವ್ಯಾವ ಜಿಲ್ಲೆಗಳಲ್ಲಿ ಹೊಸದಾಗಿ ವೈದ್ಯಕೀಯ ಕಾಲೇಜುಗಳನು ಸ್ಥಾಪಿಸಲು ಉದ್ದೇಶಿಸಲಾಗಿದೆ?

## ಬಾಲ್ಯ ವಿವಾಹ ತಡೆಗಟ್ಟುವ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೧೬೧ (೮೦೩) ಮಾನ್ಯ ಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ೧೮ನೇ ವಯಸ್ಸಿಗೆ ಮುನ್ನವೇ ಹೆಣ್ಣು ಮಕ್ಕಳು ಗರ್ಭಿಣಿಯರಾಗುತ್ತಿರುವುದು ನಿಜವೇ;

(ಆ) ಈ ಬಗ್ಗೆ ಮದರ್ ಅಂಡ್ ಚೈಲ್ಡ್ ಟ್ರ್ಯಾಕಿಂಗ್ ಸಿಸ್ಟಮ್‌ನಲ್ಲಿ ದಾಖಲಿಸಿರುವ ಅಂಕಿ ಅಂಶಗಳ ವಿವರಗಳನ್ನು ನೀಡುವುದು:

(ಇ) ಬಾಲ್ಯ ವಿವಾಹ ತತಡೆಗಟ್ಟಲು ಸರ್ಕಾರ ರೂಪಿಸಿರುವ ಕಾಯ್ದೆ / ನಿಯಮಾವಳಿಗಳೇನು; ಅವುಗಳನ್ನು ಸರ್ಕಾರ ಅನುಷ್ಠಾನಕ್ಕೆ ತರಲು ಇರುವ ತೊಂದರೆಗಳು ಮತ್ತು ಅವುಗಳ ನಿವಾರಣೋಪಾಯಗಳೇನು; (ವಿವರ ನೀಡುವುದು)

(ಈ) ೧೮ನೇ ವಯಸ್ಸಿಗೆ ಮುನ್ನ ಗರ್ಭ ಧರಿಸಿದ ಬಾಲಕಿಯರಲ್ಲಿ ಎಷ್ಟು ಜನಕ್ಕೆ ಹೆರಿಗೆಯಾಗಿದೆ; ಗರ್ಭಪಾತಗಳೇನಾದರೂ ನಡೆದಿವೆಯೇ?

## ಬೆಂಗಳೂರು ನಗರದಲ್ಲಿ ವರದಿಯಾದ ಹೆಚ್೧ಎನ್೧ ಪ್ರಕರಣಗಳ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು):–**

೧೧೬೨ (೮೦೨) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅದರಲ್ಲೂ ಬೆಂಗಳೂರು ನಗರದಲ್ಲಿ ವರದಿಯಾದ ಹೆಚ್1ಎನ್1 ಪ್ರಕರಣಗಳೆಷ್ಟು ; ಈ ರೋಗಕ್ಕೆ ಬಲಿಯಾದ ಜನರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಈ ರೋಗ ಉಲ್ಬಣಿಸಲು ಕಾರಣಗಳೇನು ;

(ಇ) ಈ ರೋಗ ಉಲ್ಬಣಿಸದಿರುವಂತೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ; ಅವುಗಳು ಪರಿಣಾಮಕಾರಿಯಾಗಿವೆಯೇ ?

## ರಾಜ್ಯದ ವೈದ್ಯಕೀಯ ಕಾಲೇಜುಗಳಲ್ಲಿ ಹೃದ್ರೋಗ ವಿಷಯದಲ್ಲಿ ಸೀಟುಗಳು ಭರ್ತಿಯಾಗದಿರುವ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) :–**

೧೧೬೩ (೮೦೪) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವೈದ್ಯಕೀಯ ಕಾಲೇಜುಗಳಲ್ಲಿ ಹೃದ್ರೋಗ ವಿಷಯವನ್ನು ಆಯ್ಕೆ ಮಾಡಿಕೊಂಡು ಓದುತ್ತಿರುವ ವೈದ್ಯಕೀಯ ವಿದ್ಯಾರ್ಥಿಗಳೆಷ್ಟು;

(ಆ) ರಾಜ್ಯದ ವೈದ್ಯಕೀಯ ಕಾಲೇಜುಗಳಲ್ಲಿ ಹೃದ್ರೋಗ ವಿಷಯದಲ್ಲಿ ಭರ್ತಿಯಾಗದೆ ಖಾಲಿ ಉಳಿದ ಸೀಟುಗಳೆಷ್ಟು ;

(ಇ) ರಾಜ್ಯದ ವೈದ್ಯಕೀಯ ಕಾಲೇಜುಗಳಲ್ಲಿ ಹೃದ್ರೋಗ ವಿಷಯದಲ್ಲಿ ಸೀಟುಗಳು ಭರ್ತಿಯಾಗದೆ ಉಳಿಯುವುದಕ್ಕೆ ಕಾರಣಗಳೇನು;

(ಈ) ಹೃದ್ರೋಗ ತಜ್ಞರಿಗೆ ನೀಡುತ್ತಿರುವ ವೇತನ ಪರಿಷ್ಕರಣೆ ಸಂಬಂಧ ಡಾ॥ ಸಿ.ಎನ್.ಮಂಜುನಾಥ್ ಅವರ ನೇತೃತ್ವದ ಸಮಿತಿ ವರದಿ ನೀಡಿದೆಯೇ ;

(ಉ) ಈ ವರದಿಯ ಪ್ರಮುಖ ಅಂಶಗಳೇನು ; ಈ ವರದಿ ಅನುಷ್ಠಾನಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಹೈದರಾಬಾದ್ ಮತ್ತು ಮುಂಬಯಿ ಕರ್ನಾಟಕ ಭಾಗದಲ್ಲಿ ಪ್ರವಾಸೋದ್ಯಮ ಕೇಂದ್ರಗಳು

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೧೧೬೪ (೮೨೭) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದರಾಬಾದ್ ಮತ್ತು ಮುಂಬಯಿ ಕರ್ನಾಟಕ ಭಾಗದ ಪ್ರದೇಶಗಳಲ್ಲಿ ಪ್ರಮುಖವಾಗಿ ಗುರುತಿಸಿರುವ ಪ್ರವಾಸೋದ್ಯಮ ಕೇಂದ್ರಗಳು ಯಾವುವು ;

(ಆ) ಅವುಗಳ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಸಂತ ಕನಕದಾಸರು ಮತ್ತು ಅವರ ಕರ್ಮಭೂಮಿ ಕಾಗಿನೆಲೆ ಅಭಿವೃದ್ಧಿ

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೧೧೬೫ (೮೨೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಂತ ಕನಕದಾಸರು ಮೂಲತ: ಯಾವ ಊರು/ಸಂಸ್ಥಾನಕ್ಕೆ ಸೇರಿದವರು ;

(ಆ) ಅವರ ಮೂಲ ಹೆಸರು ಏನು ; ಅವರು ಸಂತರು/ದಾಸರು ಆಗಿದ್ದು ; ಅವರು ರಚಿಸಿದ ಗ್ರಂಥಗಳು ಯಾವುವು ;

(ಇ) ಅವರು ರಚಿಸಿದ ಗ್ರಂಥಗಳನ್ನು ಜನಸಾಮಾನ್ಯರಿಗೆ ತಲುಪಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಅದಕ್ಕಾಗಿ ಎಷ್ಟು ಹಣವನ್ನು ನಿಗದಿ ಮಾಡಲಾಗಿದೆ ; (ವಿವರ ನೀಡುವುದು)

(ಈ) ಅವರ ಜನ್ಮಸ್ಥಳವಾದ ಬಾಡ ಹಾಗೂ ಕರ್ಮಭೂಮಿಯಾದ ಕಾಗಿನೆಲೆಯ ಅಭಿವೃದ್ಧಿಗಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಅದಕ್ಕಾಗಿ ಇದುವರೆಗೆ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ ಮತ್ತು ಮೀಸಲಿಟ್ಟಿರುವ ಒಟ್ಟು ಹಣವೆಷ್ಟು ? (ವಿವರ ನೀಡುವುದು)

## ಆನೆಗುಂದಿ ಸಂಸ್ಥಾನದ ಪಳಿಯುಳಿಕೆಗಳ ಸಂರಕ್ಷಣೆ

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೧೧೬೬ (೮೨೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯನಗರ ಸಾಮ್ರಾಜ್ಯ ಸ್ಥಾಪನೆಗೆ ಮೂಲ ಕಾರಣವಾದ ಆನೆಗುಂದಿ ಸಂಸ್ಥಾನದ ವಿಸ್ತೀರ್ಣವೆಷ್ಟು ; ಆ ಸಂಸ್ಥಾನದ ಪಾಳೆಗಾರರು ಯಾರು ಯಾರು ;

(ಆ) ಆ ಸಂಸ್ಥಾನದ ಕೋಟೆ, ಅರಮನೆ, ದೇವಸ್ಥಾನ ಇತ್ಯಾದಿ ಪಳಿಯುಳಿಕೆಗಳು ಎಷ್ಟು ಪ್ರದೇಶದಲ್ಲಿವೆ ; ಅವುಗಳು ಯಾರ ವಶದಲ್ಲಿವೆ ;

(ಇ) ಅವುಗಳ ಸಂರಕ್ಷಣೆಗಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ ?

## ದೇವದಾಸಿಯರ ಸಬಲೀಕರಣ

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೧೧೬೭ (೮೨೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇದುವರೆಗೆ ಒಟ್ಟು ಎಷ್ಟು ಮಂದಿ ದೇವದಾಸಿಯರನ್ನು ಗುರುತಿಸಲಾಗಿದೆ ; ಅವರುಗಳು ಯಾರು, ಯಾರು ; ಅವರುಗಳು ಎಲ್ಲೆಲ್ಲಿದ್ದಾರೆ ; (ವ್ಯಕ್ತಿವಾರು ವಿವರ ನೀಡುವುದು)

(ಆ) ಅವರ ಮೂಲ ಹೆಸರು ಏನು ; ಅವರು ಸಂತರು/ದಾಸರು ಆಗಿದ್ದು ; ಅವರು ರಚಿಸಿದ ಗ್ರಂಥಗಳು ಯಾವುವು ;

(ಇ) ಅವರು ರಚಿಸಿದ ಗ್ರಂಥಗಳನ್ನು ಜನ ಸಾಮಾನ್ಯರಿಗೆ ತಲುಪಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಅದಕ್ಕಾಗಿ ಎಷ್ಟು ಹಣವನ್ನು ನಿಗದಿ ಮಾಡಲಾಗಿದೆ ; (ವಿವರ ನೀಡುವುದು)

(ಈ) ಅವರ ಜನ್ಮಸ್ಥಳವಾದ ಬಾಡ ಹಾಗೂ ಕರ್ಮಭೂಮಿಯಾದ ಕಾಗಿನೆಲೆಯ ಅಭಿವೃದ್ಧಿಗಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಅದಕ್ಕಾಗಿ ಇದುವರೆಗೆ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ ಮತ್ತು ಮೀಸಲಿಟ್ಟಿರುವ ಒಟ್ಟು ಹಣವೆಷ್ಟು ? (ವಿವರ ನೀಡುವುದು)

## ವೀರ ಯೋಧನ ಸ್ಮಾರಕ ನಿರ್ಮಾಣ

**ಶ್ರೀ ವಿ.ಎಸ್.ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೧೧೬೮ (೮೨೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸ್ವಾತಂತ್ರ್ಯ ವೀರ ಸೇನಾನಿ ಸಿಂಧೂರ ಲಕ್ಷ್ಮಣನ ಹುಟ್ಟೂರು ಮತ್ತು ಹುತಾತ್ಮರಾದ ಸ್ಥಳ ಯಾವುದು ;

(ಆ) ಆ ಸ್ಥಳಗಳಲ್ಲಿ ವೀರ ಯೋಧನ ಸ್ಮರಣಾರ್ಥವಾಗಿ ಸ್ಮಾರಕಗಳ ನಿರ್ಮಾಣ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಯಾವ ಸ್ಥಳದಲ್ಲಿ ಮತ್ತು ಎಷ್ಟು ವೆಚ್ಚದಲ್ಲಿ ನಿರ್ಮಿಸಲಾಗಿದೆ ; (ವಿವರ ನೀಡುವುದು)

(ಇ) ಆ ವೀರ ಸೇನಾನಿಯ ವಂಶಸ್ಥರು ಇಂದಿಗೂ ಯಾರಾದರೂ ಇದ್ದಾರೆಯೇ ; ಇದ್ದಲ್ಲಿ ಎಲ್ಲಿದ್ದಾರೆ ; ಅವರುಗಳಿಗೆ ಸರ್ಕಾರದಿಂದ ಯಾವುದಾದರೂ ವಿಶೇಷ ಸೌಲಭ್ಯಗಳನ್ನು ನೀಡಲಾಗಿದೆಯೇ ; ನೀಡಿದ್ದಲ್ಲಿ, ಮಾಹಿತಿ ನೀಡುವುದು ?

## ಸಾಹಿತ್ಯ ಅಕಾಡೆಮಿಗಳಿಗೆ ಬಿಡುಗಡೆಯಾದ ಅನುದಾನ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೯೯ (೮೩೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸಾಹಿತ್ಯ ಅಕಾಡೆಮಿಗಳ ಸಂಖ್ಯೆ ಎಷ್ಟು ; ಅವು ಯಾವುವು ; (ಹೆಸರು, ವಿಳಾಸ ಮತ್ತು ಸ್ಥಾಪನೆಯಾದ ವರ್ಷ ಸೇರಿದಂತೆ ಸಂಪೂರ್ಣ ವಿವರ ನೀಡುವುದು)

(ಆ) ೨೦೧೩–೧೪ರಿಂದ ಇಲ್ಲಿಯವರೆಗೆ ಸದರಿ ಅಕಾಡೆಮಿಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; ಖರ್ಚಾದ ಅನುದಾನವೆಷ್ಟು; (ವರ್ಷವಾರು, ಅಕಾಡೆಮಿವಾರು ಸಂಪೂರ್ಣ ವಿವರ ನೀಡುವುದು)

(ಇ) ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ಬಿಡುಗಡೆಯಾದ ಅನುದಾನವನ್ನು ಯಾವ ಚಟುವಟಿಕೆ/ಕಾರ್ಯಗಳಿಗೆ ವಿನಿಯೋಗಿಸಲಾಗಿದೆ ? (ವರ್ಷವಾರು ಅಕಾಡೆಮಿವಾರು ಸಂಪೂರ್ಣ ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿನ ಪ್ರವಾಸಿ ತಾಣಗಳಿಗೆ ಬಿಡುಗಡೆಯಾದ ಅನುದಾನ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೭೦ (೮೩೫) ಮಾನ್ಯ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಪ್ರವಾಸೋದ್ಯಮ ಇಲಾಖೆ ಗುರುತಿಸಿರುವ (ಒಟ್ಟು) ಪ್ರವಾಸಿ ತಾಣಗಳೆಷ್ಟು ; (ಹೆಸರು, ವಿಳಾಸವಾರು ಪಟ್ಟಿಯನ್ನು ತಾಲ್ಲೂಕುವಾರು ನೀಡುವುದು)

(ಆ) ಸದರಿ ಪ್ರವಾಸೋದ್ಯಮ ತಾಣಗಳ ಅಭಿವೃದ್ಧಿಗೆ ೨೦೧೨–೧೩ರಿಂದ ಇಲ್ಲಿಯವರೆಗೆ ಸರಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; ಹಾಗೂ ಖರ್ಚಾದ ಅನುದಾನವೆಷ್ಟು ; (ವರ್ಷವಾರು, ತಾಣವಾರು ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಅನುದಾನದಲ್ಲಿ ಕೈಗೊಂಡ ಕಾಮಗಾರಿ/ಕಾರ್ಯಕ್ರಮಗಳೇನು? (ವರ್ಷವಾರು, ತಾಣವಾರು ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಪಡಿತರ ಚೀಟಿಗಳ ವಿತರಣೆ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೭೧ (೮೩೭) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ಕೊಡಗು ಜಿಲ್ಲೆಯಲ್ಲಿ ಪಡಿತರ ಚೀಟಿ ಕೋರಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಅರ್ಜಿಗಳಲ್ಲಿ ಈಗಾಗಲೇ ವಿತರಣೆಯಾಗಿರುವ ಪಡಿತರ ಚೀಟಿಗಳು ಎಷ್ಟು ; ಸ್ವೀಕೃತವಾದ ಅರ್ಜಿಗಳಲ್ಲಿ ತಿರಸ್ಕೃತಗೊಂಡ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ವಿತರಣೆಯಾಗಬೇಕಿರುವ ಪಡಿತರ ಚೀಟಿಗಳ ಸಂಖ್ಯೆ ಎಷ್ಟು ; ಹಾಗೂ ಈ ಚೀಟಿಗಳನ್ನು ವಿತರಿಸಲು ಇರುವ ಕಾಲಮಿತಿ ಏನು? (ಸಂಪೂರ್ಣ ವಿವರ ನೀಡುವುದು)

## ಬೀದರ್ ಜಿಲ್ಲೆಯ ಅಂಬೇಡ್ಕರ್ ಭವನಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೭೨ (೮೪೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಅಂಬೇಡ್ಕರ್ ಭವನ ಹಾಗೂ ಬಾಬು ಜಗಜೀವನ್‌ರಾಮ್ ಭವನಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಆ) ಈ ಭವನ ನಿರ್ಮಿಸಲು ಸರ್ಕಾರ ೨೦೧೫–೧೬ನೇ ಸಾಲಿನಲ್ಲಿ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಭವನಗಳ ಕಾಮಗಾರಿಯು ಪೂರ್ಣಗೊಂಡಿದೆಯೇ ; ಹಾಗಿದ್ದಲ್ಲಿ, ತಾಲ್ಲೂಕುವಾರು ವಿವರ ನೀಡುವುದು ?

## ಬೀದರ್ ವೈದ್ಯಕೀಯ (ಬ್ರಿಮ್ಸ್) ಕಾಲೇಜಿನ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೭೩ (೮೪೩) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ವೈದ್ಯಕೀಯ (ಬ್ರಿಮ್ಸ್) ಕಾಲೇಜಿನಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಆ) ಖಾಲಿಯಿರುವ ಹುದ್ದೆಗಳ ನೇಮಕಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಹೊರ ಗುತ್ತಿಗೆ ಆಧಾರದ ಮೇಲೆ ನೇಮಕವಾದವರ ಸಂಖ್ಯೆ ಎಷ್ಟು ; ಅವರಿಗೆ ತಿಂಗಳಿಗೆ ಖರ್ಚು ಮಾಡುತ್ತಿರುವ ಮೊತ್ತ ಎಷ್ಟು ; (ವಿವರ ನೀಡುವುದು)

(ಇ) ೨೦೧೫-೧೬ನೇ ಹಾಗೂ ೨೦೧೬-೧೭ನೇ ಸಾಲಿನಲ್ಲಿ ವೈದ್ಯಕೀಯ ಕಾಲೇಜಿನ ಅಭಿವೃದ್ಧಿಗಾಗಿ ಸರ್ಕಾರ ನೀಡಿರುವ ಅನುದಾನ ಎಷ್ಟು ; ಅನುದಾನ ಸಮರ್ಪಕವಾಗಿ ಬಳಕೆಯಾಗಿದೆಯೇ ?

## ಸಾಂಸ್ಕೃತಿಕ ಭವನ ನಿರ್ಮಾಣ

**ಶ್ರೀ ರಾಮಪ್ಪ ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೭೪ (೭೬೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಾಗಲಕೋಟೆ ಜಿಲ್ಲೆಯಲ್ಲಿ ೨೦೧೩ರಿಂದ ಇಲ್ಲಿಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಎಷ್ಟು ಸಾಂಸ್ಕೃತಿಕ ಭವನಗಳಿಗೆ ಮಂಜೂರಾತಿ ಮಾಡಲಾಗಿದೆ ;

(ಆ) ಮುಧೋಳ ತಾಲ್ಲೂಕಿನಲ್ಲಿ ಯಾವ ಯಾವ ಗ್ರಾಮಗಳಲ್ಲಿ ಸಾಂಸ್ಕೃತಿಕ ಭವನಗಳನ್ನು ನಿರ್ಮಾಣ ಮಾಡಲಾಗಿದೆ ;

(ಇ) ಮುಧೋಳ ತಾಲ್ಲೂಕಿನಲ್ಲಿ ಎಷ್ಟು ಸಾಂಸ್ಕೃತಿಕ ಭವನಗಳ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿವೆ ? (ವಿವರಣೆ ನೀಡುವುದು)

## ಬೆಳಗಾವಿ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಬಗ್ಗೆ

**ಶ್ರೀ ವಿವೇಕ್‌ರಾವ್ ವಸಂತ್‌ರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೭೫ (೭೬೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿ ಇರುವ ಒಟ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪ್ರತಿ ಎಷ್ಟು ಜನಸಂಖ್ಯೆಗೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪಿಸಲಾಗುತ್ತಿದೆ ; ಜನರ ಪ್ರಮಾಣಕ್ಕನುಗುಣವಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆಯೇ ;

(ಇ) ಬೆಳಗಾವಿ ಜಿಲ್ಲೆಯಲ್ಲಿ ಅವಶ್ಯವಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ; ಯಾವ ಗ್ರಾಮಗಳಲ್ಲಿ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ? (ಗ್ರಾಮವಾರು ವಿವರ ನೀಡುವುದು)

## ಚಾಮರಾಜನಗರ ಜಿಲ್ಲೆಯ ವೈದ್ಯರ ವೈದ್ಯಕೀಯ ಸಿಬ್ಬಂದಿಯ ಕೊರತೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೭೬ (೭೮೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಜಿಲ್ಲೆಯಲ್ಲಿರುವ ತಾಲ್ಲೂಕು ಆಸ್ಪತ್ರೆಗಳು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಈ ಆಸ್ಪತ್ರೆಗಳು ಮತ್ತು ಪ್ರಾಥಮಿಕ ಮತ್ತು ಆರೋಗ್ಯ ಕೇಂದ್ರಗಳಿಗೆ ಮಂಜೂರಾಗಿರುವ ತಜ್ಞವೈದ್ಯರು, ವೈದ್ಯಾಧಿಕಾರಿಗಳು,

ಪ್ಯಾರಾಮೆಡಿಕಲ್, ಸಿಬ್ಬಂದಿ, ಗ್ರೂಪ್–ಡಿ ನೌಕರರುಗಳ ಸಂಖ್ಯೆ ಎಷ್ಟು ;

(ಇ) ಹಾಲಿ ಸೇವೆ ಸಲ್ಲಿಸುತ್ತಿರುವ, ಖಾಲಿ ಇರುವ ವೈದ್ಯಕೀಯ ಮತ್ತು ಅರೆವೈದ್ಯಕೀಯ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಪ್ರತಿಯೊಂದು ಆಸ್ಪತ್ರೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ವಿವರ ಒದಗಿಸುವುದು)

(ಈ) ಈ ಹುದ್ದೆಗಳನ್ನು ಭರ್ತಿ ಮಾಡಿ ಜನರಿಗೆ ಸಮರ್ಪಕ ಆರೋಗ್ಯ ವ್ಯವಸ್ಥೆಯನ್ನು ಒದಗಿಸಲು ಕೈಗೊಂಡಿರುವ ಕ್ರಮಗಳೇನು ?

## ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ವಸತಿ ಶಾಲೆಗಳಲ್ಲಿ ಅಡುಗೆ ಸಹಾಯಕರ ಕೊರತೆ ಬಗ್ಗೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೭೭ (೭೮೮) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿರುವ ಸಮಾಜ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಇಲಾಖೆಯ ವಸತಿ ಶಾಲೆಗಳ ವಿದ್ಯಾರ್ಥಿ/ವಿದ್ಯಾರ್ಥಿನಿಯರ ನಿಲಯಗಳಿಗೆ ಮಂಜೂರಾಗಿರುವ ಅಡುಗೆಯವರು, ಅಡುಗೆ ಸಹಾಯಕರು ಮತ್ತು ಕಾವಲುಗಾರರ ಹುದ್ದೆಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ; ಎಷ್ಟು ಹುದ್ದೆಗಳು ಖಾಲಿ ಇವೆ ;

(ಆ) ಖಾಲಿ ಇರುವ ಅಡುಗೆಯವರು, ಅಡುಗೆ ಸಹಾಯಕರು ಕಾವಲುಗಾರರ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು ?

## ಚಾಮರಾಜನಗರ ಜಿಲ್ಲೆಯ ಮೊರಾರ್ಜಿ ವಸತಿ ಶಾಲೆಗಳ ಬಗ್ಗೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೭೮ (೭೯೦) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ ಜಿಲ್ಲೆಯಲ್ಲಿರುವ ಮೊರಾರ್ಜಿ ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಆ ಪೈಕಿ ಸ್ವಂತ ಕಟ್ಟಡಗಳಲ್ಲಿ ನಡೆಯುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಶಾಲೆಗಳ ಸಂಖ್ಯೆ ಎಷ್ಟು ; ಪಾವತಿಸಲಾಗುತ್ತಿರುವ ಬಾಡಿಗೆ ದರ ಎಷ್ಟು ;

(ಆ) ಮೊರಾರ್ಜಿ ವಸತಿ ಶಾಲೆ ಕಟ್ಟಡಗಳ ಕಾಮಗಾರಿ ಪ್ರಗತಿ ಯಾವ ಹಂತದಲ್ಲಿದೆ ; (ಕಾಮಗಾರಿವಾರು ವಿವರ ನೀಡುವುದು) ಈ ಕಾಮಗಾರಿಗಳು ಮುಕ್ತಾಯಗೊಳ್ಳುವುದು ಯಾವಾಗ ; ಈ ಯೋಜನೆಗಳಿಗೆ ಒದಗಿಸಿರುವ ಅನುದಾನ, ಖರ್ಚಾಗಿರುವ ಅನುದಾನ, ಇನ್ನೂ ಬೇಕಾಗಿರುವ ಅನುದಾನ ಎಷ್ಟು ;

(ಇ) ಜಿಲ್ಲೆಯ ಮೊರಾರ್ಜಿ ವಸತಿ ಶಾಲೆಗಳಿಗೆ ಮಂಜೂರಾಗಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯ ಸಂಖ್ಯೆ ಎಷ್ಟು ; ಆ ಪೈಕಿ ಭರ್ತಿಯಾಗಿರುವ ಹುದ್ದೆಗಳು ಎಷ್ಟು ; ಖಾಲಿ ಇರುವ ಹುದ್ದೆಗಳು ಎಷ್ಟು ; ಸದರಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ;

(ಈ) ಜಿಲ್ಲೆಯ ಇನ್ನೂ ಎಷ್ಟು ಹೋಬಳಿ ಕೇಂದ್ರಗಳಲ್ಲಿ ಮೊರಾರ್ಜಿ ವಸತಿ ಶಾಲೆಯನ್ನು ಆರಂಭಿಸಲು ಸ್ವೀಕೃತವಾಗಿರುವ ಪ್ರಸ್ತಾವನೆಗಳು ಎಷ್ಟು ; ಈ ಶಾಲೆಗಳನ್ನು ಪ್ರಾರಂಭಿಸಲು ಕ್ರಮ ತೆಗೆದು ಕೊಳ್ಳಲಾಗುವುದು ಯಾವಾಗ ?

# ಹೈದ್ರಾಬಾದ್ – ಕರ್ನಾಟಕ ಪ್ರದೇಶಾಭಿವೃದ್ಧಿ ವ್ಯಾಪ್ತಿಯಲ್ಲಿ ಬರುವ ಸ್ಥಳೀಯ ಸಂಸ್ಥೆಗಳ ಚುನಾಯಿತ ವಿಧಾನ ಪರಿಷತ್ತು ಸದಸ್ಯರಿಗೆ ಅನುದಾನ ನೀಡುವ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೭೯ (ಲಿಖಿತ) ಮಾನ್ಯ ಯೋಜನೆ ಕಾರ್ಯಕ್ರಮ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಮಾನ್ಯ ಲೋಕಸಭಾ ಸದಸ್ಯರು ಹಾಗೂ ಶಾಸಕರಿಗೆ ಕ್ಷೇತ್ರವಾರು ಕಾಮಗಾರಿಗಳನ್ನು ನೀಡಲು ಅನುದಾನವನ್ನು ಕಾಯ್ದಿರಿಸಲಾಗಿದ್ದು, ಅದರಂತೆ ೨೦೧೭–೧೮ನೇ ಸಾಲಿನಲ್ಲಿ ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ವ್ಯಾಪ್ತಿಯಲ್ಲಿ ಬರುವ ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದ ವಿಧಾನ ಪರಿಷತ್ ಸದಸ್ಯರುಗಳಿಗೂ ಕೂಡಾ ಕಾಮಗಾರಿಗಳಿಗೆ ಅನುದಾನವನ್ನು ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದರೆ, ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ವ್ಯಾಪ್ತಿಯಲ್ಲಿ ಬರುವ ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದ ವಿಧಾನ ಪರಿಷತ್ ಸದಸ್ಯರುಗಳಿಗೆ ಪ್ರಸಕ್ತ ಸಾಲಿನಿಂದಲೇ ಅನುದಾನ ಕಾಯ್ದಿರಿಸಲಾಗುವುದೇ ;

(ಇ) ಇಲ್ಲದಿದ್ದಲ್ಲಿ, ಕಾರಣವೇನು ? (ಸಂಪೂರ್ಣ ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಹಾಸ್ಟೆಲ್‌ಗಳ ಬಗ್ಗೆ

**ಶ್ರೀ ಬಿ.ಜೆ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೮೦ (೮೫೫) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಗಳ ಅಡಿಯಲ್ಲಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; (ಸಂಪೂರ್ಣ ವಿಳಾಸ ಸಹಿತ ವಿವರ ನೀಡುವುದು) ಅವುಗಳಲ್ಲಿ ಎಷ್ಟು ಹಾಸ್ಟೆಲ್‌ಗಳು ಸರ್ಕಾರದ ಕಟ್ಟಡದಲ್ಲಿವೆ ಮತ್ತು ಎಷ್ಟು ಹಾಸ್ಟೆಲ್‌ಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ; (ವಿಳಾಸ ಸಹಿತ ಪೂರ್ಣ ವಿವರ ನೀಡುವುದು)

(ಆ) ಸದರಿ ಜಿಲ್ಲೆಗಳಿಗೆ ಸರ್ಕಾರದಿಂದ ಮಂಜೂರು ಮಾಡಲಾಗಿರುವ ಹೊಸ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಎಷ್ಟು ಹಾಸ್ಟೆಲ್‌ಗಳ ಕಾಮಗಾರಿ ಪ್ರಾರಂಭವಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಆ ಪೈಕಿ ಎಷ್ಟು ಸರ್ಕಾರಿ ವಸತಿ ನಿಲಯಗಳು ಶಿಥಿಲಾವಸ್ಥೆಯಲ್ಲಿವೆ; ಅವುಗಳ ದುರಸ್ಥಿಗಾಗಿ ಸರ್ಕಾರದಿಂದ ಯಾವ ಯಾವ ಸಾಲಿನಲ್ಲಿ ಎಷ್ಟೆಷ್ಟು ಹಣ ಬಿಡುಗಡೆಯಾಗಿದೆ ; ಎಷ್ಟು ವಸತಿ ನಿಲಯಗಳ ಕಾಮಗಾರಿಗಳನ್ನು ಪ್ರಾರಂಭಿಸಲಾಗಿದೆ ಮತ್ತು ಪ್ರಾರಂಭವಾಗದ ಕಾಮಗಾರಿಗಳು ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೮೧ (೭೫೯) ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆಯಲ್ಲಿರುವ ಮೊರಾರ್ಜಿ ದೇಸಾಯಿ ಮತ್ತು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ಸಂಖ್ಯೆಯೆಷ್ಟು ; ಈ ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಯೆಷ್ಟು ; (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ವಿವರಗಳನ್ನು ನೀಡುವುದು)

(ಆ) ಈ ವಸತಿ ಶಾಲೆಗಳ ಪೈಕಿ ಎಷ್ಟು ವಸತಿ ಶಾಲೆಗಳು ಸ್ವಂತ ಕಟ್ಟಡಗಳ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ; (ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ನೀಡುವುದು)

(ಇ) ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಿಗೆ ಸರ್ಕಾರ ನೀಡುತ್ತಿರುವ ಬಾಡಿಗೆ ಮೊತ್ತವೆಷ್ಟು ; (ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಈ ವಸತಿ ಶಾಲೆಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಪ್ರತಿ ನಿಲಯಗಳಿಗೆ ಎಷ್ಟು ಪ್ರಮಾಣದ ಅನುದಾನವನ್ನು ನಿಗಧಿಪಡಿಸಿ ಬಿಡುಗಡೆ ಮಾಡಲಾಗಿದೆ ? (ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ನೀಡುವುದು)

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅನುದಾನದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೮೨ (೮೪೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಕಳೆದ ನಾಲ್ಕು ವರ್ಷಗಳಲ್ಲಿ ಕಾಯ್ದಿರಿಸಿದ, ಬಿಡುಗಡೆಯಾದ, ಖರ್ಚಾದ ಅನುದಾನವೆಷ್ಟು ;

(ಆ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳಾವುವು ; ಅದಕ್ಕಾಗಿ ಖರ್ಚಾದ ಅನುದಾನವೆಷ್ಟು ;

(ಇ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸಾಂಸ್ಕೃತಿಕ ಸಂಘ ಸಂಸ್ಥೆಗಳಿಗೆ, ವಾದ್ಯ ಪರಿಕರ, ವೇಷಭೂಷಣ ಖರೀದಿಗೆ, ಶಿಲ್ಪಕಲಾ ಮತ್ತು ಚಿತ್ರಕಲಾ ಪ್ರದರ್ಶನಕ್ಕೆ, ಎಂ.ಫಿಲ್., ಪಿ.ಹೆಚ್.ಡಿ.ಗೆ ಸಹಾಯಧನ ಪಡೆಯಲು ಬಿಡುಗಡೆಯಾದ ಮತ್ತು ಖರ್ಚಾದ ಅನುದಾನವೆಷ್ಟು ; ಅನುದಾನ ಬಿಡುಗಡೆ ಮಾಡಲು ಇರುವ ಮಾನದಂಡಗಳೇನು ; ಮಾನದಂಡದಿಂದ ವಿನಾಯಿತಿ ನೀಡಿ ಅನುದಾನ ಬಿಡುಗಡೆ ಮಾಡಿರುವ ಪ್ರಕರಣಗಳೆಷ್ಟು ; (ಕಳೆದ ನಾಲ್ಕು ವರ್ಷದ ವಿವರ ನೀಡುವುದು)

(ಈ) ಕಳೆದ ನಾಲ್ಕು ವರ್ಷಗಳಲ್ಲಿ ಸಹಾಯಧನ ಪಡೆದ ಸಾಂಸ್ಕೃತಿಕ ಸಂಘ ಸಂಸ್ಥೆಗಳು, ವಾದ್ಯ ಪರಿಕರ, ವೇಷಭೂಷಣ ಖರೀದಿ, ಶಿಲ್ಪಕಲಾ ಮತ್ತು ಚಿತ್ರಕಲಾ ಪ್ರದರ್ಶನ, ಎಂ.ಫಿಲ್., ಪಿ.ಹೆಚ್.ಡಿ. ಫಲಾನುಭವಿಗಳ ಸಂಖ್ಯೆ ಎಷ್ಟು ? (ವಿಳಾಸ, ವರ್ಷಾವಾರು ವಿವರದೊಂದಿಗೆ ಪೂರ್ಣ ಮಾಹಿತಿ ನೀಡುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0287/800 ಪ್ರತಿಗಳು/10–03–2017